# ಡಾ|| ರಾಜ್‌ಕುಮಾರ್ ಅಕಾಡೆಮಿ ಬೆಂಗಳೂರು

ಡಾ|| ರಾಜ್‌ಕುಮಾರ್ ಕುಟುಂಬದವರ ಕೊಡುಗೆ

# ವಾರದ ಸುದ್ದಿ ಸಂಕಲನ

## ಸ್ಪಷ್ಟ ಮತ್ತು ಸಮಗ್ರ ವಿದ್ಯಮಾನಗಳು



## ಸೆಪ್ಟೆಂಬರ್ ೩ನೇ ವಾರ

15-09-2025 TO 20-09-2025

ಸಗಟು ಹಣದುಬ್ಬರ ಏರಿಕೆ

‘ವಂತಾರ’ಕ್ಕೆ ಎಸ್‌ಐಟಿ ಕ್ಲೀನ್‌ಚಿಟ್

ಬಿಪಿಎಲ್ ಅನರ್ಹಗೊಂಡರೆ ಎಪಿಎಲ್

ವಕ್ಫ್ (ತಿದ್ದುಪಡಿ) ಕಾಯ್ದೆ–2025

## ❖ 'ಸಹಜೀವನ ಬಳಿಕ ಮದುವೆಗೆ ನಿರಾಕರಿಸಿದರೆ ಅಪರಾಧವಲ್ಲ'

ಸಂದರ್ಭ: ಸಹಜೀವನದಲ್ಲಿದ್ದು ನಾಲ್ಕು ವರ್ಷ ಒಪ್ಪಿತ ದೈಹಿಕ ಸಂಬಂಧ ಹೊಂದಿದ ಬಳಿಕ ಮದುವೆಯಾಗುವು ದಕ್ಕೆ ಪುರುಷನೊಬ್ಬ ನಿರಾಕರಿಸಿದಲ್ಲಿ ಅದು ಗಂಭೀರ ಅಪರಾಧವಾಗು ವುದಿಲ್ಲ ಎಂದು ಅಲಹಾಬಾದ್ ಹೈಕೋರ್ಟ್ ಹೇಳಿದೆ.

- 'ಸರಿ- ತಪ್ಪುಗಳನ್ನು ನಿರ್ಧರಿಸಬಲ್ಲ ಸಾಮರ್ಥ್ಯ ವಿರುವ ವಯಸ್ಕರಿಬ್ಬರು ಹಲವು ವರ್ಷ ಸಹಜೀವನ ನಡೆಸುತ್ತಿದ್ದರೆ, ಅವರು ಅಂತಹ ಸಂಬಂಧವನ್ನು ಸ್ವ ಇಚ್ಛೆಯಿಂದ ಆಯ್ಕೆ ಮಾಡಿಕೊಂಡಿರುತ್ತಾರೆ ಹಾಗೂ ಅದರಿಂದಾಗುವ ಪರಿಣಾಮಗಳ ಕುರಿತು ಅವರಿಗೆ ಅರಿವು ಇರುತ್ತದೆ ಎಂದೇ ಊಹಿಸಬೇಕಾಗುತ್ತದೆ' ಎಂದು ನ್ಯಾಯಮೂರ್ತಿ ಅರುಣಕುಮಾರ್ ಸಿಂಗ್ ದೇಶವಾಲ್ ಅವರು ಇದ್ದ ಪೀಠ ಹೇಳಿದೆ.
- ಸಹಜೀವನ ಸಂಗಾತಿ ಯಾಗಿದ್ದ ಪುರುಷನ ವಿರುದ್ಧ ಅತ್ಯಾಚಾರ ಆರೋಪ ಹೊರಿಸಿ ಮಹಿಳೆ ಸಲ್ಲಿಸಿದ್ದ ಮೇಲ್ಮನವಿ ತಿರಸ್ಕರಿಸಿದ ವೇಳೆ, ಪೀಠ ಈ ಅಭಿಪ್ರಾಯ ವ್ಯಕ್ತಪಡಿಸಿದೆ.
- 'ಮದುವೆ ಮಾಡಿಕೊಳ್ಳುವ ಭರವಸೆ ಇದ್ದ ಕಾರಣವೇ ಒಪ್ಪಿತ ಸಂಬಂಧಕ್ಕೆ ಸಮ್ಮತಿಸಿದ್ದೆ ಎಂಬ ವಾದವನ್ನು ಒಪ್ಪಿಕೊಳ್ಳಲು ಸಾಧ್ಯ ಇಲ್ಲ' ಎಂದು ಸೆಪ್ಟೆಂಬರ್ 8ರಂದು ಹೊರಡಿಸಿರುವ ಆದೇಶದಲ್ಲಿ ಪೀಠ ಹೇಳಿದೆ.
- ಒಪ್ಪಿತ ಸಂಬಂಧದಲ್ಲಿದ್ದ ಪುರುಷನ ವಿರುದ್ಧ ತಾನು ನೀಡಿದ್ದ ದೂರನ್ನು ಮಹೋಬಾ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯ ತಿರಸ್ಕರಿಸಿ ಕಳೆದ ವರ್ಷ ಆಗಸ್ಟ್ 17ರಂದು ಆದೇಶಿಸಿತ್ತು. ಇದನ್ನು ಪ್ರಶ್ನಿಸಿ ಮಹಿಳೆ ಮೇಲ್ಮನವಿ ಸಲ್ಲಿಸಿದ್ದರು.

## ❖ ಜೈವಿಕ ತಂತ್ರಜ್ಞಾನ ಸಂಶೋಧನೆಗೆ ವರದಾನ

**ಸಂದರ್ಭ:** ಇಪ್ಪತ್ತೊಂದನೇ ಶತಮಾನವನ್ನು ಜ್ಞಾನ ಮತ್ತು ವಿಜ್ಞಾನದ ಶತಮಾನ ಎಂದು ಕರೆಯಲಾಗುತ್ತಿದೆ. ಇದಕ್ಕೆ ಪೂರಕವಾಗಿ, ಬಯೊಟೆಕ್ನಾಲಜಿ ಅಥವಾ ಜೈವಿಕ ತಂತ್ರಜ್ಞಾನ ಕ್ಷೇತ್ರವು ಬೆಳೆಯುತ್ತಿದೆ.

- ಮಾನವ ಜೀವನದ ಗುಣಮಟ್ಟ ಸುಧಾರಣೆ, ಆಹಾರ ಭದ್ರತೆ, ಆರೋಗ್ಯ ಸಂರಕ್ಷಣೆ, ಪರಿಸರ ಸಂರಕ್ಷಣೆ, ಕೈಗಾರಿಕಾ ಉತ್ಪಾದನೆಯಂತಹ ಕ್ಷೇತ್ರಗಳಲ್ಲಿ ಜೈವಿಕ ತಂತ್ರಜ್ಞಾನವು ಕ್ರಾಂತಿಯನ್ನು ಉಂಟುಮಾಡುತ್ತಿದೆ.
- ಈ ತಂತ್ರಜ್ಞಾನದಲ್ಲಿನ ಸಂಶೋಧನೆ ವಿವಿಧ ದಿಕ್ಕುಗಳಲ್ಲಿ ಸಾಗುತ್ತಿದೆ. ಜೆನೆಟಿಕ್ ಎಂಜಿನಿಯರಿಂಗ್, ಮಾಲಿಕ್ಯುಲಾರ್ ಬಯಾಲಜಿ , ಅಗ್ರಿಕಲ್ಚರಲ್ ಬಯೊಟೆಕ್ನಾಲಜಿ, ಫಾರ್ಮಸ್ಯೂಟಿಕಲ್ ಬಯೊಟೆಕ್ನಾಲಜಿ, ಇಂಡಸ್ಟ್ರಿಯಲ್ ಬಯೊಪ್ರೋಸೆಸಸ್ ಹಾಗೂ ಎನ್‌ವಿರಾನ್‌ಮೆಂಟಲ್ ಬಯೊಟೆಕ್ನಾಲಜಿ ಪ್ರಮುಖವಾಗಿವೆ. ಉದಾಹರಣೆಗೆ, ಜೆನೆಟಿಕ್ ಎಂಜಿನಿಯರಿಂಗ್ ಮೂಲಕ ತಳಿ ಪರಿವರ್ತಿತ ಬೆಳೆಗಳು (ಜೆನೆಟಿಕಲಿ ಮಾಡಿಫೈಡ್ ಕ್ರಾಪ್ಸ್) ಅಭಿವೃದ್ಧಿಯಾಗಿದ್ದು, ಅವು ಹೆಚ್ಚಿನ ಉತ್ಪಾದನೆ, ಕೀಟ ನಿರೋಧಕತೆಗೆ ಕಾರಣವಾಗಿವೆ. ಆರೋಗ್ಯ ಕ್ಷೇತ್ರದಲ್ಲಿ, ಕೃತಕ ಇನ್ಸುಲಿನ್ ಉತ್ಪಾದನೆ, ಲಸಿಕೆಗಳ ತಯಾರಿಕೆಯು ಜೈವಿಕ ತಂತ್ರಜ್ಞಾನ ಸಂಶೋಧನೆಯ ಫಲ. ಜಿನೋಮ್ ತಿದ್ದುಪಡಿ ತಂತ್ರಜ್ಞಾನವು ವೈದ್ಯಕೀಯ ರಂಗದಲ್ಲಿ ನವೀನ ಸಂಶೋಧನೆಯ ದಿಕ್ಕನ್ನು ತೋರಿಸುತ್ತಿದೆ.
- ಬಿ.ಇ/ಬಿ.ಟೆಕ್‌ನಿಂದ ಹಿಡಿದು ಸ್ನಾತಕೋತ್ತರ , ಪಿಎಚ್.ಡಿ. ಹಂತದವರೆಗೂ ವಿದ್ಯಾರ್ಥಿಗಳು ಆಳವಾದ ಸಂಶೋಧನೆಯಲ್ಲಿ ತೊಡಗಿಕೊಳ್ಳಬಹುದಾಗಿದೆ. ಪ್ರಾಜೆಕ್ಟ್ ಕಾರ್ಯ, ಪ್ರಯೋಗಾಲಯ ಸಂಶೋಧನೆ, ಕೈಗಾರಿಕಾ ತರಬೇತಿ, ಇಂಟರ್ನ್‌ಶಿಪ್‌ನಂತಹವುಗಳ ಮೂಲಕ ತಾಂತ್ರಿಕ ಕೌಶಲವನ್ನು ಪಡೆಯಬಹುದಾಗಿದೆ. ಇದರ ಜೊತೆಗೆ, ಸಮಸ್ಯೆ ಪರಿಹಾರ ಸಾಮರ್ಥ್ಯ, ತಂಡದಲ್ಲಿ ಕೆಲಸ ಮಾಡುವ

Dr. Rajkumar IAS/KAS Academy

ಗುಣ, ಸಂವಹನ ಕೌಶಲ, ನೈತಿಕ ಹೊಣೆಗಾರಿಕೆ ಎಲ್ಲವೂ ಸದೃಢಗೊಳ್ಳುತ್ತವೆ. ಜೊತೆಗೆ ಸಮಾಜಮುಖಿ ಕೊಡುಗೆ ನೀಡಲು ಸಹ ಸಾಧ್ಯವಾಗಿದೆ.

**ಉದ್ಯೋಗಾವಕಾಶ: ದೇಶೀಯ ಹಾಗೂ ಅಂತರರಾಷ್ಟ್ರೀಯ ಮಟ್ಟದಲ್ಲಿ ಅನೇಕ ಅವಕಾಶಗಳು ತೆರೆದಿವೆ.**

**1.ಆರೋಗ್ಯ ಕ್ಷೇತ್ರ**- ಔಷಧ ಕಂಪನಿಗಳು, ಲಸಿಕೆ ತಯಾರಿಕಾ ಘಟಕಗಳು, ಕ್ಲಿನಿಕಲ್ ಸಂಶೋಧನಾ ಸಂಸ್ಥೆಗಳು.

**2.ಕೃಷಿ ಕ್ಷೇತ್ರ**- ಬೀಜ ಉತ್ಪಾದನಾ ಕಂಪನಿಗಳು, ಸಸ್ಯ ಸಂಶೋಧನಾ ಕೇಂದ್ರಗಳು, ಆಹಾರ ಸಂಸ್ಕರಣಾ ಕೈಗಾರಿಕೆಗಳು.

**3.ಪರಿಸರ ನಿರ್ವಹಣೆ**- ಜಲಶುದ್ಧೀಕರಣ ಘಟಕಗಳು, ತ್ಯಾಜ್ಯ ನಿರ್ವಹಣಾ ಕೈಗಾರಿಕೆಗಳು, ನವೀನ ಶಕ್ತಿಯ ತಂತ್ರಜ್ಞಾನ.

**4.ಕೈಗಾರಿಕಾ ಕ್ಷೇತ್ರ**- ಎನ್‌ಜೈಮ್ ತಯಾರಿಕೆ, ಜೈವಿಕ ಇಂಧನ, ಬಯೊಫಾರ್ಮಸ್ಯೂಟಿಕಲ್ಸ್.

**5.ಸಂಶೋಧನಾ ಸಂಸ್ಥೆಗಳು ಮತ್ತು ವಿಶ್ವವಿದ್ಯಾಲಯಗಳು**- ಸಂಶೋಧನಾ ಸಹಾಯಕ, ಉಪನ್ಯಾಸಕ, ವಿಜ್ಞಾನಿ ಹುದ್ದೆಗಳು.

**6.ವಿದೇಶದಲ್ಲಿ ಅವಕಾಶ**- ಅಮೆರಿಕ, ಯುರೋಪ್, ಜಪಾನ್, ಸಿಂಗಪುರದಂತಹ ದೇಶಗಳಲ್ಲಿ ಸಂಶೋಧನೆ ಹಾಗೂ ಕೈಗಾರಿಕಾ ಕೆಲಸಗಳಿಗೆ ವಿದ್ಯಾರ್ಥಿಗಳು ಹೆಚ್ಚಿನ ಬೇಡಿಕೆ ಹೊಂದಿದ್ದಾರೆ. ಇದೇ ರೀತಿ, ಬಯೊಟೆಕ್ನಾಲಜಿಯಲ್ಲಿ ಸ್ಟಾರ್ಟ್-ಅಪ್ ಉದ್ದಿಮೆಗಳು ಕೂಡ ವೇಗವಾಗಿ ಬೆಳೆಯುತ್ತಿವೆ. ಆರೋಗ್ಯ ನಿರ್ಣಾಯಕ ಕಿಟ್‌ಗಳು, ಸಸ್ಯ ಆಧಾರಿತ ಉತ್ಪನ್ನಗಳು, ಜೈವಿಕ ಇಂಧನ, ಆಹಾರ ತಂತ್ರಜ್ಞಾನದಲ್ಲಿ ಯುವ ಉದ್ಯಮಿಗಳು ಹೊಸ ಹಾದಿ ತೆರೆಯುತ್ತಿದ್ದಾರೆ.

ಹೀಗಾಗಿ, ವಿಜ್ಞಾನಾಭಿರುಚಿ ಹೊಂದಿರುವ ವಿದ್ಯಾರ್ಥಿಗಳು ಬಯೊಟೆಕ್ನಾಲಜಿ ಪದವಿಯನ್ನು ಆಯ್ಕೆ ಮಾಡಿಕೊಂಡು, ದೇಶದ ಭವಿಷ್ಯ ನಿರ್ಮಾಣದಲ್ಲಿ ಕೈಜೋಡಿಸಬಹುದು.

Dr. Rajkumar IAS/KAS Academy

## ❖ ವಿಶ್ವ ಬಾಕ್ಸಿಂಗ್: ಭಾರತಕ್ಕೆ 'ಚಿನ್ನ ಡಬಲ್'

**ಸಂದರ್ಭ**: ಜೈಸ್ಮಿನ್ ಲಾಂಬೊರಿಯಾ (57ಕೆ.ಜಿ) ಮತ್ತು ಮೀನಾಕ್ಷಿ ಹೂಡಾ (48ಕೆ.ಜಿ) ಅವರು ವಿಶ್ವ ಬಾಕ್ಸಿಂಗ್ ಚಾಂಪಿಯನ್‌ಷಿಪ್‌ನಲ್ಲಿ ಚಿನ್ನ ಜಯಿಸಿದರು.

- ಪ್ಯಾರಿಸ್ ಒಲಿಂಪಿಕ್ ಕೂಟದ ಮಹಿಳೆಯರ 57 ಕೆ.ಜಿ. ವಿಭಾಗದ ಬೆಳ್ಳಿ ಪದಕ ವಿಜೇತ ಬಾಕ್ಸರ್ ಪೋಲೆಂಡ್‌ನ ಜೂಲಿಯಾ ಎಸ್ಝೆರೆಮೆತಾ ಅವರನ್ನು ಜೈಸ್ಮಿನ್ ಸೋಲಿಸಿದರು. ಭಾರತದ ಬಾಕ್ಸರ್ 4–1 (30-27 29-28 30-27 28-29 29-28) ರಿಂದ ಕಠಿಣ ಪೈಪೋಟಿ ಯೊಡ್ಡಿದ ತಮ್ಮ ಎದುರಾಳಿಯನ್ನು ಸೋಲಿಸಿದರು. ಇದರೊಂದಿಗೆ ಚಿನ್ನದ ಪದಕಕ್ಕೆ ಕೊರಳೊಡ್ಡಿದರು.
- ಮಧ್ಯಾಹ್ನದ ನಂತರ ನಡೆದ 48 ಕೆ.ಜಿ ವಿಭಾಗದ ಫೈನಲ್‌ನಲ್ಲಿ ಮೀನಾಕ್ಷಿ ಅವರು ಕಜಾಕಸ್ತಾನದ ನಾಝೀಂ ಕೈಝೈಬೆ ವಿರುದ್ಧ ಜಯಭೇರಿ ಬಾರಿಸಿದರು. ನಾಝೀಂ ಅವರು ಪ್ಯಾರಿಸ್ ಒಲಿಂಪಿಕ್ಸ್ ನಲ್ಲಿ ಕಂಚಿನ ಪದಕ ಪಡೆದಿದ್ದರು.
- ಇದರೊಂದಿಗೆ ಜೈಸ್ಮಿನ್ ಮತ್ತು ಮೀನಾಕ್ಷಿ ಅವರು ವಿಶ್ವ ಚಾಂಪಿಯನ್‌ಷಿಪ್ ನಲ್ಲಿ ಚಿನ್ನ ಗೆದ್ದ ಭಾರತೀಯ ಬಾಕ್ಸರ್‌ಗಳ ಯಾದಿಯಲ್ಲಿ ಸ್ಥಾನ ಪಡೆದರು. ಆರು ಸಲ ವಿಶ್ವ ಚಾಂಪಿಯನ್ ಆಗಿರುವ ಮೇರಿ ಕೋಮ್ (2002, 2005, 2006, 2008, 2010 ಮತ್ತು 2018), ಎರಡು ಬಾರಿ ಚಾಂಪಿಯನ್ ನಿಖತ್ ಜರೀನ್ (2022 ಮತ್ತು 2023), ಸರಿತಾ ದೇವಿ (2006), ಜೆನ್ನಿ ಆರ್.ಎಲ್ (2006), ಕೆ.ಸಿ. ಲೇಖಾ (2006), ನೀತು ಗಂಗಾಸ್ (2023), ಲವ್ಲಿನಾ ಬೊರ್ಗೊಹೈನ್ (2023) ಮತ್ತು ಸವಿತಿ ಬೂರಾ (2023) ಅವರ ನಂತರ ಜೈಸ್ಮಿನ್ ಮತ್ತು ಮೀನಾಕ್ಷಿ ಅವರೂ ಈ ಪಟ್ಟಿಗೆ ಸೇರ್ಪಡೆಯಾದರು. 24 ವರ್ಷದ ಜೈಸ್ಮಿನ್ ಅವರಿಗೆ ಇದು ಮೂರನೇ ವಿಶ್ವ ಚಾಂಪಿಯನ್‌ಷಿಪ್.
- ಮಹಿಳೆಯರ ವಿಭಾಗದಲ್ಲಿ ಮತ್ತೆರಡು ಪದಕಗಳೂ ಭಾರತಕ್ಕೆ ಒಲಿದವು. ನೂಪುರ್ ಶೆರಾನ್ (80 ಕೆ.ಜಿ ಮೇಲ್ಪಟ್ಟು) ಮತ್ತು ಪೂಜಾರಾಣಿ (80 ಕೆ.ಜಿ) ಅವರು ಕ್ರಮವಾಗಿ ಬೆಳ್ಳಿ ಮತ್ತು ಕಂಚಿನ ಪದಕ ಗಳಿಸಿದರು.

- 80 ಕೆ.ಜಿ ಮೇಲ್ಪಟ್ಟವರ ವಿಭಾಗದ ಫೈನಲ್‌ನಲ್ಲಿ ನೂಪುರ್ ಅವರು 2–3ರ ಅಲ್ಪ ಅಂತರದ ಸೋಲನ್ನು ಪೋಲೆಂಡ್‌ನ ಅಗಾತಾ ಕಾಜಾಮರಸ್ಕಾ ವಿರುದ್ಧ ಅನುಭವಿಸಿದರು. ತಾಂತ್ರಿಕ ಅಂಕಗಳೊಂದಿಗೆ ಪೋಲೆಂಡ್ ಬಾಕ್ಸರ್ ಮೇಲುಗೈ ಸಾಧಿಸಿದರು.
- ಪೂಜಾ ಅವರು ಸೆಮಿಫೈನಲ್‌ನಲ್ಲಿ 1–4ರಿಂದ ಸ್ಥಳೀಯ ಫೆವರಿಟ್ ಎಮಿಲಿ ಅಷ್ಕಿತ್ ವಿರುದ್ಧ ಸೋತು ಕಂಚಿನ ಪದಕ ಪಡೆದರು.

## ❖ ಏಷ್ಯಾ ಕಪ್: ಭಾರತ ರನ್ನರ್ಸ್ ಅಪ್

ಸಂದರ್ಭ: ಭಾರತ ಮಹಿಳಾ ತಂಡವು ಭಾನುವಾರ ಇಲ್ಲಿ ನಡೆದ ಫೈನಲ್ ಹಣಾಹಣಿಯಲ್ಲಿ ಚೀನಾ ವಿರುದ್ಧ 1–4 ಗೋಲುಗಳಿಂದ ಪರಾಭವಗೊಂಡು, ಏಷ್ಯಾ ಕಪ್ ಹಾಕಿ ಟೂರ್ನಿಯಲ್ಲಿ ರನ್ನರ್ಸ್ ಅಪ್ ಆಯಿತು.

- ಈ ಸೋಲಿನೊಂದಿಗೆ ಸಲೀಮಾ ಟೆಟೆ ಬಳಗವು ಮುಂದಿನ ವರ್ಷ ಬೆಲ್ಜಿಯಂ ಮತ್ತು ನೆದರ್ಲೆಂಡ್ಸ್ ಆತಿಥ್ಯದಲ್ಲಿ ನಡೆಯುವ ವಿಶ್ವಕಪ್‌ಗೆ ನೇರ ಅರ್ಹತೆ ಪಡೆಯುವ ಸುವರ್ಣಾವಕಾಶವನ್ನು ಕಳೆದುಕೊಂಡಿತು. ಚಾಂಪಿಯನ್ ಚೀನಾ ತಂಡವು ವಿಶ್ವಕಪ್‌ಗೆ ಟಿಕೆಟ್ ಪಡೆದುಕೊಂಡಿತು.
- ಗೊಂಗ್ಶು ಕೆನಾಲ್ ಸ್ಪೋರ್ಟ್ಸ್ ಪಾರ್ಕ್ ಕ್ರೀಡಾಂಗಣದಲ್ಲಿ ನಡೆದ ಪಂದ್ಯದಲ್ಲಿ ಅನುಭವಿ ಫಾರ್ವರ್ಡ್ ಆಟಗಾರ್ತಿ ನವನೀತ್ ಅವರು ಮೊದಲ ನಿಮಿಷದಲ್ಲೇ ಭಾರತಕ್ಕೆ ಮುನ್ನಡೆ ಒದಗಿಸಿದ್ದರು. ಪೆನಾಲ್ಟಿ ಕಾರ್ನರ್ ಅವಕಾಶದಲ್ಲಿ ಗೋಲು ಗಳಿಸಿ, ಆತಿಥೇಯರನ್ನು ಆರಂಭದಲ್ಲೇ ಒತ್ತಡಕ್ಕೆ ಸಿಲುಕಿಸುವ ಪ್ರಯತ್ನ ಮಾಡಿದ್ದರು.
- ನಂತರದಲ್ಲಿ ಚೀನಾ ತಂಡವು ಸತತ ಮೂರು ಪೆನಾಲ್ಟಿ ಕಾರ್ನರ್‌ಗಳಲ್ಲಿ ಗೋಲು ಹೊಡೆಯುವುದಕ್ಕೆ ತಡೆಯೊಡ್ಡುವಲ್ಲಿ ಯಶಸ್ವಿಯಾದ ಭಾರತದ ಆಟಗಾರ್ತಿಯರು 21ನೇ ನಿಮಿಷದವರೆಗೆ ಮುನ್ನಡೆ ಕಾಯ್ದುಕೊಂಡರು. ಆದರೆ, ನಾಲ್ಕನೇ ಪೆನಾಲ್ಟಿ ಕಾರ್ನರ್ ಅವಕಾಶದಲ್ಲಿ ಜಿಕ್ಸಿಯಾ ಔ ಅವರು ಚೆಂಡನ್ನು ಗುರಿ ಸೇರಿಸಿದ್ದರಿಂದ ಉಭಯ ತಂಡಗಳ ಸ್ಕೋರ್ ಸಮಬಲಗೊಂಡಿತು.
- 41ನೇ ನಿಮಿಷದಲ್ಲಿ ಹಾಂಗ್ ಲಿ ಅವರು ಫೀಲ್ಡ್ ಗೋಲು ಬಾರಿಸಿ ಆತಿಥೇಯ ತಂಡಕ್ಕೆ 2–1 ಮುನ್ನಡೆ ಒದಗಿಸಿದರು. ನಂತರದಲ್ಲಿ ಮೀರಾಂಗ್ ಝೌ (51ನೇ ನಿಮಿಷ) ಮತ್ತು ಜಿಯಾಕಿ ಜಾಂಗ್ (53ನೇ ನಿ) ಗೋಲು ತಂದಿತ್ತು. ಚೀನಾ ತಂಡದ ಗೆಲುವಿನ ಅಂತರವನ್ನು ಹೆಚ್ಚಿಸಿದರು.
- ಟೂರ್ನಿಯಲ್ಲಿ ಚೀನಾ ವಿರುದ್ಧ ಭಾರತಕ್ಕೆ ಇದು ಎರಡನೇ ಸೋಲಾಗಿದೆ. ಇದಕ್ಕೂ ಮುನ್ನ ಸೂಪರ್ ಫೋರ್ ಹಂತದಲ್ಲೂ 1–4 ಗೋಲುಗಳಿಂದ ಭಾರತ ಪರಾಭವಗೊಂಡಿತ್ತು.
- ಜಪಾನ್‌ಗೆ ಗೆಲುವು: ಮೂರನೇ ಸ್ಥಾನಕ್ಕಾಗಿ ನಡೆದ ಹಣಾಹಣಿಯಲ್ಲಿ ಹಾಲಿ ಚಾಂಪಿಯನ್ ಜಪಾನ್ ತಂಡವು 2–1 ಗೋಲುಗಳಿಂದ ದಕ್ಷಿಣ ಕೊರಿಯಾ ತಂಡವನ್ನು ಮಣಿಸಿತು. ಟೂರ್ನಿಯಲ್ಲಿ ಒಟ್ಟು ಎಂಟು ತಂಡಗಳು ಸ್ಪರ್ಧಿಸಿದ್ದವು.

## ❖ ಶೂಟಿಂಗ್ ವಿಶ್ವಕಪ್: ಮೇಘನಾಗೆ ಕಂಚು


ಸಂದರ್ಭ: ಅನುಭವಿ ಶೂಟರ್ ಮೇಘನಾ ಸಜ್ಜನರ್ ಅವರು ಐಎಸ್‌ಎಸ್‌ಎಫ್ ವಿಶ್ವಕಪ್ ರೈಫಲ್/ ಪಿಸ್ತೂಲ್ ವಿಶ್ವಕಪ್ ನಲ್ಲಿ ಕಂಚಿನ ಪದಕ ಗೆದ್ದರು. ಋತುವಿನ ಕೊನೆಯ ವಿಶ್ವಕಪ್ ಟೂರ್ನಿಯಲ್ಲಿ ಭಾರತವು ಐದನೇ ಸ್ಥಾನದೊಂದಿಗೆ ಅಭಿಯಾನ ಮುಗಿಸಿತು.

- ಮಹಿಳೆಯರ 10 ಮೀಟರ್ ಏರ್ ರೈಫಲ್ ಸ್ಪರ್ಧೆಯಲ್ಲಿ ಕರ್ನಾಟಕದ ಮೇಘನಾ 230.0 ಅಂಕಗಳೊಂದಿಗೆ ಮೂರನೇ ಸ್ಥಾನ ಪಡೆದರು. ವಿಶ್ವಕಪ್‌ನಲ್ಲಿ ಅವರಿಗೆ ದೊರೆತ ಚೊಚ್ಚಲ ಪದಕ ಇದಾಗಿದೆ.

Dr. Rajkumar IAS/KAS Academy

- ಚೀನಾದ ಉದಯೋನ್ಮುಖ ತಾರೆ ಪೆಂಗ್ ಕ್ಸಿನ್ಲು 255.3 ಅಂಕ ಸಂಪಾದಿಸಿ, ವಿಶ್ವದಾಖಲೆ ಯೊಂದಿಗೆ ಚಿನ್ನಕ್ಕೆ ಕೊರಳೊಡ್ಡಿ ದರು. ಅವರು ಸ್ವದೇಶದ ವಾಂಗ್ ಜಿಫೀ (254.8) ಅವರ ದಾಖಲೆಯನ್ನು ಮುರಿದರು. ನಾರ್ವೆಯ ಜೀನೆಟ್ ಹೆಗ್ ಡ್ಯುಸ್ಟಾಡ್ ಬೆಳ್ಳಿ ಪದಕ ಗೆದ್ದರು.
- 31 ವರ್ಷದ ಮೇಘನಾ (632.7) ಅವರು ಅರ್ಹತಾ ಸುತ್ತಿನಲ್ಲಿ ಏಳನೇ ಸ್ಥಾನ ದೊಂದಿಗೆ ಫೈನಲ್ ಪ್ರವೇಶಿಸಿದ್ದರು. ಪೆಂಗ್ (637.4) ಅಗ್ರಸ್ಥಾನ ಪಡೆದಿದ್ದರು.

IAS/KAS Academy



## ❖ ವಕ್ಫ್ (ತಿದ್ದುಪಡಿ) ಕಾಯ್ದೆ-2025: ಪ್ರಮುಖ ಅಂಶಗಳಿಗೆ ತಡೆ

**ಸಂದರ್ಭ:** ಇಸ್ಲಾಂ ಧರ್ಮವನ್ನು ಕನಿಷ್ಠ ಐದು ವರ್ಷ ಅನುಸರಿಸಿದ ವ್ಯಕ್ತಿ ಮಾತ್ರ ಆಸ್ತಿಯನ್ನು ವಕ್ಫ್‌ಗೆ ದಾನ ನೀಡಬಹುದು ಎಂಬ ಷರತ್ತು ಸೇರಿದಂತೆ ವಕ್ಫ್ (ತಿದ್ದುಪಡಿ) ಕಾಯ್ದೆ-2025ರ ಕೆಲವು ಪ್ರಮುಖ ಅಂಶಗಳಿಗೆ ಸುಪ್ರೀಂ ಕೋರ್ಟ್ ತಡೆ ನೀಡಿದೆ. ಆದರೆ, ಇಡೀ ಕಾಯ್ದೆಗೆ ತಡೆಯಾಜ್ಞೆ ನೀಡಲು ನಿರಾಕರಿಸಿದೆ.

### ಯಾವ ಕಾನೂನಿಗೆ ತಡೆ?

- 2025ರ ವಕ್ಫ್ ತಿದ್ದುಪಡಿ ಕಾಯ್ದೆಯಲ್ಲಿ, ಯಾವ ವ್ಯಕ್ತಿಯು ಕನಿಷ್ಟ ಐದು ವರ್ಷಗಳಿಂದ ಇಸ್ಲಾಂ ಧರ್ಮವನ್ನು ಪಾಲಿಸುತ್ತಿದ್ದಾನೋ ಆ ವ್ಯಕ್ತಿಯು ಮಾತ್ರ ವಕ್ಫ್ ಮಂಡಳಿಗಳಿಗೆ ಭೂಮಿಯನ್ನು ದಾನ ಕೊಡಲು ಅರ್ಹ ಎಂಬ ಅಂಶಕ್ಕೆ ಸದ್ಯಕ್ಕೆ ತಡೆ ನೀಡಲು ಸುಪ್ರೀಂ ಕೋರ್ಟ್ ಒಪ್ಪಿದೆ. ಈ ಅಂಶದ ಬಗ್ಗೆ ರಾಜ್ಯ ಸರ್ಕಾರಗಳು ಹೊಸ ನಿಯಮಗಳನ್ನು ರೂಪಿಸುವವರೆಗೂ ಈ ಅಂಶಕ್ಕೆ (ಕಾಯ್ದೆಯಲ್ಲಿರುವ ಸೆಕ್ಷನ್ 3 (1), (r) ತಡೆ ನೀಡಬೇಕು ಎಂದು ಸುಪ್ರೀಂಕೋರ್ಟ್ ನ ನ್ಯಾಯಪೀಠ ಅಭಿಪ್ರಾಯಪಟ್ಟಿದೆ.
- ಇನ್ನು, ಎರಡನೆಯದಾಗಿ, ವಕ್ಫ್ ಆಸ್ತಿಯನ್ನು ಗುರುತಿಸುವ ಅಧಿಕಾರವನ್ನು ಜಿಲ್ಲಾಧಿಕಾರಿಗಳಿಗೆ ಅಥವಾ ಸರ್ಕಾರದಿಂದ ನಿಯೋಜಿಸಲಾಗಿರುವ ಅಧಿಕಾರಿಗೆ ನೀಡಿರುವ ಅಂಶಕ್ಕೂ ತಡೆಯನ್ನು ನೀಡಲಾಗಿದೆ. ಇದು ಅಧಿಕಾರ ಪ್ರತ್ಯೇಕತೆಯ ತತ್ವವನ್ನು ಉಲ್ಲಂಘಿಸುತ್ತದೆ ಎಂದು ಸುಪ್ರೀಂ ಕೋರ್ಟ್ ಅಭಿಪ್ರಾಯಪಟ್ಟಿದೆ.

### ಇನ್ನಿತರ ತಡೆಗಳು:

- ಆಸ್ತಿ ಅತಿಕ್ರಮಣದ ಬಗ್ಗೆ ಸಂಬಂಧಿಸಿದ ಅಧಿಕಾರಿಯು ವರದಿ ಸಲ್ಲಿಸುವವರೆಗೆ ವಕ್ಫ್ ಆಸ್ತಿ ಎಂದು ಪರಿಗಣಿಸಬಾರದು ಎಂಬ ಅಂಶ (ಕಾಯ್ದೆಯಲ್ಲಿರುವ ಸೆಕ್ಷನ್ 3C (2).
- ಒಂದು ವೇಳೆ ಆಸ್ತಿಯು ಸರ್ಕಾರಿ ಜಮೀನು ಎನ್ನುವುದನ್ನು ನಿಯೋಜಿತ ಅಧಿಕಾರಿಯು (ಅಥವಾ ಜಿಲ್ಲಾಧಿಕಾರಿ) ವಕ್ಫ್ ಭೂಮಿಯನ್ನು ಸರ್ಕಾರಿ ಭೂಮಿ ಎಂದು ಗುರುತಿಸಿದರೆ, ಕಂದಾಯ ದಾಖಲೆಗಳಲ್ಲಿ ಅಗತ್ಯ ಬದಲಾವಣೆಗಳನ್ನು ಮಾಡಿ ಸರ್ಕಾರಕ್ಕೆ ವರದಿಯನ್ನು ಸಲ್ಲಿಸಬೇಕು ಎಂಬ ಅಂಶಕ್ಕೂ ಸುಪ್ರೀಂ ಕೋರ್ಟ್ ತಡೆಯಾಜ್ಞೆ ನೀಡಿದೆ.
- ನಿಯೋಜಿತ ಅಧಿಕಾರಿ ಸಲ್ಲಿಸಿರುವ ವರದಿ ಆಧರಿಸಿ, ದಾಖಲೆಗಳಲ್ಲಿ ಅಗತ್ಯವಾದ ಬದಲಾವಣೆಗಳನ್ನು ಮಾಡಬೇಕು. ಎಂದು ವಕ್ಫ್ ಬೋರ್ಡ್ ಗೆ ರಾಜ್ಯ ಸರ್ಕಾರ ಸೂಚಿಸಬೇಕು ಎಂಬ ಅಂಶ. (ಸೆಕ್ಷನ್ 3ಸಿ (4)).

## ❖ 'ಅಕ್ರಮವಿದ್ದರೆ ಎಸ್‌ಐಆರ್ ರದ್ದು'

**ಸಂದರ್ಭ:** ಬಿಹಾರದಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಸಮಯದಲ್ಲಿ ಕೇಂದ್ರ ಚುನಾವಣಾ ಆಯೋಗ ಅಳವಡಿಸಿ ಕೊಂಡ ವಿಧಾನದಲ್ಲಿ ಯಾವುದೇ ಅಕ್ರಮ ಕಂಡುಬಂದರೆ, ಸಂಪೂರ್ಣ ಪ್ರಕ್ರಿಯೆ ಯನ್ನೇ ರದ್ದುಗೊಳಿಸಲಾಗುವುದು ಎಂದು ಸುಪ್ರೀಂ ಕೋರ್ಟ್ ಎಚ್ಚರಿಸಿದೆ.

- ಬಿಹಾರದ ಎಸ್‌ಐಆರ್‌ನ ಸಿಂಧುತ್ವ ಪ್ರಶ್ನಿಸಿ ಸಲ್ಲಿಕೆಯಾಗಿರುವ ಅರ್ಜಿಗಳ ಅಂತಿಮ ವಿಚಾರಣೆಯನ್ನು ಅಕ್ಟೋಬರ್ 7ರಂದು ನಡೆಸುವುದಾಗಿ ನ್ಯಾಯಮೂರ್ತಿ ಗಳಾದ ಸೂರ್ಯಕಾಂತ್ ಹಾಗೂ ಜಾಯ್‌ಮಲ್ಯ ಬಾಗ್ಚಿ ಅವರ ಪೀಠ ತಿಳಿಸಿತು. ಈ ಪ್ರಕ್ರಿಯೆಯ ಕುರಿತು ಅರೆಬರೆ ಅಭಿಪ್ರಾಯಗಳನ್ನು ನೀಡುವುದಿಲ್ಲ ಎಂದೂ ಪೀಠ ಹೇಳಿತು.

ವಕೀಲರ ವಾದವೇನು?

- ಎಸ್‌ಐಆರ್ ನ ಸಂಪೂರ್ಣ ಪ್ರಕ್ರಿಯೆ ನಡೆಸಲು ಚುನಾವಣಾ ಆಯೋಗಕ್ಕೆ ಅವಕಾಶ ನೀಡಬೇಕು. ಪ್ರಕ್ರಿಯೆ ಪೂರ್ಣಗೊಂಡ ಬಳಿಕ ನ್ಯಾಯಾಲಯವು ಅದನ್ನು ಉತ್ತಮವಾಗಿ ಮೌಲ್ಯಮಾಪನ ಮಾಡಲು ಸಾಧ್ಯವಾಗುತ್ತದೆ

## ❖ ಬಫರ್ ಝೋನ್ ಕಡಿತ ಮಸೂದೆ ವಾಪಸ್

**ಸಂದರ್ಭ:** ಕೆರೆಗಳ ಸಂರಕ್ಷಿತ ಪ್ರದೇಶವನ್ನು (ಬಫರ್ ಝೋನ್) ಕಡಿಮೆ ಮಾಡಲು ಅವಕಾಶ ಕಲ್ಪಿಸುವ 'ಕರ್ನಾಟಕ ಕೆರೆ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ಮಸೂದೆ' ಯನ್ನು ಸ್ಪಷ್ಟೀಕರಣ ಕೇಳಿ ರಾಜ್ಯಪಾಲ ಥಾವರಚಂದ್ ಗೆಹಲೋತ್ ಅವರು ರಾಜ್ಯ ಸರ್ಕಾರಕ್ಕೆ ವಾಪಸ್ ಕಳುಹಿಸಿದ್ದಾರೆ.

- ಕೆರೆಗಳು ಮತ್ತು ರಾಜಕಾಲುವೆಗಳ ವಿಸ್ತೀರ್ಣಕ್ಕೆ ಅನುಗುಣವಾಗಿ 'ಸಂರಕ್ಷಿತ ಪ್ರದೇಶ' ವನ್ನು ನಿಗದಿಪಡಿಸಲು ಹಾಗೂ ಬಫರ್‌ಝೋನ್‌ನಲ್ಲಿ ಸಾರ್ವಜನಿಕ ಮೂಲಸೌಕರ್ಯ ಕಲ್ಪಿಸುವ ಕಾಮಗಾರಿಗಳನ್ನು ಕೈಗೊಳ್ಳಲು ಮಸೂದೆ ತಿದ್ದುಪಡಿಗೆ ಸರ್ಕಾರ ಮುಂದಾಗಿತ್ತು.
- ಆದರೆ, ಸರ್ಕಾರದ ಈ ನಡೆಗೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದ ನಾಗರಿಕರ ಸಂಘವಾದ 'ಬೆಂಗಳೂರು ಟೌನ್ ಹಾಲ್' , ರಾಜ್ಯಪಾಲರಿಗೆ ಪತ್ರ ಬರೆದು ಮಸೂದೆಗೆ ಅಂಕಿತ ಹಾಕದಂತೆ ಮನವಿ ಮಾಡಿತ್ತು.
- 'ಕೆರೆಗಳ ಬಫರ್ ಝೋನ್ ಅನ್ನು 30 ಮೀಟರ್‌ಗೆ ಇಳಿಸುವುದರಿಂದ ಬೆಂಗಳೂರಿನ ನೀರಿನ ಭದ್ರತೆ ಮತ್ತು ಪರಿಸರ ವ್ಯವಸ್ಥೆಯ ಸಮಗ್ರತೆಗೆ ಅಪಾಯ ಉಂಟಾಗಲಿದೆ. ಪರಿಸರ ಸಮತೋಲನ ಕಾಪಾಡಲು 30 ಮೀಟರ್ ಬದಲು 300 ಮೀಟರ್‌ಗೆ ಬಫರ್ ಝೋನ್ ಹೆಚ್ಚಿಸುವ ಅಗತ್ಯವಿದೆ' ಎಂದು ಸಂಘವು ಪತ್ರದಲ್ಲಿ ಪ್ರತಿಪಾದಿಸಿತ್ತು.
- 'ಬೆಂಗಳೂರು ಟೌನ್ ಹಾಲ್' ಸಂಘದ ಪತ್ರದಲ್ಲಿದ್ದ ಅಂಶಗಳನ್ನು ಉಲ್ಲೇಖಿಸಿ ಸ್ಪಷ್ಟೀಕರಣ ಕೇಳಿರುವ ರಾಜ್ಯಪಾಲರು, ಆ ಅಂಶಗಳಿಗೆ ವಿವರವಾದ ಸ್ಪಷ್ಟನೆಗಳ ಸಹಿತ ಕಡತ ಮತ್ತೊಮ್ಮೆ ಕಳುಹಿಸಲು ರಾಜ್ಯ ಸರ್ಕಾರಕ್ಕೆ ಸೂಚಿಸಿದ್ದಾರೆ.

## ❖ ಮತಾಂತರಗೊಂಡವರ ಜಾತಿ ಯಾವುದು?

**ಸಂದರ್ಭ:** ಜಾತಿ ತಾರತಮ್ಯ, ಶೋಷಣೆಗೆ ಗುರಿಯಾಗಿದ್ದ ದಲಿತರು ಸೇರಿದಂತೆ ದುರ್ಬಲ ಜಾತಿಗಳ ಲಕ್ಷಾಂತರ ಮಂದಿ ಕ್ರೈಸ್ತ, ಮುಸ್ಲಿಂ ಧರ್ಮಕ್ಕೆ ಮತಾಂತರವಾಗಿದ್ದಾರೆ. ದಲಿತರು ಮತಾಂತರವಾದ ನಂತರವೂ ತಾರತಮ್ಯ, ಸಾಮಾಜಿಕ-ಆರ್ಥಿಕ ಅಸಮಾನತೆ ಎದುರಿಸುತ್ತಿದ್ದಾರೆ. ಹೀಗಾಗಿ ತಮ್ಮನ್ನು ಪರಿಶಿಷ್ಟ ಜಾತಿ (ಎಸ್‌ಸಿ) ಎಂದೇ ಪರಿಗಣಿಸಿ, ಸೌಲಭ್ಯಗಳನ್ನು ನೀಡಬೇಕು ಎಂದು ಹಲವು ದಶಕಗಳಿಂದ ದಲಿತ ಕ್ರೈಸ್ತರು ಮತ್ತು ದಲಿತ ಮುಸ್ಲಿಮರು ಹೋರಾಟ ಮಾಡುತ್ತಿದ್ದಾರೆ.

- **ಸಂವಿಧಾನದ 341ನೇ ವಿಧಿಯ ಅಡಿಯಲ್ಲಿ ಎಸ್‌ಸಿ ಸಮು ದಾಯಗಳನ್ನು, 342ನೇ ವಿಧಿ ಅಡಿಯಲ್ಲಿ ಪರಿಶಿಷ್ಟ ಪಂಗಡಗಳನ್ನು ಮತ್ತು 340ನೇ ವಿಧಿಯಲ್ಲಿ ಇತರೆ ಹಿಂದುಳಿದ ವರ್ಗಗಳನ್ನು (ಒಬಿಸಿ) ಗುರುತಿಸಲಾಗುತ್ತಿದೆ.**
- **ಎಸ್‌ಸಿ ಪಟ್ಟಿಗೆ ಹೊಸ ಜಾತಿಯನ್ನು ಸೇರಿಸುವ ಇಲ್ಲವೇ ತೆಗೆಯುವ ಅಧಿಕಾರ ಸಂಸತ್‌ಗೆ ಮಾತ್ರ ಇದೆ. ಸಂಸತ್ತಿನ ನಿರ್ಧಾರದ ಬಳಿಕ ರಾಷ್ಟ್ರಪತಿಯವರು ಸಹಿ ಹಾಕಿ ಅದನ್ನು ಅಧಿಕೃತಗೊಳಿಸುತ್ತಾರೆ.**
- ಒಬ್ಬ ಎಸ್‌ಸಿ ವ್ಯಕ್ತಿಯು ಹಿಂದೂ ಧರ್ಮದಿಂದ ಬೇರೊಂದು ಧರ್ಮಕ್ಕೆ ಮತಾಂತರಗೊಂಡರೆ, ಅವರನ್ನು ಎಸ್‌ಸಿ ಎಂದು ಪರಿಗಣಿಸಲಾಗದು ಎಂದು 341ನೇ ವಿಧಿಯು ಹೇಳುತ್ತದೆ.
- 1950ರಲ್ಲಿ ಹಿಂದೂಗಳನ್ನು ಮಾತ್ರ ಎಸ್‌ಸಿ ಎಂದು ಸಾಂವಿಧಾನಿಕ ಆದೇಶದ ಮೂಲಕ ಪರಿಗಣಿಸಲಾಗಿತ್ತು. ನಂತರ 1956ರ ತಿದ್ದುಪಡಿ ಮೂಲಕ ದಲಿತ ಸಿಖ್ಖರನ್ನು, 1990ರ ತಿದ್ದುಪಡಿಯ ಮೂಲಕ ದಲಿತ ಬೌದ್ಧರನ್ನು ಎಸ್‌ಸಿಗಳೆಂದು ಪರಿಗಣಿಸಬಹುದು ಎಂದು ಬದಲಿಸಲಾಯಿತು. ಆದರೆ, ಮುಸ್ಲಿಂ ಮತ್ತು ಕ್ರೈಸ್ತ ಧರ್ಮಕ್ಕೆ ಮತಾಂತರಗೊಂಡ ದಲಿತರನ್ನು ಎಸ್‌ಸಿ ಎಂದು ಪರಿಗಣಿಸುವ ಬಗ್ಗೆ ಯಾವುದೇ ತಿದ್ದುಪಡಿ ಆಗಿಲ್ಲ.

- **<u>ಒಬಿಸಿ ಮೀಸಲಾತಿ:</u>** ಕ್ರೈಸ್ತ ಮತ್ತು ಮುಸ್ಲಿಂ ಧರ್ಮಕ್ಕೆ ಮತಾಂತರಗೊಂಡ ಎಸ್‌ಸಿಗಳನ್ನು ಕೆಲವು ರಾಜ್ಯಗಳಲ್ಲಿ ಒಬಿಸಿ ಪಟ್ಟಿಯಲ್ಲಿ ಸೇರಿಸಲಾಗಿದೆ. ಅಂದರೆ, ರಾಜ್ಯ ಸರ್ಕಾರಗಳು ಬಯಸಿದರೆ, ದಲಿತ ಕ್ರೈಸ್ತರನ್ನು ಮತ್ತು ದಲಿತ ಮುಸ್ಲಿಮರನ್ನು ಹಿಂದುಳಿದ ಜಾತಿಗಳ ಪಟ್ಟಿಯಲ್ಲಿ ಸೇರಿಸಬಹುದು. ಆದರೆ, ಈ

Dr Rajkumar's IAS Academy

ಎರಡೂ ಧರ್ಮಗಳಿಗೆ ಮತಾಂತರಗೊಂಡ ದಲಿತರನ್ನು ಎಸ್‌ಸಿ ಎಂದು ಪರಿಗಣಿಸಬಹುದೇ ಎನ್ನುವ ವಿಚಾರ ಪ್ರಸ್ತುತ ಸುಪ್ರೀಂ ಕೋರ್ಟ್‌ನಲ್ಲಿದೆ.

- ಧರ್ಮದ ಆಧಾರದಲ್ಲಿ ಎಸ್‌ಸಿಗಳನ್ನು ಗುರುತಿಸುವ 1950ರ ಸಾಂವಿಧಾನಿಕ ಆದೇಶವೇ ಸಂವಿಧಾನದ ಆಶಯಗಳಿಗೆ ವಿರುದ್ಧವಾಗಿದೆ ಎನ್ನುವುದು ದಲಿತ ಕ್ರೈಸ್ತ ಸಂಘಟನೆಗಳ ಆರೋಪವಾಗಿದೆ. **15(1) ವಿಧಿಗೆ (ಧರ್ಮದ ಹೆಸರಿನಲ್ಲಿ ತಾರತಮ್ಯ ಸಲ್ಲದು) ಈ ಆದೇಶವು ವಿರುದ್ಧವಾಗಿದೆ ಎನ್ನುವುದು ಅವರ ವಾದ.** ಹೀಗಾಗಿ ದಲಿತರು ಮತಾಂತರಗೊಂಡರೂ ಅವರನ್ನು ಎಸ್‌ಸಿ ಎಂದೇ ಗುರುತಿಸಬೇಕು ಎನ್ನುವುದು ಅವರ ಆಗ್ರಹ. ಧರ್ಮದ ಆಧಾರದಲ್ಲಿ ಮೀಸಲಾತಿ ನೀಡಬಾರದು ಎಂದು ಸಂವಿಧಾನ ಹೇಳುತ್ತಿದ್ದು, ಮೀಸಲಾತಿ ನಿರಾಕರಿಸಲೂ ಧರ್ಮ ಆಧಾರವಾಗಬಾರದು ಎನ್ನುವುದು ಅವರ ಪ್ರತಿಪಾದನೆ.
- 1983ರ ಸೂಸೈ ಮತ್ತು ಕೇಂದ್ರ ಸರ್ಕಾರದ ನಡುವಿನ ಪ್ರಕರಣ ದಲ್ಲಿ 1950ರ ಸಾಂವಿಧಾನಿಕ ಆದೇಶವನ್ನು ಸುಪ್ರೀಂ ಕೋರ್ಟ್‌ನಲ್ಲಿ ಪ್ರಶ್ನಿಸಲಾಯಿತು. ಮತಾಂತರದ ನಂತರವೂ ಜಾತಿ ಮುಂದುವರಿ ಯುತ್ತದೆ ಎನ್ನುವುದನ್ನು ಆ ಪ್ರಕರಣದ ತೀರ್ಪಿನಲ್ಲಿ ಸುಪ್ರೀಂ ಕೋರ್ಟ್ ಒಪ್ಪಿಕೊಂಡಿತು. ಆದರೆ, ಮತಾಂತರಗೊಂಡ ದಲಿತರು ಹಿಂದೂ ದಲಿತರಷ್ಟೇ ಸಾಮಾಜಿಕವಾಗಿ, ಆರ್ಥಿಕವಾಗಿ ಹಿಂದುಳಿದವರು ಎಂಬುದಕ್ಕೆ ಸೂಕ್ತ ಆಧಾರ ಇಲ್ಲ ಎಂದಿತು. ಮತಾಂತರಗೊಂಡವರ ಶೋಷಣೆಯ ಸ್ವರೂಪ ಏನು ಅನ್ನುವುದರ ಬಗ್ಗೆ ಸಾಮಾಜಿಕ-ಆರ್ಥಿಕ ದತ್ತಾಂಶ ಒದಗಿಸುವಂತೆ ಸುಪ್ರೀಂ ಕೋರ್ಟ್ ತಾಕೀತು ಮಾಡಿತು.
- ಅದರ ನಂತರ ಈ ವಿಚಾರದಲ್ಲಿ ಸಾಕಷ್ಟು ಕಾನೂನು ಹೋರಾಟ, ಶಾಸಕಾಂಗದ ಪ್ರಯತ್ನಗಳು ನಡೆದಿವೆ. ಆದರೆ, ಇದುವರೆಗೂ ಯಾವುದೇ ಫಲಶ್ರುತಿ ಸಿಕ್ಕಿಲ್ಲ. ಸಮಾನತೆ, ಘನತೆಯನ್ನು ಅರಸಿ ಮತಾಂತರಗೊಂಡ ದಲಿತರು ಮತ್ತು ಇತರ ದುರ್ಬಲ ಜಾತಿಗಳ ಜನರು, ಆ ಕಾರಣಕ್ಕಾಗಿ ಮೀಸಲಾತಿ ಸೇರಿದಂತೆ ಹಲವು ಸೌಲಭ್ಯಗಳಿಂದ ವಂಚಿತರಾಗುತ್ತಿದ್ದಾರೆ. ಇದನ್ನು ಒಂದು ಮಾನವೀಯ ವಿಚಾರವನ್ನಾಗಿ ಪರಿಗಣಿಸಿ, ಸಮಸ್ಯೆಗೆ ಪರಿಹಾರ ನೀಡಬೇಕು ಎನ್ನುವ ಒತ್ತಾಯವೂ ಇದೆ.

**<u>ಹೋರಾಟಕ್ಕೆ ದಶಕಗಳ ಇತಿಹಾಸ</u>**

- ಕ್ರೈಸ್ತ ಮತ್ತು ಇಸ್ಲಾಂ ಧರ್ಮಗಳಿಗೆ ಮತಾಂತರಗೊಂಡ ದಲಿತರನ್ನು ಕೂಡ ಪರಿಶಿಷ್ಟ ಜಾತಿಯವರು ಎಂದು ಪರಿಗಣಿಸಬೇಕು ಎಂಬ ಕೂಗಿಗೆ ದಶಕಗಳ ಇತಿಹಾಸವಿದೆ. ಈಗಲೂ ಈ ಪ್ರಕರಣ ಸುಪ್ರೀಂ ಕೋರ್ಟ್‌ನಲ್ಲಿದೆ. ಮತಾಂತರಗೊಂಡವರಿಗೂ ಎಸ್‌ಸಿ ಸ್ಥಾನಮಾನ ನೀಡುವ ಪ್ರಸ್ತಾವವನ್ನು ಕೇಂದ್ರ ಸರ್ಕಾರ ವಿರೋಧಿಸುತ್ತಲೇ ಬಂದಿದೆ. ದಲಿತ ಕ್ರೈಸ್ತರು, ದಲಿತ ಮುಸ್ಲಿಮರನ್ನು ಪರಿಶಿಷ್ಟ ಜಾತಿಯವರು ಎಂದು ಪರಿಗಣಿಸಲು ಸಾಧ್ಯವಿಲ್ಲ ಎಂದು ಸುಪ್ರೀಂ ಕೋರ್ಟ್ ಮತ್ತು ಹೈಕೋರ್ಟ್‌ಗಳು ಅಭಿಪ್ರಾಯಪಟ್ಟ ಉದಾಹರಣೆಗಳೂ ಇವೆ.
- Iಭಾರತೀಯ ರಿಜಿಸ್ಟ್ರಾರ್ ಜನರಲ್ (ಆರ್‌ಜಿಐ) ಕಚೇರಿಯು ಆರಂಭದಿಂದಲೂ ಹಿಂದೂ ಅಥವಾ ಸಿಖ್ ಧರ್ಮದವರನ್ನು ಬಿಟ್ಟು ಉಳಿದವರನ್ನು ಎಸ್‌ಸಿ ವ್ಯಾಪ್ತಿಗೆ ತರುವುದನ್ನು ಆಕ್ಷೇಪಿಸುತ್ತಲೇ ಇದೆ. ಅಸ್ಪೃಶ್ಯತೆ ಆಚರಣೆಯಿಂದ ಸಾಮಾಜಿಕವಾಗಿ ತಾರತಮ್ಯ ಅನುಭವಿಸುತ್ತಿರುವ ಸಮುದಾಯಗಳಿಗೆ ಮಾತ್ರ ಪರಿಶಿಷ್ಟ ಜಾತಿ ಸ್ಥಾನಮಾನ ನೀಡಲಾಗುತ್ತದೆ ಎಂದು 1978ರಲ್ಲಿ ಅದು ಅಭಿಪ್ರಾಯ ಪಟ್ಟಿತ್ತು
- I2001ರಲ್ಲಿ ಈ ವಿಚಾರ ಮತ್ತೆ ಪ್ರಸ್ತಾಪವಾದಾಗಲೂ ಆರ್‌ಜಿಐ ತನ್ನ ಹಿಂದಿನ ಅಭಿಪ್ರಾಯವನ್ನೇ ವ್ಯಕ್ತಪಡಿಸಿತ್ತು. ಇಸ್ಲಾಂ ಮತ್ತು ಕ್ರೈಸ್ತ ಧರ್ಮಕ್ಕೆ ಮತಾಂತರಗೊಂಡ ದಲಿತರು ಭಿನ್ನವಾದ ಜಾತಿಯ ಗುಂಪುಗಳಿಗೆ ಸೇರಿದವರು. ಈ ಕಾರಣದಿಂದ ‘ಒಂದು ಜನಾಂಗೀಯ ಗುಂಪಿ’ ಗೆ ಸೇರಿದವರು ಎಂದು ವರ್ಗೀಕರಿಸಲು ಸಾಧ್ಯವಿಲ್ಲ ಎಂದು ಆರ್‌ಜಿಐ ಪ್ರತಿಪಾದಿಸಿತ್ತು. ಅಸ್ಪೃಶ್ಯತೆ ಆಚರಣೆ ಹಿಂದೂ ಧರ್ಮ ಮತ್ತು ಅದರ ಕವಲುಗಳಲ್ಲಿ ಮಾತ್ರ ಇದೆ. ಕ್ರೈಸ್ತ ಮತ್ತು ಇಸ್ಲಾಂನಲ್ಲಿ ಅಂತಹ ಆಚರಣೆ ಇಲ್ಲದಿರುವುದರಿಂದ, ಪರಿಶಿಷ್ಟ ಜಾತಿಯವರು ಈ ಧರ್ಮಗಳಿಗೆ ಮತಾಂತರಗೊಂಡಾಗ ಅವರ ಎಸ್‌ಸಿ ಮಾನ್ಯತೆ ಹೋಗುತ್ತದೆ ಎಂಬುದು ಅದರ ಮತ್ತೊಂದು ವಾದ. ಸುಪ್ರೀಂ ಕೋರ್ಟ್‌ನಲ್ಲಿ ಕೇಂದ್ರ ಕೂಡ ಇದೇ ವಾದವನ್ನು ಮಂಡಿಸಿದೆ

Dr. Rajkumar IAS/KAS Academy

- Iದಲಿತ ಕ್ರೈಸ್ತರನ್ನು ಎಸ್‌ಸಿಗೆ ಸೇರಿದವರು ಎಂದು ಪರಿಗಣಿಸುವ ಪ್ರಸ್ತಾವವನ್ನು 2019ರಲ್ಲಿ ತಿರಸ್ಕರಿಸಿದ್ದ ಕೇಂದ್ರ ಸರ್ಕಾರ, ಅವರನ್ನು ಎಸ್‌ಸಿ ವರ್ಗದಿಂದ ಹೊರಗಿಡುವುದಕ್ಕೆ 1936ರ ಬ್ರಿಟಿಷ್ ಆಡಳಿತದ ಆದೇಶವನ್ನು ಉಲ್ಲೇಖಿಸಿತ್ತು. ಬ್ರಿಟಿಷ್ ಸರ್ಕಾರವು ಜಾತಿಗಳನ್ನು ಪಟ್ಟಿ ಮಾಡುವಾಗ 'ಶೋಷಿತ ವರ್ಗಗಳು ' ಎಂಬ ವರ್ಗೀಕರಣ ಮಾಡಿತ್ತು. ಆದರೆ, ಈ ವರ್ಗಗಳಲ್ಲಿರುವ ಜಾತಿಯಿಂದ ಭಾರತೀಯ ಕ್ರೈಸ್ತರನ್ನು ಹೊರಗಿಟ್ಟಿತ್ತು
- Iದಲಿತ ಕ್ರೈಸ್ತರು ಮತ್ತು ದಲಿತ ಮುಸ್ಲಿಮರಿಗೆ ಎಸ್‌ಸಿ ಮಾನ್ಯತೆ ನೀಡಬೇಕು ಎಂದು ಸುಪ್ರೀಂ ಕೋರ್ಟ್‌ನಲ್ಲಿ ವಾದಿಸುತ್ತಿರುವವರು, 2007ರಲ್ಲಿ ಯುಪಿಎ ಸರ್ಕಾರ ರಚಿಸಿದ್ದ ರಂಗನಾಥ್ ಮಿಶ್ರಾ ನೇತೃತ್ವದ ಸಮಿತಿ ಮಾಡಿದ ಶಿಫಾರಸುಗಳನ್ನು ಉಲ್ಲೇಖಿಸುತ್ತಿದ್ದಾರೆ. 'ಜನರು ಸ್ವಯಂಪ್ರೇರಿತರಾಗಿ ಮತಾಂತರಗೊಂಡಿರುವುದು ಅವರು ಹೊಂದಿರುವ ಎಸ್‌ಸಿ ಮಾನ್ಯತೆ ಮೇಲೆ ಪರಿಣಾಮ ಬೀರಬಾರದು' ಎಂದು ಸಮಿತಿ ಹೇಳಿತ್ತು. ಆದರೆ, ಈ ವರದಿಯನ್ನು ಸರ್ಕಾರ ಒಪ್ಪಿಕೊಂಡಿಲ್ಲ ಎಂದು ಎನ್‌ಡಿಎ ಸರ್ಕಾರ ಸುಪ್ರೀಂ ಕೋರ್ಟ್‌ಗೆ ತಿಳಿಸಿತ್ತು
- Iಕಳೆದ ವರ್ಷ ಪ್ರಕರಣವೊಂದರಲ್ಲಿ ತಮಿಳುನಾಡಿನ ಮಹಿಳೆಯೊಬ್ಬರಿಗೆ ಪರಿಶಿಷ್ಟ ಜಾತಿಯ ಮಾನ್ಯತೆ ನೀಡಲು ಸುಪ್ರೀಂ ಕೋರ್ಟ್ ನಿರಾಕರಿಸಿತ್ತು. ಆ ಮಹಿಳೆಯ ಕುಟುಂಬವು ಕ್ರೈಸ್ತ ಧರ್ಮಕ್ಕೆ ಮತಾಂತರವಾಗಿರುವುದು ವಿಚಾರಣೆ ವೇಳೆ ದೃಢಪಟ್ಟಿತ್ತು
- Iಕ್ರೈಸ್ತ ಧರ್ಮಕ್ಕೆ ಮತಾಂತರ ಆದ ತಕ್ಷಣ ಜನರು ಪರಿಶಿಷ್ಟ ಜಾತಿಯ ಮಾನ್ಯತೆ ಕಳೆದುಕೊಳ್ಳುತ್ತಾರೆ. ಆ ಬಳಿಕ ಅವರಿಗೆ ಎಸ್‌ಸಿ/ಎಸ್‌ಟಿ ದೌರ್ಜನ್ಯ ತಡೆ ಕಾಯ್ದೆಯ ರಕ್ಷಣೆ ಸಿಗುವುದಿಲ್ಲ ಎಂದು ಆಂಧ್ರ ಪ್ರದೇಶದ ಹೈಕೋರ್ಟ್ ಈ ವರ್ಷದ ಏಪ್ರಿಲ್‌ನಲ್ಲಿ ಪ್ರಕರಣವೊಂದರಲ್ಲಿ ತೀರ್ಪು ನೀಡಿತ್ತು

## ❖ ಸಗಟು ಹಣದುಬ್ಬರ ಏರಿಕೆ: ಆಹಾರ ಪದಾರ್ಥಗಳ ಬೆಲೆ ಹೆಚ್ಚಳದಿಂದ ಹಣದುಬ್ಬರ ಏರಿಕೆ: ಕೇಂದ್ರ

**ಸಂದರ್ಭ:** ದೇಶದ ಸಗಟು ಬೆಲೆ ಸೂಚ್ಯಂಕ (ಡಬ್ಲ್ಯುಪಿಐ) ಆಧಾರಿತ ಹಣದುಬ್ಬರವು ಆಗಸ್ಟ್‌ನಲ್ಲಿ ನಾಲ್ಕು ತಿಂಗಳ ಗರಿಷ್ಠ ಮಟ್ಟಕ್ಕೆ ಏರಿಕೆಯಾಗಿದ್ದು, ಶೇ 0.52ರಷ್ಟು ಆಗಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ.

- ಆಹಾರ ಪದಾರ್ಥಗಳು ಮತ್ತು ತಯಾರಿಕಾ ವಸ್ತುಗಳ ಬೆಲೆ ಹೆಚ್ಚಳದಿಂದ ಸಗಟು ಹಣದುಬ್ಬರವು ಏರಿಕೆಯಾಗಿದೆ ಎಂದು ಅದು ತಿಳಿಸಿದೆ.
- **ಸಗಟು ಹಣದುಬ್ಬರ ಪ್ರಮಾಣವು ಜುಲೈ ಮತ್ತು ಜೂನ್‌ನಲ್ಲಿ ಕ್ರಮವಾಗಿ ಶೇ (–)0.58 ಮತ್ತು ಶೇ (–) 0.19ರಷ್ಟಿತ್ತು. ಏಪ್ರಿಲ್‌ನಲ್ಲಿ ಇದು ಶೇ 0.85ರಷ್ಟಿತ್ತು. ಕಳೆದ ಆಗಸ್ಟ್‌ನಲ್ಲಿ ಶೇ 1.25ರಷ್ಟು ಇತ್ತು ಎಂದು ತಿಳಿಸಿದೆ.**
- ಆಹಾರ ಪದಾರ್ಥಗಳು, ತಯಾರಿಕಾ ವಲಯದ ವಸ್ತುಗಳು, ಆಹಾರೇತರ ಉತ್ಪನ್ನಗಳು, ಸಾರಿಗೆ ಉಪಕರಣಗಳ ಬೆಲೆ ಹೆಚ್ಚಳವಾಗಿದೆ. ಇದು ಸಗಟು ಹಣದುಬ್ಬರ ಏರಿಕೆಗೆ ಪ್ರಮುಖ ಕಾರಣ ಎಂದು ಕೇಂದ್ರ ತಿಳಿಸಿದೆ.
- ಜುಲೈನಲ್ಲಿ ಆಹಾರ ಪದಾರ್ಥಗಳ ಬೆಲೆ ಇಳಿಕೆ ಪ್ರಮಾಣ ಶೇ 6.29ರಷ್ಟಿತ್ತು. ಇದು ಆಗಸ್ಟ್‌ನಲ್ಲಿ ಶೇ 3.06ಕ್ಕೆ ತಗ್ಗಿದೆ. ತರಕಾರಿಗಳು ಮತ್ತು ಧಾನ್ಯಗಳ ಬೆಲೆ ಇಳಿಕೆ ಪ್ರಮಾಣ ಕ್ರಮವಾಗಿ ಶೇ 14.18 ಮತ್ತು ಶೇ 14.85ರಷ್ಟು ಆಗಿದೆ. ಜುಲೈನಲ್ಲಿ ಇದು ಕ್ರಮವಾಗಿ ಶೇ 28.96 ಮತ್ತು ಶೇ 15.12ರಷ್ಟು ಇತ್ತು.
- ಜಿಎಸ್‌ಟಿ ಪರಿಷ್ಕರಣೆಯಿಂದ ಹಣದುಬ್ಬರವು ಇಳಿಕೆಯಾಗುವ ನಿರೀಕ್ಷೆ ಇದೆ ಎಂದು ಪಿಎಚ್‌ಡಿಸಿಸಿಐ ಅಧ್ಯಕ್ಷ ಹೇಮಂತ್ ಜೈನ್ ಹೇಳಿದ್ದಾರೆ.
- ಕಚ್ಚಾ ತೈಲ, ಸರಕುಗಳ ಬೆಲೆ ಏರಿಕೆ ಮತ್ತು ಡಾಲರ್ ಎದುರು ರೂಪಾಯಿ ಮೌಲ್ಯವು ಇಳಿಕೆಯಿಂದಾಗಿ ಸೆಪ್ಟೆಂಬರ್ ನಲ್ಲಿ ಸಗಟು ಹಣದುಬ್ಬರವು ಏರಿಕೆ ಕಾಣುವ ನಿರೀಕ್ಷೆ ಇದೆ ಎಂದು ಐಸಿಆರ್‌ಎ ಅಂದಾಜಿಸಿದೆ.
- **ಆಹಾರ ಪದಾರ್ಥಗಳ ಬೆಲೆ ಏರಿಕೆ ಯಿಂದ ಚಿಲ್ಲರೆ ಹಣದುಬ್ಬರವು ಆಗಸ್ಟ್ ನಲ್ಲಿ ಶೇ 2.07ರಷ್ಟು ದಾಖಲಾಗಿತ್ತು.**

## ❖ ಅಮೆರಿಕಕ್ಕೆ ರಫ್ತು ಆಗಸ್ಟ್‌ನಲ್ಲಿ ಇಳಿಕೆ

**ಸಂದರ್ಭ:** ಭಾರತದಿಂದ ಅಮೆರಿಕಕ್ಕೆ ಆಗುವ ರಫ್ತುಗಳ ಪ್ರಮಾಣವು ಜುಲೈಗೆ ಹೋಲಿಸಿದರೆ ಆಗಸ್ಟ್‌ನಲ್ಲಿ ಶೇಕಡ 14ರಷ್ಟು ಕಡಿಮೆ ಆಗಿದೆ.

- ಭಾರತದ ಸರಕುಗಳ ಮೇಲೆ ಅಮೆರಿಕವು ಆಗಸ್ಟ್‌ನಿಂದ ಶೇ 50ರಷ್ಟು ತೆರಿಗೆ ವಿಧಿಸುತ್ತಿದೆ. ಆಗಸ್ಟ್‌ನಲ್ಲಿ ಭಾರತದಿಂದ ಅಮೆರಿಕಕ್ಕೆ ₹60,464 ಕೋಟಿ ಮೌಲ್ಯದ ಸರಕುಗಳು, ಸೇವೆಗಳು ರಫ್ತಾಗಿವೆ. ಜುಲೈನಲ್ಲಿ ರಫ್ತು ಮೊತ್ತವು ₹70,512 ಕೋಟಿ ಆಗಿತ್ತು.
- ಅಮೆರಿಕಕ್ಕೆ ಆಗುವ ರಫ್ತಿನ ಮೊತ್ತ ಕಡಿಮೆ ಆಗಿದ್ದರೂ, ಭಾರತದ ರಫ್ತು ಪಟ್ಟಿಯಲ್ಲಿ ಅಮೆರಿಕವು ಆಗಸ್ಟ್ ನಲ್ಲಿಯೂ ಮೊದಲ ಸ್ಥಾನದಲ್ಲಿ ಮುಂದುವರಿದಿದೆ.
- ಹಿಂದಿನ ವರ್ಷದ ಆಗಸ್ಟ್‌ಗೆ ಹೋಲಿಸಿದರೆ ಈ ವರ್ಷದ ಆಗಸ್ಟ್‌ನಲ್ಲಿ ಅಮೆರಿಕಕ್ಕೆ ರಫ್ತು ಪ್ರಮಾಣವು ಶೇ 7.15ರಷ್ಟು ಹೆಚ್ಚಾಗಿದೆ ಎಂದು ವಾಣಿಜ್ಯ ಸಚಿವಾಲಯದ ಅಂಕಿ-ಅಂಶಗಳು ಹೇಳಿವೆ.
- ಅಮೆರಿಕದ ನಂತರದ ಸ್ಥಾನದಲ್ಲಿ ಯುಎಇ, ನೆದರ್ಲೆಂಡ್ಸ್, ಚೀನಾ, ಬ್ರಿಟನ್ ಇವೆ.
- ಆಗಸ್ಟ್ 7ರಿಂದ ಅನ್ವಯ ಆಗುವಂತೆ ಅಮೆರಿಕವು ಭಾರತದ ಸರಕುಗಳ ಮೇಲೆ ಶೇ 25ರಷ್ಟು ತೆರಿಗೆ ವಿಧಿಸಿದೆ. ರಷ್ಯಾದಿಂದ ಕಚ್ಚಾ ತೈಲ ಖರೀದಿಸುತ್ತಿರುವುದಕ್ಕಾಗಿ ಅಮೆರಿಕವು ಆಗಸ್ಟ್ 27ರಿಂದ ಅನ್ವಯ ಆಗುವಂತೆ ಭಾರತದ ಸರಕುಗಳ ಮೇಲೆ ಹೆಚ್ಚುವರಿಯಾಗಿ ಶೇ 25ರಷ್ಟು ತೆರಿಗೆ ವಿಧಿಸುತ್ತಿದೆ.

## ❖ ಆರ್‌ಇಐಟಿ 'ಈಕ್ವಿಟಿ' ಎಂದು ಪರಿಗಣನೆ

**ಸಂದರ್ಭ:** ಮ್ಯೂಚುವಲ್ ಫಂಡ್‌ಗಳ ಪಾಲಿಗೆ ರಿಯಲ್ ಎಸ್ಟೇಟ್ ಇನ್ವೆಸ್ಟ್‌ಮೆಂಟ್ ಟ್ರಸ್ಟ್‌ಗಳನ್ನು (ಆರ್ ಇಐಟಿ) 'ಈಕ್ವಿಟಿ' ಎಂದು ವರ್ಗೀಕರಿಸಲು ಭಾರತೀಯ ಷೇರುಪೇಟೆ ನಿಯಂತ್ರಣ ಮಂಡಳಿಯು (ಸೆಬಿ) ತೀರ್ಮಾನಿಸಿರುವುದು ಪ್ರಗತಿಪರ ನಡೆ ಎಂದು ಉದ್ಯಮ ವಲಯ ಹೇಳಿದೆ.

- ಸೆಬಿ ನಡೆಯು ಆರ್‌ಇಐಟಿಗಳಲ್ಲಿ ಹೂಡಿಕೆದಾರರ ಭಾಗವಹಿಸುವಿಕೆಯನ್ನು ಬಲಪಡಿಸುತ್ತದೆ ಎಂದು ಉದ್ಯಮದ ಪ್ರತಿನಿಧಿಗಳು ಹೇಳಿದ್ದಾರೆ.
- ಆರ್‌ಇಐಟಿಗಳಲ್ಲಿ ಮ್ಯೂಚುವಲ್ ಫಂಡ್‌ಗಳ ಹೂಡಿಕೆಯನ್ನು ಹೆಚ್ಚು ಮಾಡುವ ಉದ್ದೇಶದಿಂದ ಸೆಬಿ ಕಳೆದ ವಾರ, **'ಸೆಬಿ (ಮ್ಯೂಚುವಲ್ ಫಂಡ್ಸ್) ನಿಯಮ – 1996'ಕ್ಕೆ ತಿದ್ದುಪಡಿ** ತರಲು ಒಪ್ಪಿಗೆ ನೀಡಿದೆ. ತಿದ್ದುಪಡಿ ತಂದು ಆರ್‌ಇಐಟಿಗಳನ್ನು 'ಈಕ್ವಿಟಿ' ಎಂದು ವರ್ಗೀಕರಿಸಲಾಗುತ್ತದೆ. ಆದರೆ ಮೂಲಸೌಕರ್ಯ ಹೂಡಿಕೆ ಟ್ರಸ್ಟ್‌ಗಳ ವರ್ಗೀಕರಣವನ್ನು 'ಹೈಬ್ರಿಡ್' ಎಂದೇ ಉಳಿಸಿಕೊಳ್ಳಲಾಗುತ್ತದೆ.
- ಸೆಬಿ ಕೈಗೊಂಡಿರುವ ತೀರ್ಮಾನದ ಪರಿಣಾಮವಾಗಿ ರಿಯಲ್ ಎಸ್ಟೇಟ್ ವಲಯದಲ್ಲಿ ಹೂಡಿಕೆ ಇನ್ನಷ್ಟು ಹೆಚ್ಚಾಗುತ್ತದೆ, ಇನ್ನಷ್ಟು ಹೆಚ್ಚು ಆರ್‌ಇಐಟಿಗಳು ಭಾರತದ ಷೇರುಪೇಟೆ ಗಳಲ್ಲಿ ನೋಂದಾಯಿತವಾಗಲು ಇದು ಉತ್ತೇಜನ ನೀಡುತ್ತದೆ ಎಂದು ಭಾರತೀಯ ಆರ್‌ಇಐಟಿಗಳ ಸಂಘಟನೆಯು (ಐಆರ್‌ಎ) ಹೇಳಿದೆ. ಷೇರುಪೇಟೆ ನೋಂದಾಯಿತ ಆರ್‌ಇಐಟಿಗಳ ಪ್ರತಿನಿಧಿಗಳು ಕೂಡ ಇದೇ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.
- ಆರ್‌ಇಐಟಿಗಳು ಆದಾಯ ತಂದುಕೊಡುವ ರಿಯಲ್ ಎಸ್ಟೇಟ್ ಆಸ್ತಿಗಳ ಮಾಲೀಕತ್ವ ಹೊಂದಿರುತ್ತವೆ ಅಥವಾ ಅಂತಹ ಆಸ್ತಿಗಳನ್ನು ನಿರ್ವ ಹಿಸುತ್ತಿರುತ್ತವೆ. ಅವು ಹೂಡಿಕೆದಾರರಿಗೆ ಆಸ್ತಿಯನ್ನು ನೇರವಾಗಿ ಖರೀದಿಸದೆಯೇ ಅವುಗಳ ಆದಾಯದಲ್ಲಿ ಒಂದು ಪಾಲನ್ನು ಪಡೆದುಕೊಳ್ಳಲು ನೆರವಾಗುತ್ತವೆ.
- ಜಾಗತಿಕ ಮಟ್ಟದಲ್ಲಿ ಕೂಡ ಆರ್‌ಇಐಟಿಗಳು ಈಕ್ವಿಟಿ ಸೂಚ್ಯಂಕಗಳ ಭಾಗವಾಗಿವೆ, ಸೆಬಿ ಈಗ ತೆಗೆದು ಕೊಂಡಿ ರುವ ತೀರ್ಮಾನವು ಪ್ರಗತಿಪರವಾದುದು ಎಂದು ಐಆರ್‌ಎ ಹೇಳಿದೆ. ದೇಶದಲ್ಲಿ ಈಗ ಐದು ಆರ್ ಇಐಟಿಗಳು ಷೇರುಪೇಟೆಯಲ್ಲಿ ನೋಂದಾಯಿತ ಆಗಿವೆ.

## ❖ 'ವಂತಾರ' ಕ್ಕೆ ಎಸ್‌ಐಟಿ ಕ್ಲೀನ್‌ಚಿಟ್'

**ಸಂದರ್ಭ:** ವನ್ಯಜೀವಿ ರಕ್ಷಣಾ ಮತ್ತು ಪುನರ್ವಸತಿ ಕೇಂದ್ರ 'ವಂತಾರ' ದ ವಿರುದ್ಧದ ಆರೋಪಗಳ ಬಗ್ಗೆ ತನಿಖೆ ನಡೆಸಿರುವ ಸುಪ್ರೀಂ ಕೋರ್ಟ್ ನೇಮಿಸಿದ್ದ ವಿಶೇಷ ತನಿಖಾ ತಂಡ (ಎಸ್‌ಐಟಿ) ಕ್ಲೀನ್ ಚಿಟ್ ನೀಡಿದೆ.

Dr Rajkumar IAS Academy

- ‘ಅನಂತ್ ಅಂಬಾನಿ ಅವರು ಜಾಮ್‌ನಗರದಲ್ಲಿ ನಡೆಸುತ್ತಿರುವ ‘ವಂತಾರ’ ದಲ್ಲಿ ನಿಯಮಗಳನ್ನು ಪಾಲನೆ ಮಾಡಲಾಗುತ್ತಿದೆ ಎಂದು ಎಸ್‌ಐಟಿ ವರದಿ ನೀಡಿದ್ದು, ಅದನ್ನು ಸ್ವೀಕರಿಸಲಾಗಿದೆ’ ಎಂದು ಸುಪ್ರೀಂ ಕೋರ್ಟ್ ಹೇಳಿದೆ.
- ‘ವಂತಾರದ ಕಾರ್ಯಚಟುವಟಿಕೆ ಬಗ್ಗೆ ನಿವೃತ್ತ ನ್ಯಾಯಮೂರ್ತಿ ಜೆ. ಚಲಮೇಶ್ವರ್ ಅವರ ನೇತೃತ್ವದ ಎಸ್‌ಐಟಿ ನೀಡಿರುವ ವರದಿ ತೃಪ್ತಿ ನೀಡಿದೆ. ಈ ಪ್ರಕರಣವನ್ನು ಮುಕ್ತಾಯಗೊಳಿಸುತ್ತಿದ್ದೇವೆ’ ಎಂದು ನ್ಯಾಯಮೂರ್ತಿಗಳಾದ ಪಂಕಜ್ ಮಿತ್ತಲ್, ಪಿ.ಬಿ.ವರಾಳೆ ಅವರ ಪೀಠ ತಿಳಿಸಿದೆ.
- ‘ಇಂತಹ ಆರೋಪಗಳನ್ನು ಇನ್ನೂ ಮುಂದೆ ಪರಿಗಣಿಸಲಾಗುವುದಿಲ್ಲ. ತಜ್ಞರ ಸಹಕಾರದೊಂದಿಗೆ ತನಿಖಾ ತಂಡವು ಎಲ್ಲ ವಿಧದಲ್ಲಿ ಪರಿಶೀಲನೆ ನಡೆಸಿದೆ. ತನಿಖಾ ತಂಡ ನೀಡಿರುವ ವರದಿಯ ಆಧಾರದಲ್ಲಿಯೇ ನಾವು ಮುಂದಿನ ಕ್ರಮಕೈಗೊಳ್ಳುತ್ತೇವೆ. ಈ ವರದಿಯ ಶಿಫಾರಸು ಮತ್ತು ಸಲಹೆಗಳ ಆಧಾರದಲ್ಲಿ ಕ್ರಮಕೈಗೊಳ್ಳಲು ಎಲ್ಲ ಅಧಿಕಾರಿಗಳು ಸ್ವತಂತ್ರರಾಗಿರುತ್ತಾರೆ’ ಎಂದು ಹೇಳಿದೆ.
- ಭಾರತ ಮತ್ತು ವಿದೇಶಗಳಿಂದ ಕಾನೂನುಬಾಹಿರವಾಗಿ ‘ವಂತಾರ’ ವು ವನ್ಯಪ್ರಾಣಿಗಳನ್ನು ಪಡೆದುಕೊಳ್ಳುತ್ತಿದೆ ಎಂಬುದಾಗಿ ಸಾಮಾಜಿಕ ಜಾಲತಾಣಗಳಲ್ಲಿ ಮಾಡಲಾಗಿರುವ ಆರೋಪಗಳು ಮತ್ತು ಈ ಬಗ್ಗೆ ಎನ್‌ಜಿಒ ಮತ್ತು ವನ್ಯಜೀವಿ ಸಂಘಟನೆಗಳು ನೀಡಿದ್ದ ದೂರುಗಳ ಆಧಾರದಲ್ಲಿ ಸಲ್ಲಿಕೆಯಾಗಿದ್ದ ಎರಡು ಅರ್ಜಿಗಳನ್ನು ಪರಿಗಣಿಸಿದ್ದ ಸುಪ್ರೀಂ ಕೋರ್ಟ್, ಈ ಕುರಿತ ತನಿಖೆಗಾಗಿ ಆಗಸ್ಟ್ 25ರಂದು ಎಸ್ ಐಟಿ ರಚಿಸಿತ್ತು.
- ನ್ಯಾ. ಚಲಮೇಶ್ವರ್ ಅವರ ನೇತೃತ್ವದ ಎಸ್‌ಐಟಿಗೆ ಹೈಕೋರ್ಟ್‌ನ ನಿವೃತ್ತ ಮುಖ್ಯ ನ್ಯಾಯಮೂರ್ತಿ ರಾಘವೇಂದ್ರ ಚೌಹಾಣ್, ಮುಂಬೈನ ಮಾಜಿ ಪೊಲೀಸ್ ಆಯುಕ್ತ ಹೇಮಂತ್ ನಗ್ರಾಲೆ ಮತ್ತು ಕಂದಾಯ ಸೇವೆಗಳ ಹಿರಿಯ ಅಧಿಕಾರಿ ಅನಿಷ್ ಗುಪ್ತಾ ಅವರನ್ನು ಸದಸ್ಯರನ್ನಾಗಿ ನೇಮಿಸಲಾಗಿತ್ತು.
- ವಂತಾರದಲ್ಲಿನ ಬಂಧಿತ ಆನೆಗಳನ್ನು ಅವುಗಳ ಮಾಲೀಕರಿಗೆ ಹಿಂದಿರುಗಿಸಲು ಮೇಲ್ವಿಚಾರಣಾ ಸಮಿತಿ ರಚಿಸಬೇಕು ಎಂದು ಕೋರಿ ಸಿ.ಆರ್. ಜಯ ಸುಕಿನ್ ಸಲ್ಲಿಸಿರುವ ಅರ್ಜಿ ಅಸ್ಪಷ್ಟವಾಗಿದೆ ಎಂದು ಸುಪ್ರೀಂಕೋರ್ಟ್ ಆ.14ರಂದು ಹೇಳಿತ್ತು.

## ❖ ವೈಶಾಲಿಗೆ ಗ್ರ್ಯಾಂಡ್ ಸ್ವಿಸ್ ಚೆಸ್ ಕಿರೀಟ: ಮುಂದಿನ ವರ್ಷದ ಕ್ಯಾಂಡಿಡೇಟ್ಸ್‌ಗೂ ಅರ್ಹತೆ

**ಸಂದರ್ಭ:** ಭಾರತದ ಗ್ರ್ಯಾಂಡ್ ಮಾಸ್ಟರ್ ಆರ್.ವೈಶಾಲಿ ಸತತ ಎರಡನೇ ಬಾರಿ ಫಿಡೆ ಮಹಿಳಾ ಗ್ರ್ಯಾಂಡ್ ಸ್ವಿಸ್ ಟೂರ್ನಿಯಲ್ಲಿ ಚಾಂಪಿಯನ್ ಕಿರೀಟ ಧರಿಸಿದರು. ಆ ಮೂಲಕ ಮುಂದಿನ ವರ್ಷದ ಮಹಿಳಾ ಕ್ಯಾಂಡಿಡೇಟ್ಸ್ ಚೆಸ್ ಟೂರ್ನಿಯಲ್ಲಿ ಆಡುವ ಅರ್ಹತೆಯನ್ನೂ ಸಂಪಾದಿಸಿದರು.

- ಮಾಜಿ ವಿಶ್ವ ಮಹಿಳಾ ಚಾಂಪಿಯನ್ ಝೊಂಗ್‌ಯಿ ತಾನ್ ಜೊತೆ ಹೋರಾಡಿ ಡ್ರಾ ಸಾಧಿಸಿದ ಅವರು ಅಂತಿಮವಾಗಿ 11 ಸುತ್ತುಗಳಿಂದ 8 ಅಂಕ ಕಲೆಹಾಕಿದರು.
- ಅಜರ್‌ಬೈಜಾನ್‌ನ ಉಲ್ವಿಯಾ ಫತಾಲಿಯೇವಾ ಜೊತೆ ಡ್ರಾ ಮಾಡಿಕೊಂಡ ರಷ್ಯಾದ ಕ್ಯಾತರಿನಾ ಲಾಗ್ನೊ ಸಹ ಎಂಟು ಅಂಕ ಪಡೆದರೂ ಟೈಬ್ರೇಕರ್‌ನಲ್ಲಿ ಎರಡನೇ ಸ್ಥಾನಕ್ಕೆ ಸರಿದರು. ಈ ಟೂರ್ನಿಯಿಂದ ಇಬ್ಬರು ಕ್ಯಾಂಡಿಡೇಟ್ಸ್‌ಗೆ ಅರ್ಹತೆ ಪಡೆಯುವ ಕಾರಣ ಲಾಗ್ನೊ ಸಹ ಅವಕಾಶ ಪಡೆದರು.
- ಈ ಟೂರ್ನಿಯಲ್ಲಿ ವೈಶಾಲಿ ಆರು ಪಂದ್ಯ ಗೆದ್ದು, ಒಂದು ಸೋತು, ನಾಲ್ಕು ಡ್ರಾ ಮಾಡಿಕೊಂಡರು.
- **ವೈಶಾಲಿ ಅವರು ಕ್ಯಾಂಡಿಡೇಟ್ಸ್‌ಗೆ ಅರ್ಹತೆ ಪಡೆದ ಭಾರತದ ಮೂರನೇ ಆಟಗಾರ್ತಿ.** ಜಾರ್ಜಿಯಾದ ಬಟುಮಿಯಲ್ಲಿ ವಿಶ್ವಕಪ್ ಗೆದ್ದುಕೊಂಡಿದ್ದ ದಿವ್ಯಾ ದೇಶಮುಖ್ ಮತ್ತು ರನ್ನರ್ ಅಪ್ ಆಗಿದ್ದ ಕೋನೇರು ಹಂಪಿ ಅವರು ಈ ಮೊದಲೇ ಅರ್ಹತೆ ಪಡೆದಿದ್ದರು.
- **ಕಜಾಕಸ್ತಾನದ ಬಿಬಿಸಾರ ಅಸೌನ್‌ಬಯೇವಾ, ಚೀನಾದ ತಾನ್ ಝೊಂಗ್‌ಯಿ ಮತ್ತು ಯಕ್ಸಿನ್ ಸಾಂಗ್ (ತಲಾ 7.5) ಕ್ರಮವಾಗಿ ಮೂರರಿಂದ ಐದರವರೆಗಿನ ಸ್ಥಾನಗಳನ್ನು ಪಡೆದರು.**
- ಓಪನ್ ವಿಭಾಗದಲ್ಲಿ ಡಚ್ ಗ್ರ್ಯಾಂಡ್‌ಮಾಸ್ಟರ್ ಅನಿಶ್ ಗಿರಿ ಎಂಟು ಅಂಕ ಗಳಿಸಿ ಪ್ರಶಸ್ತಿ ಗೆದ್ದುಕೊಂಡರು. ಗಿರಿ ಜೊತೆಗೆ ಈ ಟೂರ್ನಿಯಲ್ಲಿ ಎರಡನೇ ಸ್ಥಾನ ಪಡೆದ ಮಥಾಯಸ್ ಬ್ಲೂಬಾಮ್, ಹಿಕಾರು ನಕಾಮುರಾ

(ರೇಟಿಂಗ್ ಆಧಾರ), ಆರ್. ಪ್ರಜ್ಞಾನಂದ ಮತ್ತು ಫ್ಯಾಬಿಯಾನ ಕರುವಾನ ಅವರು ಕ್ಯಾಂಡಿಡೇಟ್ಸ್‌ಗೆ ಅರ್ಹತೆ ಪಡೆಯುವುದು ಖಚಿತವಾಗಿದೆ.

- ಕೊನೆಯ ಮೂರು ಸ್ಥಾನಗಳು, ಗೋವಾದಲ್ಲಿ ಮುಂದಿನ ತಿಂಗಳು ನಡೆಯುವ ವಿಶ್ವಕಪ್‌ನಲ್ಲಿ ತೀರ್ಮಾನವಾಗಲಿವೆ. ಕ್ಯಾಂಡಿಡೇಟ್ಸ್ ವಿಜೇತರು ಹಾಲಿ ವಿಶ್ವ ಚಾಂಪಿಯನ್ ಗುಕೇಶ್ ಅವರಿಗೆ ಸವಾಲು ಹಾಕುವ ಅರ್ಹತೆ ಪಡೆಯುತ್ತಾರೆ.
- ಭಾರತದ ಅರ್ಜುನ್ ಇರಿಗೇಶಿ, ನಿಹಾಲ್ ಸರಿನ್, ವಿದಿತ್ ಗುಜರಾತಿ ತಲಾ 7 ಅಂಕ, ಪ್ರಣವ್ ವಿ. 6.5 ಅಂಕ ಪಡೆದರು.

## ❖ ವಿಶ್ವದಾಖಲೆಯೊಂದಿಗೆ ಡುಪ್ಲಾಂಟಿಸ್‌ಗೆ ಚಿನ್ನ

- ಸ್ವೀಡನ್‌ನ ದಿಗ್ಗಜ ಅಥ್ಲೀಟ್ ಮೊಂಡೊ ಡುಪ್ಲಾಂಟಿಸ್ ಅವರು ಪೋಲ್‌ವಾಲ್ಟ್ ನಲ್ಲಿ ವಿಶ್ವದಾಖಲೆಯೊಂದಿಗೆ ಮೂರನೇ ಬಾರಿ ವಿಶ್ವ ಚಾಂಪಿಯನ್ ಷಿಪ್ ನಲ್ಲಿ ಚಿನ್ನದ ಪದಕ ಗೆದ್ದರು.
- 25 ವರ್ಷ ವಯಸ್ಸಿನ ಈ ತಾರೆ, ಟೋಕಿಯೋದ ನ್ಯಾಷನಲ್ ಸ್ಟೇಡಿಯಂ ನಲ್ಲಿ 6.30 ಮೀ ಜಿಗಿದು 14ನೇ ಬಾರಿ ವಿಶ್ವ ದಾಖಲೆ ಸ್ಥಾಪಿಸಿದರು.

## ❖ ಪರಿಹಾರ ದರ ನಿಗದಿ

**ಸಂದರ್ಭ: ಆಲಮಟ್ಟಿ ಅಣೆಕಟ್ಟೆ ಎತ್ತರವನ್ನು 519.6 ಮೀಟರ್‌ನಿಂದ 524.256 ಮೀಟರ್‌ಗೆ ಎತ್ತರಿಸುವ 'ಕೃಷ್ಣಾ ಮೇಲ್ದಂಡೆ ಯೋಜನೆ-3'ನೇ ಹಂತದ ಯೋಜನೆಗಾಗಿ ಮುಳುಗಡೆ ಆಗುವ ಮತ್ತು ನಾಲೆಗಾಗಿ ಸ್ವಾಧೀನಪಡಿ ಸಿಕೊಳ್ಳುವ ಜಮೀನಿಗೆ ನಡೆದ ವಿಶೇಷ ಸಚಿವ ಸಂಪುಟ ಸಭೆಯಲ್ಲಿ ಪರಿಹಾರದ ದರ ನಿಗದಿ ಮಾಡಲಾಗಿದೆ.**

- 'ಪರಿಹಾರ ನಿಗದಿ ಮಾಡುವ ವಿಚಾರವಾಗಿ ರೈತರು, ಹೋರಾಟ ನಿರತ ಸಂಘಟನೆಗಳ ಮುಖಂಡರು, ಶಾಸಕರು ಮತ್ತು ಸಚಿವರ ಜತೆ ಹಲವು ಸುತ್ತಿನ ಚರ್ಚೆ ನಡೆಸಿದ್ದೇವೆ. ಸಂಪುಟ ಸಭೆಯಲ್ಲಿ ಸುದೀರ್ಘವಾಗಿ ಚರ್ಚಿಸಿ ನೀರಾವರಿ ಜಮೀನಿಗೆ ಎಕರೆಗೆ ₹40 ಲಕ್ಷ ಮತ್ತು ಒಣ ಭೂಮಿಗೆ ಎಕರೆಗೆ ₹30 ಲಕ್ಷ ಪರಿಹಾರ ನೀಡಲು ಒಪ್ಪಿಗೆ ನೀಡಲಾಗಿದೆ.
- ಅಲ್ಲದೇ, ಕಾಲುವೆಗಾಗಿ ಸುಮಾರು 51,837 ಎಕರೆ ಬೇಕಾಗುತ್ತದೆ. ಇದರಲ್ಲಿ 23,631 ಎಕರೆ ಭೂಮಿಯ ಸ್ವಾಧೀನ ಪ್ರಕ್ರಿಯೆ ನಡೆಸಿ, ಕಾಮಗಾರಿ ಕೈಗೊಳ್ಳಲಾಗಿದೆ. ಸ್ವಾಧೀನಪಡಿಸಿಕೊಂಡ ಜಮೀನಿಗೆ ಸಂಬಂಧಿಸಿದಂತೆ ನೀರಾವರಿ ಜಮೀನಿಗೆ ಎಕರೆಗೆ ₹30 ಲಕ್ಷ ಮತ್ತು ಒಣ ಭೂಮಿಗೆ ಎಕರೆಗೆ ₹25 ಲಕ್ಷ ದರ ನಿಗದಿ ಮಾಡಲು ತೀರ್ಮಾನಿಸಲಾಗಿದೆ. ಕಾಲುವೆ ನಿರ್ಮಾಣಕ್ಕಾಗಿ ಜಮೀನು ಕಳೆದುಕೊಂಡವರು ಯೋಜನೆಯ ಫಲಾನುಭವಿಗಳಾಗುತ್ತಾರೆ. ಆದ್ದರಿಂದ ಕಡಿಮೆ ದರ ನಿಗದಿ ಮಾಡಲಾಗಿದೆ.
- ಅಣೆಕಟ್ಟಿನ ಎತ್ತರ ಹೆಚ್ಚಿಸು ವುದರಿಂದ ಹಿನ್ನೀರಿನಿಂದ ಸುಮಾರು 75 ಸಾವಿರ ಎಕರೆಗೂ ಹೆಚ್ಚು ಜಮೀನು ಮುಳುಗಡೆಯಾಗುತ್ತದೆ. 5.94 ಲಕ್ಷ ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಒದಗಿಸಬಹುದು. ಇದರಿಂದ ಈ ಭಾಗದ ಜನರ ಜೀವನಮಟ್ಟವೂ ಸುಧಾರಣೆ ಆಗಲಿದೆ.
- 'ಭೂಸ್ವಾಧೀನದ ವಿಚಾರವಾಗಿ ನ್ಯಾಯಾಲಯದಲ್ಲಿ ಅನೇಕ ಪ್ರಕರಣಗಳ ವಿಚಾರಣೆ ನಡೆಯುತ್ತಿವೆ. ಸುಮಾರು 20 ಸಾವಿರ ಪ್ರಕರಣಗಳು ನ್ಯಾಯಾಲಯದಲ್ಲಿವೆ. 2013ರ ಭೂಸ್ವಾಧೀನ ಕಾಯ್ದೆ ಅನ್ವಯ ಈ ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ಇತ್ಯರ್ಥ ಮಾಡಿಕೊಳ್ಳಲು ತೀರ್ಮಾನಿಸಲಾಗಿದೆ. ನ್ಯಾಯಾಲಯದಲ್ಲಿ ಪ್ರಕರಣವಿಲ್ಲದ ಜಮೀನುಗಳನ್ನು ರೈತರಿಂದ ನೇರವಾಗಿ ಖರೀದಿ.
- '2013ರ ಭೂ ಸ್ವಾಧೀನ ಮತ್ತು ಪುನರ್ವಸತಿ ಕಾಯ್ದೆಯ ಸೆಕ್ಷನ್ 51ರ ಅಡಿ ಭೂಸ್ವಾಧೀನ, ಪುನರ್‌ವಸತಿ ಪ್ರಾಧಿಕಾರವನ್ನು ರಚಿಸಲು ಅವಕಾಶವಿದೆ. ಹೀಗಾಗಿ ರಾಜ್ಯ ಸರ್ಕಾರ ಇದೇ ಮೊದಲ ಬಾರಿಗೆ ಪ್ರಾಧಿಕಾರವನ್ನು ರಚಿಸಲಿದೆ. ನ್ಯಾಯಮೂರ್ತಿಗಳ ನೇತೃತ್ವದಲ್ಲಿ ಪ್ರಾಧಿಕಾರ ರಚನೆ ಆಗಲಿದೆ.

Dr. Rajkumar Academy

## ❖ ಕರಡಿ ‘ವಸಿಕರನ್’ ಗೆ ಕೃತಕ ಕಾಲು

**ಸಂದರ್ಭ: ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನದ ಕರಡಿ ರಕ್ಷಣಾ ಕೇಂದ್ರದಲ್ಲಿ ‘ವಸಿಕರನ್’ ಹೆಸರಿನ ಕರಡಿಗೆ ಮೂರು ದಿನಗಳಿಂದ ಕೈಗೊಳ್ಳಲಾಗಿದ್ದ ಕೃತಕ ಕಾಲು ಜೋಡಣೆ ಶಸ್ತ್ರಚಿಕಿತ್ಸೆ ಯಶಸ್ವಿಯಾಗಿದೆ.**

- ಇದರಿಂದಾಗಿ ಕರಡಿಯು ಮತ್ತೆ ಮೊದಲಿನಂತೆ ಮರ ಏರುವುದು, ನೆಲ ಕೆರೆಯುವುದು ಸೇರಿದಂತೆ ಇನ್ನಿತರ ಚಟುವಟಿಕೆಗಳಲ್ಲಿ ಸಕ್ರಿಯವಾಗಿದೆ.
- **ವಿಶ್ವದಲ್ಲೇ ಕರಡಿಗೆ ಕೃತಕ ಕಾಲು ಜೋಡಣೆ ಮಾಡಲಾದ ಮೊಟ್ಟಮೊದಲ ಪ್ರಕರಣ ಇದಾಗಿದೆ.**
- ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನ ಮತ್ತು ಕರ್ನಾಟಕ ಅರಣ್ಯ ಇಲಾಖೆ ಸಹಯೋಗದಲ್ಲಿ ಈ ಶಸ್ತ್ರಚಿಕಿತ್ಸೆ ನಡೆದಿದೆ. ಬಳ್ಳಾರಿ ಜಿಲ್ಲೆಯ ಅರಣ್ಯ ಪ್ರದೇಶದಲ್ಲಿ 2019ರಲ್ಲಿ ಬೇಟೆಗಾರರ ಬಲೆಗೆ ಸಿಲುಕಿ ಜೀವನ್ಮರಣ ಹೋರಾಟದಲ್ಲಿದ್ದ ‘ವಸಿಕರನ್’ ನನ್ನು ಇಲ್ಲಿಗೆ ತರಲಾಗಿತ್ತು.

## ❖ ಬಫರ್ ಝೋನ್ ಕಡಿತ ಮರುಪರಿಶೀಲನೆಗೆ ಸಲಹೆ

**ಸಂದರ್ಭ: ‘ಕೆರೆಗಳ ಬಫರ್ ಝೋನ್ ಕಡಿತಗೊಳಿಸುವ ನಿರ್ಧಾರವನ್ನು ಮರುಪರಿಶೀಲಿಸಬೇಕು ಎಂದು ರಾಜ್ಯ ಸರ್ಕಾರಕ್ಕೆ ಸಲಹೆ ನೀಡಲಾಗುತ್ತದೆ’ ಎಂದು ವಿಧಾನ ಪರಿಷತ್ ಮಾಜಿ ಸಭಾಪತಿ ಬಿ.ಕೆ. ಚಂದ್ರಶೇಖರ್.**

- ‘ಎಲ್ಲ ಕೆರೆಗಳಿಗೆ 30 ಮೀಟರ್ ಬಫರ್ ಝೋನ್ ಅನ್ನು ನಿಗದಿಪಡಿಸಲಾಗಿದೆ. ಅದನ್ನು ಕಡಿತಗೊಳಿಸಿ ಒಂದೊಂದು ಕೆರೆಗೆ ಒಂದೊಂದು ರೀತಿಯ ವಿಸ್ತೀರ್ಣಕ್ಕೆ ಅನುಗುಣವಾಗಿ ನಿಗದಿಪಡಿಸಲು ಕರ್ನಾಟಕ ಕೆರೆ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರದ (ಕೆಟಿಸಿಡಿಎ) ಕಾಯ್ದೆಗೆ ತಿದ್ದುಪಡಿ ತರಲು ಸರ್ಕಾರ ಮುಂದಾಗಿದೆ.

## ❖ ಹುಲಿಗಳ ಸಂಖ್ಯೆ ಮತ್ತು ಸಂಘರ್ಷ

**ಸಂದರ್ಭ: ಬಂಡೀಪುರದ ಸಫಾರಿ ಪ್ರದೇಶದಲ್ಲಿ ಹೆಣ್ಣು ಹುಲಿಯೊಂದು ನೈಸರ್ಗಿಕ ಕಾರಣಗಳಿಂದ ಗಾಯಗೊಂಡು ಕುಂಟುತ್ತಿರುವ ದೃಶ್ಯ. ಇದು, ಮಾಧ್ಯಮ ಮತ್ತು ಸಾಮಾಜಿಕ ಜಾಲತಾಣಗಳಲ್ಲಿ ಸುದ್ದಿಯಾಗಿ ಕೆಲವು ವನ್ಯಜೀವಿ ಆಸಕ್ತರು ಆ ಹುಲಿಗೆ ಚಿಕಿತ್ಸೆ ನೀಡಲು ಮತ್ತು ಅದರ ಮರಿಗಳಿಗೆ ಕೃತಕವಾಗಿ ಆಹಾರವನ್ನೊದಗಿಸಲು ಅರಣ್ಯ ಇಲಾಖೆಯ ಮೇಲೆ ಒತ್ತಡ ಹೇರಿದ ಪರಿಣಾಮ, ಇಲಾಖೆ ಏನೇನೊ ಕಸರತ್ತು ಮಾಡಿತು.**

- ಎರಡನೆಯದು: ಮೈಸೂರಿನ ಇಲವಾಲದ ಹತ್ತಿರ ಹುಲಿಗಳು ಪ್ರತ್ಯಕ್ಷವಾಗಿ ಜನರಲ್ಲಿ ಆತಂಕ ಮೂಡಿದೆ ಎಂಬ ಸುದ್ದಿ.
- ಮೂರನೆಯದು: ಬಂಡೀಪುರ ಹುಲಿ ಯೋಜನೆಯ ಹತ್ತಿರವಿರುವ ಕುಂದುಕೆರೆ ಗ್ರಾಮದ ಬಳಿಯಿರುವ ಪುಟ್ಟ ಗುಡ್ಡದಲ್ಲಿ ಇತ್ತೀಚೆಗೆ ಎರಡು ಹುಲಿಗಳು ಕಾಣಿಸಿಕೊಂಡು, ಅವುಗಳಲ್ಲಿ ಒಂದು ಹುಲಿ ಇನ್ನೊಂದು ಹುಲಿಯಿಂದ ಗಾಯಗೊಂಡು ನಿತ್ರಾಣಗೊಂಡಿರುವ ಸುದ್ದಿ.
- ನಾಲ್ಕನೆಯದು: ಬಂಡೀಪುರದ ಬಳಿಯಿರುವ ಬೊಮ್ಮಲಾಪುರ ಎಂಬ ಹಳ್ಳಿಯಲ್ಲಿ ಗ್ರಾಮಸ್ಥರು ಹುಲಿ ಸಂಘರ್ಷದಿಂದ ಬೇಸತ್ತು, ಹುಲಿಯನ್ನು ಹಿಡಿಯಲು ಇಟ್ಟಿದ್ದ ಬೋನಿನಲ್ಲಿ ಅರಣ್ಯ ಇಲಾಖೆಯ ನೌಕರರನ್ನೇ ಕೂಡಿ ಹಾಕಿದ ಘಟನೆ.
- ಈ ನಾಲ್ಕೂ ಘಟನೆಗಳು ಸ್ವತಂತ್ರವೆನಿಸಿದರೂ, ಅವುಗಳಿಗೆ ಮತ್ತು ವನ್ಯಜೀವಿ ಸಂರಕ್ಷಣೆಯ ವಿಧಾನಗಳಿಗೆ ಕೊಂಡಿಗಳಿವೆ. ನಿಸರ್ಗದಲ್ಲಿ ಹುಲಿಯನ್ನು ಭಕ್ಷಿಸುವ ಇತರ ಪ್ರಾಣಿಗಳು ಇಲ್ಲವಾದುದರಿಂದ ಅದು ಪಾರಿಸರಿಕ ಗೋಪುರದ ತುದಿಯಲ್ಲಿರುವ ವನ್ಯಜೀವಿ. ಹಾಗಾಗಿ, ಹುಲಿಗಳಿಗೆ ಉತ್ತಮ ರಕ್ಷಣೆ ಸಿಕ್ಕರೆ ಅವುಗಳ ಸಂಖ್ಯೆ ಹೆಚ್ಚುತ್ತದೆ. ಆವಾಸಸ್ಥಾನದ ವ್ಯಾಪ್ತಿ, ಆ ಪ್ರದೇಶದಲ್ಲಿರುವ ಬಲಿಪ್ರಾಣಿಗಳ ಸಾಂದ್ರತೆಗೆ ಅನುಗುಣವಾಗಿ ಅವುಗಳ ಸಂಖ್ಯೆಯನ್ನು ನೈಸರ್ಗಿಕ ಕಾರಣಗಳು ನಿಯಂತ್ರಿಸುತ್ತವೆ. ಹುಲಿಗಳ ನೈಸರ್ಗಿಕ

ಮರಣ ಪ್ರಮಾಣಕ್ಕೆ ಮುಖ್ಯ ಕಾರಣಗಳು: ನೆಲಹರವಿಗಾಗಿ ಹುಲಿಗಳ ಕಾದಾಟ, ನೈಸರ್ಗಿಕ ಕಾರಣಗಳಿಂದ ಆಗುವ ಗಾಯಗಳು, ರೋಗ, ಆಹಾರ ಅಥವಾ ನೀರಿನ ಕೊರತೆ. ಇವುಗಳಲ್ಲಿ ಕೊನೆಯದು ಅಪರೂಪ.

- ಏಕೆಂದರೆ, ಆಹಾರ ಮತ್ತು ನೀರಿನ ಕೊರತೆಯಿದ್ದರೆ ಹುಲಿಗಳ ಸಂಖ್ಯೆ ನೈಸರ್ಗಿಕವಾಗಿ ಕಡಿಮೆಯಿದ್ದು, ಅವುಗಳ ಸಂಖ್ಯೆ ಹೆಚ್ಚುವುದಿಲ್ಲ. ಇದನ್ನು ಮಲೆಮಹದೇಶ್ವರಬೆಟ್ಟ, ಕಾವೇರಿ ವನ್ಯಜೀವಿಧಾಮ ಮತ್ತಿತರ ಪ್ರದೇಶಗಳಲ್ಲಿ ನಿರ್ದಿಷ್ಟವಾಗಿ ಕಾಣಬಹುದು. ಮಹದೇಶ್ವರಬೆಟ್ಟ, ಕಾವೇರಿ ವನ್ಯಜೀವಿ ಧಾಮದಲ್ಲಿ ನಡೆಸಿರುವ ಅಧ್ಯಯನಗಳ ಪ್ರಕಾರ, ಈ ಎರಡು ವನ್ಯಜೀವಿಧಾಮಗಳಲ್ಲಿ 12–15 ಹುಲಿಗಳಿವೆ. ಒಂದಕ್ಕೊಂದು ಹೊಂದಿಕೊಂಡಿರುವ ಈ ವನ್ಯಜೀವಿಧಾಮಗಳ ಒಟ್ಟು ಭೂ ವಿಸ್ತೀರ್ಣ 1,991 ಚ.ಕಿ.ಮೀ. (ಸುಮಾರು 4,91,987 ಎಕರೆ).
- ಮಲೆಮಹದೇಶ್ವರ ಮತ್ತು ಕಾವೇರಿ ವನ್ಯಜೀವಿಧಾಮಗಳಂತೆಯೇ ಭೌಗೋಳಿಕವಾಗಿ ಕೂಡಿಕೊಂಡಿರುವ ಬಂಡೀಪುರ ಮತ್ತು ನಾಗರಹೊಳೆ ಹುಲಿ ಯೋಜನಾ ಪ್ರದೇಶಗಳ ಒಟ್ಟು ವಿಸ್ತೀರ್ಣ 1,771 ಚ.ಕಿ.ಮೀ. (ಸುಮಾರು 4,37,624 ಎಕರೆ). ಇತ್ತೀಚಿನ ವರದಿಗಳ ಪ್ರಕಾರ, ಇಲ್ಲಿರುವ ಹುಲಿಗಳ ಸಂಖ್ಯೆ 288. ಅಂದರೆ, ಮಲೆಮಹದೇಶ್ವರ ಹಾಗೂ ಕಾವೇರಿ ವನ್ಯಜೀವಿಧಾಮಗಳಿಗಿಂತ 200 ಚ.ಕಿ.ಮೀ. ಕಡಿಮೆ ಇರುವ ಪ್ರದೇಶಕ್ಕಿಂತ ಸುಮಾರು 20 ಪಟ್ಟು ಹೆಚ್ಚು ಹುಲಿಗಳು ಬಂಡೀಪುರ-ನಾಗರಹೊಳೆಯಲ್ಲಿವೆ. ಇಲ್ಲಿ ಹಲವು ದಶಕಗಳಿಂದ ಆಗಿರುವ ರಕ್ಷಣಾ ಕಾರ್ಯಗಳು ಮತ್ತು ಹುಲಿಗಳ ಆವಾಸಸ್ಥಾನಗಳ ನಿರ್ವಹಣೆಯಿಂದ ಈ ಪ್ರದೇಶದಲ್ಲಿ ಹುಲಿಗಳ ಸಂಖ್ಯೆ ಪಾರಿಸರಿಕ ಸಮತೋಲನದ ಮಟ್ಟ ತಲುಪಿವೆ ಅಥವಾ ಅದಕ್ಕಿಂತ ಹೆಚ್ಚಾಗಿವೆ. ಇದರ ಪರಿಣಾಮವಾಗಿ ಪ್ರಾಯದ ಹುಲಿಗಳು ಚಾಮರಾಜನಗರ, ಮೈಸೂರು ಮತ್ತು ಕೊಡಗು ಜಿಲ್ಲೆಯ ಸಣ್ಣಪುಟ್ಟ ಕಾಡುಗಳು ಅಥವಾ ಕೃಷಿ ಪ್ರದೇಶಗಳಿಗೆ ವಲಸೆ ಹೋಗುತ್ತಿವೆ. ಈ ಸಣ್ಣಪುಟ್ಟ ಕಾಡುಗಳು ಅಥವಾ ಕೃಷಿ ಪ್ರದೇಶ ಹುಲಿಗಳಿಗೆ ಪಾರಿಸರಿಕ ಮತ್ತು ಸಾಮಾಜಿಕವಾಗಿ ಸೂಕ್ತ ಪ್ರದೇಶಗಳಲ್ಲ. ಅಲ್ಲಿ ಅವುಗಳಿಗೆ ಬೇಕಿರುವಷ್ಟು ನೈಸರ್ಗಿಕ ಆಹಾರ ಸಿಗದಿರುವುದರಿಂದ, ಅವು ಹೆಚ್ಚಾಗಿ ಜಾನುವಾರುಗಳ ಮೇಲೆ ಅವಲಂಬಿತ ವಾಗಿವೆ. ಇದು ಸ್ಥಳೀಯರನ್ನು ತೊಂದರೆಗೆ ಸಿಲುಕಿಸಿದೆ ಮತ್ತು ಕೃಷಿ ಪ್ರದೇಶಗಳಲ್ಲಿ ಹುಲಿಗಳಿರುವುದು ಜನರನ್ನು ಆತಂಕಕ್ಕೀಡು ಮಾಡಿದೆ.
- ನಾವು ಪಾರಿಸರಿಕ ಮತ್ತು ಸಾಮಾಜಿಕ ವಿಚಾರಗಳನ್ನು ಗಮನಕ್ಕೆ ತೆಗೆದುಕೊಳ್ಳದೆ ಬಂಡೀಪುರ-ನಾಗರಹೊಳೆಯಲ್ಲಿ ಹುಲಿಗಳ ಸಂಖ್ಯೆಯನ್ನು ಕೃತಕವಾಗಿ ಹೆಚ್ಚಿಸುವ ಕಾರ್ಯ ವಿಧಾನ ಗಳನ್ನು ಅಳವಡಿಸಿಕೊಂಡಿದ್ದೇವೆ. ಸಾಮಾಜಿಕ ಮಾಧ್ಯಮಗಳ ಒತ್ತಡಕ್ಕೆ ಮಣಿದು ಅವುಗಳಿಗೆ ಚಿಕಿತ್ಸೆ ನೀಡಿ, ಅವುಗಳ ನೈಸರ್ಗಿಕ ಮರಣ ಪ್ರಮಾಣಕ್ಕೆ ಅವಕಾಶ ಕೊಡದೆ ಸಂಖ್ಯೆಯನ್ನು ಅನೈಸರ್ಗಿಕವಾಗಿ ಹೆಚ್ಚಿಸುತ್ತಿದ್ದೇವೆ. ಸಾಕುಪ್ರಾಣಿಗಳು ಮತ್ತು ವನ್ಯಜೀವಿಗಳ ಬಗ್ಗೆ ಇರುವ ವ್ಯತ್ಯಾಸಗಳನ್ನು ಅರಿತುಕೊಳ್ಳದೆ, ಹುಲಿಗಳನ್ನು ಸಾಕುಪ್ರಾಣಿಗಳ ದೃಷ್ಟಿಕೋನದಿಂದ ನೋಡಲು ಪ್ರಾರಂಭಿಸಿದ್ದೇವೆ.
- ಬಂಡೀಪುರದಲ್ಲಿ ಗಾಯಗೊಂಡು ಪತ್ತೆಯಾದ ಹೆಣ್ಣು ಹುಲಿಗೆ ನಾಲ್ಕು ಮರಿಗಳಿವೆ. ಈ ತಾಯಿ ಮತ್ತು ಮರಿಗಳು ಉಳಿಯುವುದು ಬಹು ಮುಖ್ಯವಾದರೂ, ಅವುಗಳು ನೈಸರ್ಗಿಕವಾಗಿ ಉಳಿಯಬೇಕೇ ಹೊರತು ಅವುಗಳನ್ನು ಕೃತಕವಾಗಿ ಬದುಕಿಸಿಕೊಳ್ಳುವ ಪ್ರಯತ್ನ ಮಾಡಿದರೆ, ಹುಲಿಗಳ ಸಂಖ್ಯೆಯನ್ನು ಅಸಹಜವಾಗಿ ಹೆಚ್ಚಿಸಿದಂತಾಗುತ್ತದೆ. ವೈಜ್ಞಾನಿಕ ಅಧ್ಯಯನಗಳ ಪ್ರಕಾರ ಹುಲಿಗಳು ಅಧಿಕವಾಗಿರುವ ಬಂಡೀಪುರ-ನಾಗರಹೊಳೆಯಂತಹ ಪ್ರದೇಶಗಳಲ್ಲಿ ವಾರ್ಷಿಕವಾಗಿ ಹುಲಿಗಳಲ್ಲಿ ಶೇ 25ರಷ್ಟು ನೈಸರ್ಗಿಕ ಮರಣ ಪ್ರಮಾಣವಿರುತ್ತದೆ. ಇದನ್ನು ತಡೆದರೆ, ಹುಲಿಗಳ ಸಂಖ್ಯೆ ಅವುಗಳಿಗಿರುವ ಆವಾಸಸ್ಥಾನಕ್ಕಿಂತ ಹೆಚ್ಚಾಗಿ ಜನವಸತಿ ಪ್ರದೇಶಗಳಿಗೆ ವಲಸೆ ಹೋಗಿ ತಮ್ಮ ವಸಾಹತು ಸ್ಥಾಪಿಸಿಕೊಳ್ಳಲು ಪ್ರಯತ್ನಿಸುತ್ತವೆ. ಇದು ಮಾನವ-ಹುಲಿ ಸಂಘರ್ಷದಂತಹ ಗಂಭೀರ ಸಮಸ್ಯೆಗೆ ಎಡೆ ಮಾಡಿಕೊಡುತ್ತದೆ.


Dr. Rajkumar IAS/KAS Academy

- ಇನ್ನೊಂದು ಗಂಭೀರ ಸಮಸ್ಯೆ, ಹುಲಿಗಳ ಆವಾಸ ಸ್ಥಾನಗಳ ಅವೈಜ್ಞಾನಿಕ ನಿರ್ವಹಣೆ. ವರ್ಷಪೂರ್ತಿ ವನ್ಯಜೀವಿಗಳಿಗೆ ನೀರು ಸಿಗುವ ಹಾಗೆ ಮಾಡಲು ಹೊಸ ಕೆರೆಗಳ ನಿರ್ಮಾಣ, ಕೊಳವೆಬಾವಿಗಳನ್ನು ತೋಡುವುದು ಮಾಡುತ್ತಿದ್ದೇವೆ. ವರ್ಷಪೂರ್ತಿ ನೀರು ಸಿಗುವು ದರಿಂದ ಹುಲಿಗಳಿಗೆ ಅವಶ್ಯಕವಾದ ಸಾರಂಗ ಗಳಂತಹ ಪ್ರಾಣಿಗಳು ಅಸ್ವಾಭಾವಿಕವಾಗಿ ವೃದ್ಧಿಸುತ್ತದೆ. ಋತುಮಾನಕ್ಕೆ ಅನುಗುಣವಾಗಿ ನೀರಿದ್ದರೆ, ದೈಹಿಕವಾಗಿ ಸಮರ್ಥ ಪ್ರಾಣಿಗಳು ಮಾತ್ರ ಬದುಕಿ, ಇನ್ನುಳಿದವು ಅಸುನೀಗಿ ಅವುಗಳ ಸಂಖ್ಯೆಯನ್ನು ನಿಸರ್ಗ ಪಾರಿಸರಿಕ ಮಟ್ಟದಲ್ಲಿ ಕಾಯ್ದುಕೊಳ್ಳುತ್ತದೆ.

- ಸಾರಂಗಗಳ ಸಂಖ್ಯೆ ಹೆಚ್ಚಾದಾಗ ಹುಲಿಗಳ ಸಂಖ್ಯೆಯೂ ಹೆಚ್ಚುತ್ತದೆ. ಆದರೆ, ಅವುಗಳ ಆವಾಸಸ್ಥಾನದ ವ್ಯಾಪ್ತಿ ಹೆಚ್ಚಾಗುವುದಿಲ್ಲ. 5 ಜನರಿಗೆ ಸರಿಹೊಂದುವಂತೆ ಕಟ್ಟಿದ ಮನೆಯಲ್ಲಿ 15–20 ಜನರನ್ನು ತುರುಕಿದ ಹಾಗೆ ಆಗುತ್ತದೆ. ಇದರ ಪರಿಣಾಮವಾಗಿ ಹುಲಿಗಳು ಹೊಸ ವ್ಯಾಪ್ತಿಯನ್ನು ಹುಡುಕಿಕೊಂಡು, ತಾವು ಹುಟ್ಟಿರುವ ಪ್ರದೇಶವನ್ನು ಬಿಟ್ಟು ಕೃಷಿ ಪ್ರದೇಶಗಳಿಗೆ ಮತ್ತು ಚಿಕ್ಕಪುಟ್ಟ ಕಾಡುಗಳತ್ತ ವಲಸೆ ಹೋಗುವುದು ಪ್ರಾರಂಭವಾಗಿದೆ. ಹೀಗೆಯೇ ಮುಂದುವರಿದರೆ, ಈಗ ಮೈಸೂರು, ಮಡಿಕೇರಿ ತಲುಪಿರುವ ಹುಲಿಗಳು ಬೇರೆ ಬೇರೆ ಪ್ರದೇಶಗಳಿಗೆ ಹಬ್ಬುವ ಸಾಧ್ಯತೆಯಿದೆ. ವನ್ಯಜೀವಿ ಸಂರಕ್ಷಣಾ ದೃಷ್ಟಿಕೋನದಿಂದಷ್ಟೇ ನೋಡಿದರೆ ಇದು ಸಂಭ್ರಮಿಸುವ ವಿಚಾರವಾದರೂ, ಹೆಚ್ಚುತ್ತಿರುವ ಮಾನವ-ವನ್ಯಜೀವಿ ಸಂಘರ್ಷ, ಮತ್ತು ಅದನ್ನು ಸರಿಯಾಗಿ ನಿರ್ವಹಿಸದ ಹಿನ್ನೆಲೆಯಲ್ಲಿ ಅಧಿಕವಾಗುತ್ತಿರುವ ಹುಲಿಗಳನ್ನು ಸೂಕ್ತವಲ್ಲದ ಪ್ರದೇಶಗಳಲ್ಲಿ ತುರುಕಲು ಪ್ರಯತ್ನಿಸುವುದು ಪಾರಿಸರಿಕ ದೃಷ್ಟಿಕೋನದಿಂದಾಗಲೀ ಅಥವಾ ಸಾಮಾಜಿಕ ದೃಷ್ಟಿಕೋನದಿಂದಾಗಲೀ ಸರಿಯಲ್ಲ. ಈ ತರಹದ ಪ್ರದೇಶಗಳಲ್ಲಿ ಹುಲಿಗಳ ಇರುವಿಕೆಯಿಂದ ಹುಲಿಗಳಿಗೆ ಕೂಡ ತೊಂದರೆಯೇ. ಸಂಘರ್ಷ ಹೆಚ್ಚಾದಂತೆ ಹುಲಿಗಳ ಬಗ್ಗೆ ಸಮಾಜಕ್ಕಿದ್ದ ತಾಳಿಕೆಯ ಸೌಹಾರ್ದ ಕಡಿಮೆಯಾಗಿ, ಅದರ ವಿರುದ್ಧದ ಮನಃಸ್ಥಿತಿ ಮತ್ತು ನಡವಳಿಕೆ ಹೆಚ್ಚುತ್ತದೆ.
- ಬೊಮ್ಮಲಾಪುರದ ಗ್ರಾಮಸ್ಥರು ತೆಗೆದುಕೊಂಡ ನಿಲುವು ಬಹುಶಃ ಹಲವು ವರ್ಷಗಳಿಂದ ಮಾನವ-ವನ್ಯಜೀವಿ ಸಂಘರ್ಷದ ಬಗ್ಗೆ ಅಂತರಂಗದೊಳಗೆ ಹುದುಗಿದ್ದ ಅಸಹಾಯಕ ಮನೋವೃತ್ತಿಯನ್ನು ತೋರಿಸುತ್ತಿರಬಹುದು. ಈಗಲಾದರೂ ಸಾಮಾಜಿಕ ಮಾಧ್ಯಮಗಳಲ್ಲಿ ತರುವ ಒತ್ತಡಕ್ಕೆ ಮಣಿಯದೆ, ವನ್ಯಜೀವಿಯ ಆವಾಸಸ್ಥಾನಗಳ ಅವೈಜ್ಞಾನಿಕ ನಿರ್ವಹಣೆಯನ್ನು ತಪ್ಪಿಸಬೇಕಾಗಿದೆ. ಬಹು ಮುಖ್ಯವಾಗಿ, ಆರ್ಥಿಕ ಕಾರಣಗಳಿಗೆ ತೆಗೆದುಕೊಳ್ಳುತ್ತಿರುವ ಕ್ರಮಗಳನ್ನು ನಿಲ್ಲಿಸದಿದ್ದರೆ ಹುಲಿಗಳಿಗಾಗಲೀ ಸಮಾಜಕ್ಕಾಗಲೀ ಒಳಿತಾಗದು.
- ಈಗಿನ ಸಂಘರ್ಷದ ಪರಿಸ್ಥಿತಿಗೆ ವನ್ಯಜೀವಿ ಆವಾಸ ಗಳ ಅವೈಜ್ಞಾನಿಕ ನಿರ್ವಹಣೆಯೂ ಕಾರಣ. ಈ ಧೋರಣೆ ಬದಲಾಯಿಸಿಕೊಂಡರೆ, ಮುಂಬರುವ ದಿನಗಳಲ್ಲಿ ಸಂಘರ್ಷಕ್ಕೊಳಗಾಗುವ ವನ್ಯಜೀವಿಗಳ ಸಂಖ್ಯೆಯಲ್ಲಿ ಸಮತೋಲನ ಕಾಣಬಹುದು. ಇದರಿಂದ ಇಲವಾಲ, ಬೊಮ್ಮಲಾಪುರ, ಇನ್ನಿತರ ಪ್ರದೇಶಗಳಿಗೆ ಹುಲಿಗಳು ಹೋಗುವುದು ಕಡಿಮೆಯಾಗಿ ಸಂಘರ್ಷ ತಗ್ಗುವ ದಿನಗಳನ್ನು ಕಾಣಬಹುದು. ಇಲ್ಲವಾದಲ್ಲಿ ಹುಲಿಗಳ ಸಂಖ್ಯೆ ಹೆಚ್ಚಾಗುವುದು, ಅದರ, ಮತ್ತು ಅರಣ್ಯ ಇಲಾಖೆಯ ವಿರುದ್ಧ ಸ್ಥಳೀಯ ಜನರ ಆಕ್ರೋಶ ಇನ್ನೂ ಹೆಚ್ಚಲಿದೆ.

Dr. Rajkumar IAS/KAS Academy

## ❖ ಪಟ್ಟಿಯಲ್ಲಿಲ್ಲ ಹಲವು ಪ್ರಸಿದ್ಧ ತಾಣಗಳು: 1,275 ರಾಜ್ಯದಲ್ಲಿರುವ ಪ್ರವಾಸಿ ಸ್ಥಳಗಳ ಸಂಖ್ಯೆ



**1,275** ರಾಜ್ಯದಲ್ಲಿರುವ ಪ್ರವಾಸಿ ಸ್ಥಳಗಳ ಸಂಖ್ಯೆ

# ಪಟ್ಟಿಯಲ್ಲಿಲ್ಲ ಹಲವು ಪ್ರಸಿದ್ಧ ತಾಣಗಳು

ಪ್ರಜಾವಾಣಿ ವಾರ್ತೆ

ರಾಜ್ಯ ಸರ್ಕಾರವು ಕಳೆದ ವರ್ಷದ ನವೆಂಬರ್‌ನಲ್ಲಿ ಜಾರಿಗೆ ತಂದಿರುವ ನೂತನ ಪ್ರವಾಸೋದ್ಯಮ ನೀತಿ 2024-29ರ ಅಡಿಯಲ್ಲಿ ರಾಜ್ಯದಲ್ಲಿ ಒಟ್ಟು 1,275 ಪ್ರವಾಸಿ ತಾಣಗಳನ್ನು ಗುರುತಿಸಿದೆ. ಪ್ರವಾಸೋದ್ಯಮ ಇಲಾಖೆಯು ಆಗಸ್ಟ್ 7ರಂದು ಈ ಸಂಬಂಧ ಆದೇಶ ಹೊರಡಿಸಿದ್ದು, ಜಿಲ್ಲಾವಾರು ಪ್ರವಾಸಿ ತಾಣಗಳ ಸಂಖ್ಯೆಗಳನ್ನು ಪಟ್ಟಿ ಮಾಡಿದೆ.

2020–26ರ ಪರಿಷ್ಕೃತ ನೀತಿಯಲ್ಲಿ 810 ತಾಣಗಳಿಗೆ ಮಾತ್ರವೇ ಸ್ಥಾನ ಸಿಕ್ಕಿತ್ತು. ಆದರೆ, ಹೊಸ ನೀತಿಯಲ್ಲಿ 465 ಹೆಚ್ಚು ಸ್ಥಳಗಳಿಗೆ ಮನ್ನಣೆ ಸಿಕ್ಕಿದೆ. ಜಿಲ್ಲಾವಾರು ಪಟ್ಟಿಯ ಪ್ರಕಾರ ಪ್ರಕಾರ, ಚಾಮರಾಜನಗರ ಜಿಲ್ಲೆಯು ಅತ್ಯಂತ ಕಡಿಮೆ, ಐದು ತಾಣಗಳನ್ನು ಹೊಂದಿದ್ದರೆ, ಮಂಡ್ಯ ಜಿಲ್ಲೆಯಲ್ಲಿ ಅತ್ಯಂತ ಹೆಚ್ಚು, 106 ಪ್ರವಾಸಿ ಸ್ಥಳಗಳನ್ನು ಗುರುತಿಸಲಾಗಿದೆ. ರಾಜಧಾನಿ ಬೆಂಗಳೂರಿನಲ್ಲಿ 27 ತಾಣಗಳಿವೆ.

ಅಚ್ಚರಿಯ ಸಂಗತಿ ಎಂದರೆ, ಕೆಲವು ಜಿಲ್ಲೆಗಳ ಪಟ್ಟಿಯಲ್ಲಿ ಈಗಾಗಲೇ ಪ್ರಸಿದ್ಧಿಗೆ ಬಂದಿರುವ ಪ್ರವಾಸಿ ತಾಣಗಳ ಹೆಸರು ಇಲ್ಲ. ಉದಾಹರಣೆಗೆ, ಮೈಸೂರು ಜಿಲ್ಲೆಯಲ್ಲಿ 13 ಪ್ರವಾಸಿ ತಾಣಗಳು ಇವೆ ಎಂದು ಹೊಸ ಪಟ್ಟಿಯಲ್ಲಿ ಹೇಳಲಾಗಿದೆ. ತಾಣಗಳ ವಿವರದಲ್ಲಿ ಮೈಸೂರು ಅರಮನೆ, ಚಾಮುಂಡಿ ಬೆಟ್ಟ, ಮೃಗಾಲಯ ಸೇರಿದಂತೆ ಹೆಚ್ಚಿನ ಜನರನ್ನು ಸೆಳೆಯುವ ಪ್ರವಾಸಿ ತಾಣಗಳ ಹೆಸರುಗಳಿಲ್ಲ. ನೆರೆಯ ಚಾಮರಾಜನಗರ ಜಿಲ್ಲೆಯ ವಿಷಯದಲ್ಲೂ ಅದೇ ರೀತಿ ಇದೆ. ವಾರ್ಷಿಕವಾಗಿ ಲಕ್ಷಾಂತರ ಪ್ರವಾಸಿಗರನ್ನು ಸೆಳೆಯುವ ಬಂಡೀಪುರ, ಬಿಳಿಗಿರಿರಂಗನಾಥಸ್ವಾಮಿ ದೇವಾಲಯ, ಮಹದೇಶ್ವರ ಬೆಟ್ಟ, ಹಿಮವದ್ ಗೋಪಾಲಸ್ವಾಮಿ ಬೆಟ್ಟ ಮುಂತಾದ ಪ್ರಸಿದ್ಧ ತಾಣಗಳ ಹೆಸರುಗಳಿಲ್ಲ.

'ಹೊಸದಾಗಿ ಸೇರ್ಪಡೆಯಾಗಿರುವ ಪ್ರವಾಸಿ ತಾಣಗಳ ಹೆಸರುಗಳನ್ನು ಮಾತ್ರ ಪಟ್ಟಿಯಲ್ಲಿ ಬರೆಯಲಾಗಿದೆ. ಹಳೆಯ ತಾಣಗಳ ಹೆಸರುಗಳನ್ನು ಉಲ್ಲೇಖಿಸಿಲ್ಲ' ಎಂದು ಸ್ಥಳೀಯ ಅಧಿಕಾರಿಗಳು ಹೇಳುತ್ತಿದ್ದಾರೆ.

ಆದರೆ, ಬೇರೆ ಜಿಲ್ಲೆಗಳ ತಾಣಗಳ ಪಟ್ಟಿಯಲ್ಲಿ ಈಗಾಗಲೇ ಪ್ರಸಿದ್ಧಿ ಪಡೆದಿರುವ ಸ್ಥಳಗಳ ಹೆಸರುಗಳೂ ಇವೆ. ಉದಾಹರಣೆಗೆ, ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ ತಾಲ್ಲೂಕಿನ ರಂಗನಾಥಸ್ವಾಮಿ ದೇವಾಲಯ, ಬೃಂದಾವನ, ರಂಗನತಿಟ್ಟು, ಟಿಪ್ಪು ಬೇಸಿಗೆ ಅರಮನೆ ಮುಂತಾದ ತಾಣಗಳೂ ಪಟ್ಟಿಯಲ್ಲಿವೆ. ಪ್ರವಾಸಿಗರ ನೆಚ್ಚಿನ ಕೊಡಗು ಜಿಲ್ಲೆಯ ತಾಣಗಳ ಪಟ್ಟಿಯಲ್ಲಿ ಹೊಸ ತಾಣಗಳೊಂದಿಗೆ ಹಳೆಯ ಸ್ಥಳಗಳ ಹೆಸರುಗಳೂ ಇವೆ. ಉತ್ತರ ಕರ್ನಾಟಕದ ಬಹುತೇಕ ಎಲ್ಲ ಜಿಲ್ಲೆಗಳಲ್ಲೂ ಈಗಾಗಲೇ ಗುರುತಿಸಿರುವ ಪ್ರವಾಸಿ ತಾಣಗಳೂ ಪಟ್ಟಿಯಲ್ಲಿ ಸ್ಥಾನ ಪಡೆದಿವೆ. ವಿಶ್ವವಿಖ್ಯಾತ ಹಂಪಿ ಇರುವ ವಿಜಯನಗರ ಜಿಲ್ಲೆಯಲ್ಲಿ ಹಿಂದಿನ 13 ಸ್ಥಳಗಳ ಜೊತೆಗೆ 29 ತಾಣಗಳನ್ನು ಹೊಸದಾಗಿ ಸೇರ್ಪಡೆಗೊಳಿಸಲಾಗಿದೆ.

ಪ್ರವಾಸೋದ್ಯಮ ಇಲಾಖೆಯು ಆಗಸ್ಟ್ 7ರಂದು ಹೊರಡಿಸಿರುವ ಆದೇಶದಲ್ಲಿ 'ರಾಜ್ಯದ ಒಟ್ಟು 1,275 ಪ್ರವಾಸಿ ತಾಣಗಳು' ಎಂದು ಸ್ಪಷ್ಟವಾಗಿ ಉಲ್ಲೇಖಿಸಲಾಗಿದೆ.

ಇತ್ತೀಚೆಗೆ ಮುಕ್ತಾಯಗೊಂಡ ವಿಧಾನಮಂಡಲ ಅಧಿವೇಶನದಲ್ಲಿ ವಿಧಾನ ಪರಿಷತ್ ಸದಸ್ಯ ಡಿ.ಟಿ.ಶ್ರೀನಿವಾಸ್ ಅವರು ಕೇಳಿದ ಪ್ರಶ್ನೆಗೆ ಉತ್ತರಿಸುವಾಗ, ಈ ಆದೇಶದೊಂದಿಗೆ ಜಿಲ್ಲಾವಾರು ಪ್ರವಾಸಿ ತಾಣಗಳ ವಿವರಗಳನ್ನು ಪ್ರವಾಸೋದ್ಯಮ ಸಚಿವ ಎಚ್.ಕೆ.ಪಾಟೀಲ ಅವರು ನೀಡಿದ್ದಾರೆ.

### ಜಿಲ್ಲಾವಾರು ಪ್ರವಾಸಿ ಸ್ಥಳಗಳು

| ಜಿಲ್ಲೆ | ಸಂಖ್ಯೆ |
|---|---|
| ಚಾಮರಾಜನಗರ | 5 |
| ಯಾದಗಿರಿ | 7 |
| ಮೈಸೂರು | 13 |
| ಹಾವೇರಿ | 15 |
| ಬಳ್ಳಾರಿ | 18 |
| ಹಾಸನ | 23 |
| ಬೀದರ್ | 24 |
| ಕೋಲಾರ | 25 |
| ಬೆಂ.ಗ್ರಾಮಾಂತರ | 25 |
| ರಾಮನಗರ | 26 |
| ಬೆಂಗಳೂರು ನಗರ | 27 |
| ಬಾಗಲಕೋಟೆ | 28 |
| ಧಾರವಾಡ | 30 |
| ವಿಜಯಪುರ | 33 |
| ಕೊಡಗು | 34 |
| ದಕ್ಷಿಣ ಕನ್ನಡ | 37 |
| ಕಲಬುರಗಿ | 37 |
| ರಾಯಚೂರು | 38 |
| ಚಿತ್ರದುರ್ಗ | 39 |
| ದಾವಣಗೆರೆ | 42 |
| ವಿಜಯನಗರ | 42 |
| ಕೊಪ್ಪಳ | 45 |
| ಚಿಕ್ಕಮಗಳೂರು | 48 |
| ಗದಗ | 48 |
| ಉಡುಪಿ | 53 |
| ತುಮಕೂರು | 63 |
| ಶಿವಮೊಗ್ಗ | 64 |
| ಉತ್ತರ ಕನ್ನಡ | 85 |
| ಚಿಕ್ಕಬಳ್ಳಾಪುರ | 95 |
| ಬೆಳಗಾವಿ | 100 |
| ಮಂಡ್ಯ | 106 |

ಆಧಾರ: ಪ್ರವಾಸೋದ್ಯಮ ನೀತಿ, ಸದನದಲ್ಲಿ ಸಚಿವರ ಉತ್ತರ, ಸರ್ಕಾರಿ ಆದೇಶಗಳು

### ಸಿಗುವುದೇ ಪ್ರವಾಸೋದ್ಯಮಕ್ಕೆ ಹೊಸ ರೂಪ?

ರಾಜ್ಯದ ಪ್ರವಾಸೋದ್ಯಮಕ್ಕೆ ಹೊಸ ರೂಪ ನೀಡುವ ಉದ್ದೇಶದಿಂದ ರಾಜ್ಯ ಸರ್ಕಾರ 2024ರ ನವೆಂಬರ್‌ನಲ್ಲಿ ಕರ್ನಾಟಕ ಪ್ರವಾಸೋದ್ಯಮ ನೀತಿ 2024–29 ಜಾರಿಗೆ ತಂದಿದೆ.

ದೇಶೀಯ, ಜಾಗತಿಕ ಪ್ರವಾಸಿಗರನ್ನು ಸೆಳೆಯುವುದು, ಪ್ರವಾಸೋದ್ಯಮ ಆಧಾರಿತ ಉದ್ಯೋಗ ಸೃಷ್ಟಿಸುವುದು, ಆರ್ಥಿಕ ಬೆಳವಣಿಗೆ, ಉದ್ಯಮಶೀಲತೆಗೆ ಚೈತನ್ಯ ತುಂಬುವುದು, ಪ್ರಾದೇಶಿಕ–ಪ್ರವಾಸೋದ್ಯಮ ಹೂಡಿಕೆ, ಕೌಶಲ ಅಭಿವೃದ್ಧಿ, ಪರಿಚಿತವಲ್ಲದ ಪ್ರೇಕ್ಷಣೀಯ ಸ್ಥಳಗಳನ್ನು ಹೊರಜಗತ್ತಿಗೆ ಪರಿಚಯಿಸುವುದು, ಪ್ರವಾಸಿ ಮಾರ್ಗದರ್ಶಕರನ್ನು ಪ್ರೋತ್ಸಾಹಿಸುವುದು, ಸ್ಥಳೀಯ–ಸಾಂಪ್ರದಾಯಿಕ ಕರಕುಶಲತೆ, ಪಾಕ ಪದ್ಧತಿ, ಸಂಸ್ಕೃತಿಗೆ ಪ್ರಚಾರ ನೀಡುವುದು ನೀತಿಯ ಪ್ರಮುಖ ಗುರಿ. 2029ರ ವೇಳೆಗೆ ಕರ್ನಾಟಕವನ್ನು ದೇಶಿಯ ಪ್ರವಾಸಿಗರು ಭೇಟಿ ನೀಡುವ ಅಗ್ರ ಮೂರು ರಾಜ್ಯಗಳಲ್ಲಿ ಒಂದು ಮತ್ತು ಹೆಚ್ಚು ವಿದೇಶಿ ಪ್ರವಾಸಿಗರು ಭೇಟಿ ನೀಡುವ ಮೊದಲ ಐದು ರಾಜ್ಯಗಳಲ್ಲಿ ಒಂದಾಗಿ ರೂಪಿಸುವ ಉದ್ದೇಶವನ್ನೂ ಇದು ಹೊಂದಿದೆ.

'ಒಂದು ಜಿಲ್ಲೆ, ಒಂದು ತಾಣ' ಎಂಬ ಕಲ್ಪನೆಯ ಅಡಿಯಲ್ಲಿ ಜಿಲ್ಲೆಗೊಂದು ಪ್ರವಾಸಿ ತಾಣವನ್ನು ಅಭಿವೃದ್ಧಿ ಪಡಿಸುವ ಮಹತ್ವಾಕಾಂಕ್ಷೆಯೂ ನೀತಿಯಲ್ಲಿದೆ. ಹಿಂದಿನ ಪ್ರವಾಸೋದ್ಯಮ ನೀತಿಯು 18 ಪ್ರವಾಸೋದ್ಯಮ ಪರಿಕಲ್ಪನೆಗಳನ್ನು ಮುಂದಿಟ್ಟಿತ್ತು. ಹೊಸ ನೀತಿಯು ಇದಕ್ಕೆ ಏಳು ಹೊಸ ಪರಿಕಲ್ಪನೆಗಳನ್ನು ಸೇರ್ಪಡೆಗೊಳಿಸಿದ್ದು, ಒಟ್ಟು 25 ಪರಿಕಲ್ಪನೆಗಳನ್ನು ಪಟ್ಟಿ ಮಾಡಿದೆ. ಬುಡಕಟ್ಟು ಪ್ರವಾಸೋದ್ಯಮ, ವೈವಾಹಿಕ, ಪ್ರವಾಸೋದ್ಯಮ, ವಾರಾಂತ್ಯದ ಪ್ರವಾಸೋದ್ಯಮ, ಗಾಲ್ಫ್ ಪ್ರವಾಸೋದ್ಯಮ, ವೈದ್ಯಕೀಯ ಪ್ರವಾಸೋದ್ಯಮ, ಸಾಹಿತ್ಯ ಪ್ರವಾಸೋದ್ಯಮ ಮತ್ತು ಗ್ರಾಮೀಣ ಪ್ರವಾಸೋದ್ಯಮ ಹೊಸ ಪರಿಕಲ್ಪನೆಗಳು.

ಹೊಸ ನೀತಿಯು ಕರಾವಳಿ ಪ್ರವಾಸೋದ್ಯಮಕ್ಕೆ ಹೆಚ್ಚು ಒತ್ತು ನೀಡಿದ್ದು, ರಾಜ್ಯದ 320 ಕಿ.ಮೀ. ಉದ್ದದ ಕರಾವಳಿಯಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಯನ್ನು ಕೈಗೊಳ್ಳಲು ಸರ್ಕಾರ ಉದ್ದೇಶಿಸಿದೆ. ಕರಾವಳಿ ಕರ್ನಾಟಕದ ಪ್ರವಾಸೋದ್ಯಮ ಅಭಿವೃದ್ಧಿಗೆ ಒತ್ತು ನೀಡಲು ವಿಶೇಷ ಆರ್ಥಿಕ ಪ್ಯಾಕೇಜ್ ರಚಿಸಲಾಗುವುದು ಎಂದೂ ಅದು ಹೇಳಿದೆ.

ಕರ್ನಾಟಕದ ಎಲ್ಲಾ ಹೆಲಿ ಟೂರಿಸಂ ಸ್ಥಳಗಳಿಗೆ ರೋಪ್‌ವೇ, ಕೇಬಲ್ ಕಾರ್‌ಗಳನ್ನು ಒದಗಿಸಲು ನಿರ್ಧರಿಸಲಾಗಿದೆ. ರೋಪ್ ವೇಗಳ ಸ್ಥಾಪನೆ, ಕಾರ್ಯಾಚರಣೆ ಮತ್ತು ನಿರ್ವಹಣೆಗೆ ಅನುಕೂಲವಾಗುವಂತೆ ರೋಪ್‌ವೇ ಕಾಯ್ದೆಯನ್ನು ಜಾರಿಗೊಳಿಸುವ ಬಗ್ಗೆಯೂ ನೀತಿಯಲ್ಲಿ ಪ್ರಸ್ತಾಪಿಸಲಾಗಿದೆ.

**ಭೇಟಿ ನೀಡಿದ ಪ್ರವಾಸಿಗರು**

| | 2023 | 2024 |
|---|---|---|
| ದೇಶಿ | 28.35 ಕೋಟಿ | 30.46 ಕೋಟಿ |
| ವಿದೇಶಿ | 4.01 ಲಕ್ಷ | 4.85 ಲಕ್ಷ |

### 1.5 ಲಕ್ಷ ಉದ್ಯೋಗ ಸೃಷ್ಟಿಸುವ ಗುರಿ

ಹೊಸ ಪ್ರವಾಸೋದ್ಯಮ ನೀತಿಯಲ್ಲಿ ಪ್ರಸ್ತಾಪಿಸಲಾಗಿರುವ ಪ್ರೋತ್ಸಾಹ, ಸಹಾಯಧನ ಮತ್ತು ರಿಯಾಯಿತಿಗಳನ್ನು ನೀಡುವುದಕ್ಕಾಗಿ ₹1,350 ಕೋಟಿ ಅನುದಾನ ಬಿಡುಗಡೆಗೆ ಸರ್ಕಾರ ಅನುಮೋದನೆ ನೀಡಿದೆ. ₹8,000 ಕೋಟಿಗಳ ನೇರ ಹೂಡಿಕೆಯನ್ನು ಆಕರ್ಷಿಸುವ ಹಾಗೂ 1.5 ಲಕ್ಷ ಉದ್ಯೋಗವಕಾಶಗಳನ್ನು ಸೃಷ್ಟಿಸುವ ಗುರಿಯನ್ನು ನೀತಿ ಹೊಂದಿದೆ.

### ಮೂಲಸೌಕರ್ಯ: ಅದೇ ಸ್ಥಿತಿ, ಅದೇ ಗತಿ

ರಾಜ್ಯದಲ್ಲಿ ವೈವಿಧ್ಯಮಯವಾದ ಪ್ರವಾಸಿ ತಾಣಗಳಿವೆ. ಆದರೆ, ಬೆಂಗಳೂರು ಹೊರತುಪಡಿಸಿದರೆ, ಇತರ ಅನೇಕ ಪ್ರವಾಸಿ ತಾಣಗಳಲ್ಲಿ ಮೂಲಸೌಕರ್ಯಗಳ ಕೊರತೆ ಇದೆ ಎನ್ನುವ ದೂರು ವ್ಯಾಪಕವಾಗಿದೆ. ಅನೇಕ ಪ್ರವಾಸಿ ತಾಣಗಳಿಗೆ ಹೋಗಲು ಸೂಕ್ತ ರಸ್ತೆ ಸೌಕರ್ಯವೇ ಇಲ್ಲ. ಪ್ರವಾಸಿ ತಾಣಗಳಿಗೆ ಹೋದರೆ, ಉತ್ತಮ ಹೋಟೆಲ್, ಶೌಚಾಲಯ, ಕುಡಿಯುವ ನೀರು ದೊರೆಯುವುದೇ ಕಷ್ಟವಾಗಿದೆ. ಕೊರತೆ ಇರುವ ವ್ಯವಸ್ಥೆಗೇ ಅತಿ ಹೆಚ್ಚಿನ ಹಣವನ್ನು ವಸೂಲಿ ಮಾಡಲಾಗುತ್ತಿದೆ ಎನ್ನುವ ದೂರುಗಳೂ ಇವೆ.

ಮೂಲಸೌಕರ್ಯಗಳನ್ನು ಕಲ್ಪಿಸಲು ಸರ್ಕಾರವು ಹೆಚ್ಚಿನ ಹಣ ವಿನಿಯೋಗಿಸಬೇಕಿದೆ. ಕೆಲವೆಡೆ, ಹಣ ಖರ್ಚು ಮಾಡಿ ಒಂದಿಷ್ಟು ಸೌಲಭ್ಯಗಳನ್ನು ಒದಗಿಸಿದ್ದರೂ, ನಿರ್ವಹಣೆಯ ಸಮಸ್ಯೆ ಇದೆ. ಕೆಲವು ಪ್ರವಾಸಿ ತಾಣಗಳಲ್ಲಿ ಭ್ರಷ್ಟಾಚಾರವೂ ನಡೆಯುತ್ತಿದೆ.

'ಒಂದು ರಾಜ್ಯ, ಹಲವು ಜಗತ್ತು' ಎನ್ನುವುದು ರಾಜ್ಯದ ಪ್ರವಾಸೋದ್ಯಮ ಇಲಾಖೆಯ ಘೋಷವಾಕ್ಯ. ಅದಕ್ಕೆ ತಕ್ಕಂಥ ಪ್ರವಾಸಿ ತಾಣಗಳು ರಾಜ್ಯದಲ್ಲಿವೆ. ಆದರೆ, ಅವುಗಳನ್ನು ಗುರುತಿಸುವಲ್ಲಿ ಇಲಾಖೆ ಸೋತಿದೆ. ಪ್ರವಾಸೋದ್ಯಮ ಉತ್ತೇಜನಕ್ಕೆ ಅನೇಕ ಅವಕಾಶಗಳಿದ್ದರೂ, ಅವುಗಳನ್ನು ಸದ್ಬಳಕೆ ಮಾಡಿಕೊಂಡಿಲ್ಲ ಎನ್ನುವ ಅಭಿಪ್ರಾಯವಿದೆ. ರಾಮಾಯಣ ಸರ್ಕಿಟ್‌ನಂಥ ವ್ಯವಸ್ಥೆ ರೂಪಿಸಲು ಅವಕಾಶವಿದೆ.

ಪಾರಂಪರಿಕ ತಾಣವಾದ ಹಂಪಿಗೆ ಹೆಚ್ಚು ಒತ್ತು ಸಿಗುತ್ತಿದ್ದು, ಬೇಲೂರು, ಹಳೇಬೀಡು, ಪಟ್ಟದಕಲ್ಲು, ಐಹೊಳೆಗೆ ಅಷ್ಟು ಪ್ರಾಮುಖ್ಯ ಸಿಗುತ್ತಿಲ್ಲ ಎಂಬಂತಹ ದೂರು ರಾಜ್ಯದಾದ್ಯಂತ ಇರುವ ಪ್ರವಾಸಿ ತಾಣಗಳಿಗೆ ಸಂಬಂಧಿಸಿದಂತೆ ಕೇಳಿ ಬರುತ್ತಿದೆ.

ಐದು ವರ್ಷಕ್ಕೊಮ್ಮೆ ಪ್ರವಾಸೋದ್ಯಮ ನೀತಿ ಬದಲಾಗುತ್ತಿದ್ದರೂ, ಪ್ರವಾಸಿ ತಾಣಗಳು, ಪ್ರವಾಸಿಗರ ಸಂಖ್ಯೆ ಹೆಚ್ಚುತ್ತಿದ್ದರೂ, ಮೂಲಸೌಕರ್ಯಗಳ ಕೊರತೆ ಮಾತ್ರ ನೀಗಿಲ್ಲ ಎನ್ನುವುದು ಉದ್ಯಮ ನಿರತರು, ಪ್ರವಾಸಿಗರ ದೂರು.

## ❖ ಟೈಫನ್ ಕ್ಷಿಪಣಿ ಹಿಂತೆಗೆದುಕೊಳ್ಳಲು ಚೀನಾ ಆಗ್ರಹ

**ಸಂದರ್ಭ: ಜಪಾನ್‌ನಲ್ಲಿ ನಿಯೋಜಿಸಿರುವ ಮಧ್ಯಮ ಶ್ರೇಣಿಯ ಟೈಫನ್ ಕ್ಷಿಪಣಿಯನ್ನು ಹಿಂತೆಗೆದುಕೊಳ್ಳುವಂತೆ ಅಮೆರಿಕವನ್ನು ಚೀನಾ ಒತ್ತಾಯಿಸಿದೆ.**

- 'ಟೈಫನ್ ಕ್ಷಿಪಣಿಯು ಪ್ರಾದೇಶಿಕ ಕಾರ್ಯತಂತ್ರದ ಭದ್ರತೆಗೆ ಕಾಯಂ ಬೆದರಿಕೆಯಾಗಿದೆ. ಜಂಟಿ ಸಮರಾಭ್ಯಾಸದ ನೆಪದಲ್ಲಿ ಅಮೆರಿಕವು ಜಪಾನ್‌ನಲ್ಲಿ ಈ ಕ್ಷಿಪಣಿಯನ್ನು ನಿಯೋಜಿಸಿದೆ. ಇದನ್ನು ಹಿಂತೆಗೆದುಕೊಳ್ಳಬೇಕು' ಎಂದು ಚೀನಾದ ವಿದೇಶಾಂಗ ವ್ಯವಹಾರಗಳ ವಕ್ತಾರ ಲಿನ್ ಜಿಯಾನ್ ಒತ್ತಾಯಿಸಿದ್ದಾರೆ.
- ಈ ಮೊದಲು ಫಿಲಿಪ್ಪೀನ್ಸ್‌ನಲ್ಲಿ 'ಟೈಫನ್' ಕ್ಷಿಪಣಿ ನಿಯೋಜನೆಗೆ ಚೀನಾ ವಿರೋಧ ವ್ಯಕ್ತಪಡಿಸಿತ್ತು. ಇದರ ಬೆನ್ನಲ್ಲೇ, ಫಿಲಿಪ್ಪೀನ್ಸ್ ಭಾರತದಿಂದ ಬ್ರಹ್ಮೋಸ್ ಕ್ಷಿಪಣಿ ಖರೀದಿಸಿತ್ತು.

## ❖ ‘ಮಾತುಕತೆ ಸಕಾರಾತ್ಮಕ’ :ಹೆಚ್ಚುವರಿ ತೆರಿಗೆ ರದ್ದುಪಡಿಸಲು ಅಮೆರಿಕಕ್ಕೆ ಭಾರತ ಒತ್ತಾಯ

**ಸಂದರ್ಭ: ದ್ವಿಪಕ್ಷೀಯ ವ್ಯಾಪಾರ ಒಪ್ಪಂದದ ವಿಚಾರವಾಗಿ ಅಮೆರಿಕದ ನಿಯೋಗದ ಜೊತೆಗಿನ ಮಾತುಕತೆಯು ಸಕಾರಾತ್ಮಕವಾಗಿ ಇತ್ತು ಎಂದು ಕೇಂದ್ರ ವಾಣಿಜ್ಯ ಸಚಿವಾಲಯ ಹೇಳಿದೆ.**

- ಇಬ್ಬರಿಗೂ ಅನುಕೂಲ ಆಗುವ ಒಪ್ಪಂದವೊಂದಕ್ಕೆ ಆದಷ್ಟು ಬೇಗ ಅಂತಿಮ ರೂಪ ನೀಡಲು ಎರಡೂ ದೇಶಗಳು ಒಪ್ಪಿವೆ ಎಂದು ಕೂಡ ಸಚಿವಾಲಯವು ಹೇಳಿದೆ.
- ‘ಎರಡೂ ಕಡೆಯವರಿಗೆ ಪ್ರಯೋಜನಕಾರಿ ಆಗುವಂತಹ ವ್ಯಾಪಾರ ಒಪ್ಪಂದವನ್ನು ಬೇಗನೆ ಸಾಧ್ಯವಾಗಿಸುವ ಪ್ರಯತ್ನಕ್ಕೆ ಇನ್ನಷ್ಟು ಚುರುಕು ನೀಡಲು ತೀರ್ಮಾನಿಸಲಾಗಿದೆ’ ಎಂದು ಸಚಿವಾಲಯವು ಹೇಳಿದೆ. ಎರಡೂ ದೇಶಗಳ ಪ್ರತಿನಿಧಿಗಳ ನಡುವೆ ಮಂಗಳವಾರ ಇಡೀ ದಿನ ಮಾತುಕತೆ ನಡೆದಿದೆ.
- ಭಾರತಕ್ಕೆ ಭೇಟಿ ನೀಡಿರುವ ಅಮೆರಿಕದ ಮುಖ್ಯ ಸಂಧಾನಕಾರ ಬ್ರೆಂಡನ್ ಲಿಂಚ್ ಅವರ ಜೊತೆ ಪ್ರಸ್ತಾವಿತ ದ್ವಿಪಕ್ಷೀಯ ವ್ಯಾಪಾರ ಒಪ್ಪಂದ ಕುರಿತಾದ ಮಾತುಕತೆಗಳು ಸಕಾರಾತ್ಮಕವಾಗಿದ್ದವು ಎಂದು ಸಚಿವಾಲಯವು ಹೇಳಿದೆ.
- ಲಿಂಚ್ ಅವರು ನವದೆಹಲಿಗೆ ಬಂದಿದ್ದಾರೆ. ಮಾತುಕತೆ ವೇಳೆ ಭಾರತದ ಪ್ರತಿನಿಧಿಗಳ ನೇತೃತ್ವವನ್ನು ವಾಣಿಜ್ಯ ಇಲಾಖೆಯ ವಿಶೇಷ ಕಾರ್ಯದರ್ಶಿ ರಾಜೇಶ್ ಅಗರ್ವಾಲ್ ಅವರು ವಹಿಸಿದ್ದರು.
- ಎರಡೂ ದೇಶಗಳು ವರ್ಚುವಲ್ ವೇದಿಕೆಯ ಮೂಲಕ ಮಾತುಕತೆ ಮುಂದುವರಿಸಲಿವೆ. ಅಲ್ಲದೆ, ಮುಂದಿನ ಭೌತಿಕ ಸಭೆಗೆ ಸೂಕ್ತ ದಿನಾಂಕ ಯಾವುದು ಎಂಬುದನ್ನು ಕೂಡ ನಿರ್ಧರಿಸಲಿವೆ ಎಂದು ಮೂಲವೊಂದು ತಿಳಿಸಿದೆ.
- ಅಮೆರಿಕವು ಭಾರತದ ಸರಕುಗಳ ಮೇಲೆ ಶೇಕಡ 50ರಷ್ಟು ಸುಂಕ ವಿಧಿಸಿದೆ. ಪ್ರತಿಸುಂಕದ ರೂಪದಲ್ಲಿ ಶೇ 25ರಷ್ಟು ತೆರಿಗೆ ಹಾಗೂ ರಷ್ಯಾದಿಂದ ಕಚ್ಚಾ ತೈಲ ಖರೀದಿಸುತ್ತಿರುವುದಕ್ಕಾಗಿ ಶೇ 25ರಷ್ಟು ಹೆಚ್ಚುವರಿ ತೆರಿಗೆ ವಿಧಿಸಲಾಗಿದೆ. ಈ ತೆರಿಗೆ ಕ್ರಮಗಳು ಜಾರಿಗೆ ಬಂದ ನಂತರದಲ್ಲಿ ಅಮೆರಿಕದ ಹಿರಿಯ ಅಧಿಕಾರಿಯೊಬ್ಬರು ವ್ಯಾಪಾರ ಒಪ್ಪಂದದ ಮಾತುಕತೆಗೆ ಭಾರತಕ್ಕೆ ಭೇಟಿ ನೀಡಿರುವುದು ಇದೇ ಮೊದಲು. ಶೇ 50ರಷ್ಟು ತೆರಿಗೆ ವಿಧಿಸುವ ಕ್ರಮವನ್ನು ಭಾರತವು ‘ಅನ್ಯಾಯ’ ಎಂದು ಹೇಳಿದೆ.
- ಮಾತುಕತೆ ಮುಂದುವರಿಯಬೇಕು ಎಂದಾದರೆ ಭಾರತದ ಮೇಲೆ ಹೇರಿರುವ ಹೆಚ್ಚುವರಿ ಶೇ 25ರಷ್ಟು ಸುಂಕವನ್ನು ರದ್ದುಪಡಿಸಬೇಕು ಎಂದು ಭಾರತದ ಅಧಿಕಾರಿಗಳು ಒತ್ತಾಯಿಸಿದರು ಎಂದು ಮೂಲಗಳು ತಿಳಿಸಿವೆ.
- ‘ಮಾತುಕತೆಯಲ್ಲಿ ಪ್ರಗತಿಯು, ಕಚ್ಚಾ ತೈಲ ಖರೀದಿಗೆ ಸಂಬಂಧಿಸಿದ ಶೇ 25ರಷ್ಟು ತೆರಿಗೆಯನ್ನು ಅಮೆರಿಕವು ಹಿಂಪಡೆಯುವುದನ್ನು ಅವಲಂಬಿಸಿದೆ. ಅದು ಸಾಧ್ಯವಾಗದೆ ಇದ್ದರೆ ರಾಜಕೀಯವಾಗಿ ಅಥವಾ ಆರ್ಥಿಕ ದೃಷ್ಟಿಯಿಂದ ಯಾವುದೇ ಮಹತ್ವದ ತಿರುವು ಲಭಿಸುವುದಿಲ್ಲ’ ಎಂದು ಗ್ಲೋಬಲ್ ಟ್ರೇಡ್ ರಿಸರ್ಚ್ ಇನಿಷಿಯೇಟಿವ್‌ನ (ಜಿಟಿಆರ್‌ಐ) ಅಜಯ್ ಶ್ರೀವಾಸ್ತವ ಹೇಳಿದ್ದಾರೆ.

## ❖ ಜಿಎಸ್‌ಟಿ ಇಳಿಕೆ ಕುರಿತು ಮಾಹಿತಿ ನೀಡಲು ಸೂಚನೆ

**ಸಂದರ್ಭ: ಭೌತಿಕ ಮಳಿಗೆಗಳ ಮೂಲಕ ರಿಟೇಲ್ ಮಾರಾಟದಲ್ಲಿ ತೊಡಗಿರುವವರು ಜಿಎಸ್‌ಟಿ ದರ ಇಳಿಕೆಯಿಂದಾಗಿ ಉತ್ಪನ್ನಗಳ ಬೆಲೆಯಲ್ಲಿ ಆಗುವ ಇಳಿಕೆಯನ್ನು ಗ್ರಾಹಕರಿಗೆ ಗೊತ್ತಾಗುವ ರೀತಿಯಲ್ಲಿ ಪ್ರದರ್ಶಿಸಬೇಕು ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯವು ಸೂಚಿಸಿದೆ.**

- ರಿಟೇಲ್ ವಹಿವಾಟಿನಲ್ಲಿ ತೊಡಗಿರುವವರ ಸಂಘಕ್ಕೆ ಸೂಚನೆಯೊಂದನ್ನು ರವಾನಿಸಿರುವ ಕೈಗಾರಿಕೆ ಮತ್ತು ಆಂತರಿಕ ವ್ಯಾಪಾರ ಉತ್ತೇಜನಾ ಇಲಾಖೆಯು (ಡಿಪಿಐಐಟಿ), ರಿಟೇಲ್ ವಹಿವಾಟಿನಲ್ಲಿ ತೊಡಗಿರುವವರು ಜಿಎಸ್‌ಟಿಯಲ್ಲಿ ಆಗಿರುವ ಇಳಿಕೆಯನ್ನು ರಸೀದಿಯಲ್ಲಿ ‘ಜಿಎಸ್‌ಟಿ ರಿಯಾಯಿತಿ’ ಎಂಬುದಾಗಿ ನಮೂದಿಸಬೇಕು ಎಂದು ಹೇಳಿದೆ.

- ‘ಜಿಎಸ್‌ಟಿಯಿಂದಾಗಿನ ರಿಯಾಯಿತಿಯನ್ನು ಪ್ರಮುಖವಾಗಿ ತೋರಿಸಬೇಕು. ಉದಾಹರಣೆಗೆ, ಪೋಸ್ಟರ್‌ಗಳು, ಫ್ಲೈಯರ್‌ಗಳು ಹಾಗೂ ಜಾಹೀರಾತುಗಳ ಮೂಲಕ (ಟಿ.ವಿ., ಮುದ್ರಣ ಮತ್ತು ಆನ್‌ಲೈನ್ ಮಾಧ್ಯಮ) ತಿಳಿಸಬೇಕು’ ಎಂದು ಅದು ಸೂಚಿಸಿದೆ.

**‘ಜಿಎಸ್‌ಟಿ ಇಳಿಕೆ ಲಾಭ ಗ್ರಾಹಕರಿಗೆ’**

- ಜಿಎಸ್‌ಟಿ ದರದಲ್ಲಿನ ಪರಿಷ್ಕರಣೆಯ ಪೂರ್ಣ ಪ್ರಯೋಜನವನ್ನು ಗ್ರಾಹಕರಿಗೆ ವರ್ಗಾವಣೆ ಮಾಡಲಾಗುತ್ತದೆ ಎಂದು ಮದರ್ ಡೈರಿ ಮಂಗಳವಾರ ಹೇಳಿದೆ. ಹಾಲಿನ ಮೌಲ್ಯವರ್ಧಿತ ಉತ್ಪನ್ನಗಳು, ಸಂಸ್ಕರಿತ ಆಹಾರ ಸೇರಿದಂತೆ ತನ್ನ ಬಹುತೇಕ ಉತ್ಪನ್ನಗಳ ಬೆಲೆಯು ಸೆಪ್ಟೆಂಬರ್ 22ರಿಂದ ಕಡಿಮೆ ಆಗಲಿದೆ ಎಂದು ಅದು ಹೇಳಿದೆ.
- ರಾಷ್ಟ್ರೀಯ ಹೈನು ಅಭಿವೃದ್ಧಿ ಮಂಡಳಿಯ (ಎನ್‌ಡಿಡಿಬಿ) ಅಂಗಸಂಸ್ಥೆ ಮದರ್ ಡೈರಿ. 200 ಗ್ರಾಂ ಪನೀರ್ ಬೆಲೆಯು ₹95 ಇರುವುದು ₹92ಕ್ಕೆ, 1 ಲೀಟರ್ ತುಪ್ಪದ ಬೆಲೆಯು ₹675 ಇರುವುದು ₹645ಕ್ಕೆ 100 ಗ್ರಾಂ ಬೆಣ್ಣೆಯ ಬೆಲೆಯು ₹62 ಇರುವುದು ₹58ಕ್ಕೆ ಇಳಿಕೆ ಕಾಣಲಿದೆ ಎಂದು ಹೇಳಿದೆ.

## ❖ ಸತತ ನಾಲ್ಕನೇ ಸಲ ಚಿನ್ನ ಗೆದ್ದ ಕಿಪ್ಯೆಗಾನ್

**ಸಂದರ್ಭ: ವಿಶ್ವ ಅಥ್ಲೆಟಿಕ್ ಚಾಂಪಿಯನ್‌ಷಿಪ್: 1500 ಮೀ. ಓಟದಲ್ಲಿ ಕೆನ್ಯಾ ಅಥ್ಲೀಟ್ ದಾಖಲೆ**

- ಫೇತ್ ಕಿಪ್ಯೆಗಾನ್ ಎಂದಿನಂತೆ ಕೊನೆಯ ಲ್ಯಾಪ್‌ನಲ್ಲಿ ಅತ್ಯಮೋಘ ವೇಗ ಸಾಧಿಸಿ ವಿಶ್ವ ಅಥ್ಲೆಟಿಕ್ ಚಾಂಪಿಯನ್‌ಷಿಪ್‌ನ ಮಹಿಳೆಯರ 1500 ಮೀ. ಓಟದಲ್ಲಿ ಅಭೂತಪೂರ್ವ ನಾಲ್ಕನೇ ಸಲ ಚಿನ್ನ ಗೆದ್ದುಕೊಂಡರು.
- ಮೂರು ಬಾರಿ ಒಲಿಂಪಿಕ್ ಚಾಂಪಿಯನ್ ಸಹ ಆಗಿರುವ ಕಿಪ್ಯೆಗಾನ್ ಮಂಗಳವಾರ 3ನಿ.52.15 ಸೆ.ಗಳಲ್ಲಿ ಓಟವನ್ನು ಪೂರೈಸಿ ಸಂಭ್ರಮಿಸಿದರು. ಆ ಹಾದಿಯಲ್ಲಿ ವಿಶ್ವದ ಅತಿ ಶ್ರೇಷ್ಠ ಮಧ್ಯಮ ದೂರದ ಓಟಗಾರ್ತಿ ಎಂಬ ಹಿರಿಮೆಗೂ ಪಾತ್ರರಾದರು.
- ಇದೇ ದೇಶದ ದೋರ್ಕಸ್ ಇವೊಯಿ 3ನಿ.54.02 ಸೆ.ಗಳಲ್ಲಿ ಗುರಿತಲುಪಿ ಬೆಳ್ಳಿ ಗೆದ್ದರೆ, ಆಸ್ಟ್ರೇಲಿಯಾದ ಜೆಸಿಕಾ ಹಲ್ (3:55.16) ಕಂಚಿನ ಪದಕ ತಮ್ಮದಾಗಿಸಿಕೊಂಡರು.
- 31 ವರ್ಷ ವಯಸ್ಸಿನ ಕಿಪ್ಯೆಗಾನ್ ನಾಲ್ಕು ಪದಕಗಳನ್ನು ಪಡೆಯುವ ಮೂಲಕ, ಪುರುಷರ ವಿಭಾಗದಲ್ಲಿ ಮೊರಾಕೊದ ಹಿಶಮ್ ಎಲ್ ಗೆರೂಝ್ ಅವರು 1997–2003ರ ಅವಧಿಯಲ್ಲಿ ಗೆದ್ದ ಪದಕಗಳ ಸಾಧನೆ ಸರಿಗಟ್ಟಿದರು.
- ಕಾರ್ಡೆಲ್‌ಗೆ ಚಿನ್ನ: ಈ ಋತುವಿನಲ್ಲಿ ಉತ್ತಮ ಲಯದಲ್ಲಿರುವ ಅಮೆರಿಕದ ಕಾರ್ಡೆಲ್ ಟಿಂಚ್ ಪುರುಷರ 110 ಮೀ. ಹರ್ಡಲ್ಸ್‌ನಲ್ಲಿ ಚಿನ್ನ ಗೆದ್ದರು. ಜಮೈಕಾದ ಇಬ್ಬರು ಓಟಗಾರರ ಪೈಪೋಟಿ ಎದುರಿಸಿದ ಅವರು 12.99 ಸೆ.ಗಳಲ್ಲಿ ದೂರ ಕ್ರಮಿಸಿ ಮೊದಲಿಗರಾದರು.
- ಒರ್ಲಾಂಡೊ ಬೆನೆಟ್ (13.08 ಸೆ) ಮತ್ತು ಟೈಲರ್ ಮ್ಯಾಸನ್ (13.12 ಸೆ.) ಕ್ರಮವಾಗಿ ಬೆಳ್ಳಿ ಮತ್ತು ಕಂಚಿನ ಪದಕ ಗೆದ್ದರು.
- ನಾಲ್ಕನೇ ಬಾರಿ ಚಿನ್ನ ಗೆಲ್ಲುವ ನೆಚ್ಚಿನ ಸ್ಪರ್ಧಿಯಾಗಿದ್ದ ಅಮೆರಿಕದ ಗ್ರಾಂಟ್ ಹೊಲೊವೆ ವರ ಕನಸು ನುಚ್ಚುನೂರಾಯಿತು.
- ಒಲಿಂಪಿಕ್ ಚಾಂಪಿಯನ್ ಸಹ ಆಗಿರುವ 27 ವರ್ಷ ವಯಸ್ಸಿನ ಗ್ರಾಂಟ್ ಸೆಮಿಫೈನಲ್‌ನಲ್ಲಿ ಆರನೇ ಸ್ಥಾನಕ್ಕೆ ಸರಿದು ನಿರಾಶರಾದರು.

## ❖ ಮಹಿಳೆಯರ 400 ಮೀ. ಓಟ: ಮೆಕ್‌ಲಾಗ್ಲಿನ್ ವಿಶ್ವದಾಖಲೆ

**ಸಂದರ್ಭ: ಅಮೆರಿಕದ ಮೆಕ್‌ಲಾಗ್ಲಿನ್-ಲೆವ್ರೋನ್ ಅವರು ಮಂಗಳವಾರ ನಡೆದ ವಿಶ್ವ ಅಥ್ಲೆಟಿಕ್ ಚಾಂಪಿಯನ್‌ಷಿಪ್‌ನ ಮಹಿಳೆಯರ 400 ಮೀ. ಓಟದಲ್ಲಿ ನೂತನ ವಿಶ್ವದಾಖಲೆ ಬರೆದರು.**

- 400 ಮೀ. ಹರ್ಡಲ್ಸ್‌ನಲ್ಲಿ ವಿಶ್ವದಾಖಲೆ ಹೊಂದಿರುವ 26 ವರ್ಷ ವಯಸ್ಸಿನ ಮೆಕ್‌ಲಾಗ್ಲಿನ್ ಟೋಕಿಯೊದಲ್ಲಿ ಹರ್ಡಲ್ಸ್ ಬದಲು ಬರೇ 400 ಮೀ. ಓಟದಲ್ಲಿ ಭಾಗವಹಿಸಲು ನಿರ್ಧರಿಸಿದ್ದರು. ಅವರು 48.29 ಸೆ.ಗಳಲ್ಲಿ ಗುರಿತಲುಪಿದರು. ಇದರಿಂದಾಗಿ 2006ರಷ್ಟು ಹಿಂದೆ ಸಾನ್ಯಾ ರಿಚರ್ಡ್ಸ್-ರಾಸ್ ಹೆಸರಿನಲ್ಲಿದ್ದ ಹಳೆಯ ದಾಖಲೆ (48.70 ಸೆ.) ಭಗ್ನಗೊಂಡಿತು.
- ಮೆಕ್‌ಲಾಗ್ಲಿನ್ ಅವರು ಫೈನಲ್‌ನಲ್ಲಿ ಚಿನ್ನ ಗೆಲ್ಲುವ ನೆಚ್ಚಿನ ಅಥ್ಲೀಟ್ ಆಗಿದ್ದಾರೆ.

## ❖ ಅಗ್ರಸ್ಥಾನಕ್ಕೆ ಮರಳಿದ ಮಂದಾನ

**ಸಂದರ್ಭ: ಭಾರತದ ಅಗ್ರ ಕ್ರಮಾಂಕದ ಬ್ಯಾಟರ್ ಸ್ಮೃತಿ ಮಂದಾನ ಅವರು ಪ್ರಕಟವಾದ ಮಹಿಳಾ ಐಸಿಸಿ ಏಕದಿನ ರ‍್ಯಾಂಕಿಂಗ್‌ನ ಬ್ಯಾಟರ್‌ಗಳ ಪಟ್ಟಿಯಲ್ಲಿ ಅಗ್ರಸ್ಥಾನಕ್ಕೆ ಮರಳಿದ್ದಾರೆ.**

- ಸೆ. 30ರಂದು ಆರಂಭವಾಗುವ ಮಹಿಳಾ ಏಕದಿನ ವಿಶ್ವಕಪ್‌ಗೆ ಮೊದಲು ಅಗ್ರಸ್ಥಾನ ಪಡೆದಿರುವುದು ಮಂದಾನ ಅವರ ವಿಶ್ವಾಸ ಹೆಚ್ಚಿಸಲಿದೆ. 2019ರಲ್ಲಿ ಮೊದಲ ಬಾರಿ ಅಗ್ರಸ್ಥಾನಕ್ಕೇರಿದ್ದ ಅವರು, ಈ ವರ್ಷ ಎರಡು ಸಲ ಅಲ್ಪಾವಧಿಗೆ ಈ ಸ್ಥಾನ ಉಳಿಸಿಕೊಂಡಿದ್ದರು.
- **ಮಂದಾನ 735 ರೇಟಿಂಗ್ ಪಾಯಿಂಟ್ ಪಡೆದಿದ್ದರೆ, ಇಂಗ್ಲೆಂಡ್‌ನ ನಾಟ್ ಶಿವರ್-ಬ್ರಂಟ್ 731 ಪಾಯಿಂಟ್ಸ್ ಹೊಂದಿದ್ದಾರೆ.**
- ಭಾರತ ತಂಡದ ಆರಂಭ ಆಟಗಾರ್ತಿ ಪ್ರತಿಕಾ ರಾವಲ್ ನಾಲ್ಕು ಸ್ಥಾನ ಬಡ್ತಿ ಪಡೆದು 42ನೇ ಸ್ಥಾನದಲ್ಲಿದ್ದಾರೆ.
- ಮುಲ್ಲನಪುರ ಪಂದ್ಯದಲ್ಲಿ ಅಜೇಯ 77 ರನ್ ಹೊಡೆದಿದ್ದ ಆಸ್ಟ್ರೇಲಿಯಾದ ಎಡಗೈ ಆಟಗಾರ್ತಿ ಬೆತ್ ಮೂನಿ ಮೂರು ಸ್ಥಾನ ಬಡ್ತಿ ಪಡೆದು ಐದನೇ ಸ್ಥಾನಕ್ಕೇರಿದ್ದಾರೆ.
- ಭಾರತದ ಸ್ಪಿನ್ನರ್ ಸ್ನೇಹ ರಾಣಾ ಐದು ಸ್ಥಾನ ಬಡ್ತಿ ಪಡೆದು 13ನೇ ಸ್ಥಾನಕ್ಕೇರಿದ್ದಾರೆ. ಇಂಗ್ಲೆಂಡ್‌ನ ಸ್ಪಿನ್ನರ್ ಸೋಫಿ ಎಕ್ಲೆಸ್ಟೋನ್ ಅಗ್ರಸ್ಥಾನ ಕಾಪಾಡಿಕೊಂಡಿದ್ದಾರೆ.

## ❖ ಕರ್ನಾಟಕ: ಎಸ್‌ಐಆರ್‌ಗೆ ಮುನ್ನುಡಿ

**ಸಂದರ್ಭ:** ಬಿಹಾರದ ಮಾದರಿಯ ಲ್ಲಿಯೇ ರಾಜ್ಯದಲ್ಲಿಯೂ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ನಡೆಯಲಿದೆ. ರಾಜ್ಯದ ಎಲ್ಲ ಮತದಾರರು ಎಸ್‌ಐಆರ್‌ಗೆ ಒಳಪಡಲಿದ್ದು, ಮತದಾರರ ಗುರುತಿನ ಚೀಟಿ, ಮತದಾರರ ಪಟ್ಟಿ ಮತ್ತು ಮತಗಟ್ಟೆಗಳು ಬದಲಾಗಲಿವೆ.

- ರಾಜ್ಯದಲ್ಲಿ ನಡೆಯಲಿರುವ ಎಸ್‌ಐಆರ್ ಕುರಿತಂತೆ ರಾಜ್ಯ ಮುಖ್ಯ ಚುನಾವಣಾಧಿಕಾರಿ ಕಚೇರಿಯು ಬುಧವಾರ ಪತ್ರಕರ್ತರಿಗೆ ಕಾರ್ಯಾಗಾರ ನಡೆಸಿತು. ಅಲ್ಲಿ, ಎಸ್‌ಐಆರ್ ಪ್ರಕ್ರಿಯೆಯ ವಿವರಗಳನ್ನು ಒದಗಿಸಿದೆ.
- ಕೇಂದ್ರ ಚುನಾವಣಾ ಆಯೋಗದ ನಿರ್ದೇಶನದಂತೆ ರಾಜ್ಯದಲ್ಲಿ ಎಸ್‌ಐಆರ್‌ಗೆ ಸಿದ್ಧತೆ ಮಾಡಿಕೊಳ್ಳಲಾಗಿದೆ. ಜಿಲ್ಲಾಧಿಕಾರಿ ಮಟ್ಟದ ಅಧಿಕಾರಿ ಗಳಿಗೆ ತರಬೇತಿ ಪೂರ್ಣಗೊಂಡಿದೆ. ಅಧೀನ ಅಧಿಕಾರಿ ಮತ್ತು ಸಿಬ್ಬಂದಿಗೆ ತರಬೇತಿ ನಡೆಯುತ್ತಿದ್ದು, ಸೆಪ್ಟೆಂಬರ್ 25ರೊಳಗೆ ಪೂರ್ಣಗೊಳ್ಳಲಿದೆ.

### ಗರಿಷ್ಠ 90 ದಿನಗಳಲ್ಲಿ ಎಸ್‌ಐಆರ್ ಪ್ರಕ್ರಿಯೆ: ಅನ್ಬುಕುಮಾರ್

I ಪ್ರತಿ ಮತಗಟ್ಟೆಗೆ ಏಜೆಂಟರನ್ನು ನೇಮಕ ಮಾಡುವಂತೆ ರಾಜಕೀಯ ಪಕ್ಷಗಳಿಗೆ ಸೂಚಿಸಲಾಗಿದೆ

I ಗ್ರಾಮ ಪಂಚಾಯಿತಿ, ನಗರ ಪ್ರದೇಶದ ವಾರ್ಡ್‌ಗಳಲ್ಲಿ ವೈಫೈ ಸವಲತ್ತು ಇರುವ ಶಿಬಿರ ಆರಂಭಿಸಿ ಎಸ್ ಐಆರ್ ನಡೆಸಲಾಗುತ್ತದೆ. ಚುನಾವಣಾ ಆಯೋಗದ ಪೋರ್ಟಲ್‌ಗೆ ಅಪ್‌ಲೋಡ್ ಮಾಡಲಾಗುತ್ತದೆ

I ಅಂದಾಜು ಐದು ಕೋಟಿ ಮತದಾರರಿಗಾಗಿ 10 ಕೋಟಿಯಷ್ಟು ಎನ್ಯುಮರೇಷನ್ ಫಾರ್ಮ್‌ಗಳನ್ನು ಸಿದ್ಧಪಡಿಸಲಾಗಿದೆ

I ಒಬ್ಬ ಮತದಾರರಿಗೆ ಸೇರಿದ ಹಲವು ಚೀಟಿಗಳು ಇದ್ದರೆ, ಅವುಗಳ ವಿವರ ಶೇ 60ರಷ್ಟು ಹೊಂದಾಣಿಕೆಯಾದರೆ ಅದನ್ನು ತಂತ್ರಾಂಶದ ಮೂಲಕ ಪತ್ತೆ ಮಾಡಲಾಗುತ್ತದೆ

I ಬಿಎಲ್‌ಒಗಳಿಗೆ ಗೌರವಧನವನ್ನು ₹6,000ದಿಂದ ₹12,000ಕ್ಕೆ ಹೆಚ್ಚಿಸಲಾಗಿದೆ. ಎಸ್‌ಐಆರ್‌ನಲ್ಲಿ ಭಾಗಿಯಾಗುವವರಿಗೆ ಹೆಚ್ಚುವರಿಯಾಗಿ ₹6,000 ನೀಡಲಾಗುತ್ತದೆ

I ಜಿಲ್ಲಾಧಿಕಾರಿಗಳ ಮಟ್ಟದಲ್ಲಿ ಭಾಗಿಯಾಗಿರುವ ಸುಮಾರು 10,000 ನಮೂನೆ 6, ನಮೂನೆ 7 ಮತ್ತು ನಮೂನೆ 8 ಅನ್ನು ಶೀಘ್ರವೇ ವಿಲೇವಾರಿ ಮಾಡುವಂತೆ ನಿರ್ದೇಶನ ನೀಡಲಾಗಿದೆ. ಅವು ವಿಲೇವಾರಿ ಆಗದಿದ್ದರೆ, ಸಂಬಂಧಿತ ಮತದಾರರಿಗೆ ಎನ್ಯುಮರೇಷನ್ ಫಾರ್ಮ್ ಸೃಜಿಸಲಾಗುವುದಿಲ್ಲ.

- ದೇಶದಾದ್ಯಂತ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆಗೆ (ಎಸ್‌ಐಆರ್) ಮುಂದಾಗಿರುವ ಚುನಾವಣಾ ಆಯೋಗವು, ಪರಿಷ್ಕರಣೆ ವೇಳೆ ರಾಜ್ಯಗಳಲ್ಲಿನ ಅರ್ಧಕ್ಕಿಂತ ಹೆಚ್ಚು ಮತದಾರರು ಯಾವುದೇ ದಾಖಲೆಯನ್ನು ನೀಡಬೇಕಾಗಿಲ್ಲ.
- 'ಕೇಂದ್ರ ಚುನಾವಣೆ ಆಯೋಗ ಈ ಬಗ್ಗೆ ಅಧಿಸೂಚನೆ ಹೊರಡಿಸಿದ ತಕ್ಷಣವೇ ರಾಜ್ಯದಲ್ಲಿ ಎಸ್‌ಐಆರ್ ಪ್ರಕ್ರಿಯೆ ಪ್ರಾರಂಭವಾಗಲಿದೆ' ಎಂದು ರಾಜ್ಯ ಮುಖ್ಯ ಚುನಾವಣಾಧಿಕಾರಿ ವಿ. ಅನ್ಬುಕುಮಾರ್ ತಿಳಿಸಿದರು.
- **‘2002ರಲ್ಲಿ ರಾಜ್ಯದಲ್ಲಿ ಎಸ್‌ಐಆರ್ ನಡೆದಿತ್ತು. 23 ವರ್ಷಗಳ ನಂತರ ಮತ್ತೆ ಎಸ್‌ಐಆರ್ ಮಾಡಲು ನಿರ್ಧರಿಸಲಾಗಿದೆ. ಈಗಾಗಲೇ 2002ರ ಮತದಾರರ ಪಟ್ಟಿಯನ್ನು ಆಯೋಗದ ವೆಬ್ ಸೈಟ್‌ನಲ್ಲಿ ಪ್ರಕಟಿಸಲಾಗಿದೆ.** ಈ ಪಟ್ಟಿಯಲ್ಲಿ ಇರುವ ಮತದಾರರು ಪ್ರಸ್ತುತ ಮತದಾರರ ಪಟ್ಟಿಯಲ್ಲಿದ್ದಾರೊ ಇಲ್ಲವೋ ಎಂಬು ದನ್ನು ಖಚಿತಪಡಿಸಿಕೊಳ್ಳಲಾಗುತ್ತದೆ' ಎಂದು ಅವರು ವಿವರಿಸಿದರು.
- **‘ಜಿಲ್ಲಾಧಿಕಾರಿಗಳಿಗೆ ಹಾಗೂ ಮತಗಟ್ಟೆ ಅಧಿಕಾರಿಗಳಿಗೆ (ಬಿಎಲ್‌ಒ) 2002ರ ಮತದಾರರ ಪಟ್ಟಿ ನೀಡಲಾಗಿದೆ. ಬಿಎಲ್‌ಒಗಳು ಮನೆ-ಮನೆಗೆ ಭೇಟಿ ಪರಿಶೀಲಿಸುತ್ತಾರೆ.** ಎರಡೂ ಪಟ್ಟಿಯಲ್ಲಿ ಹೆಸರು ಇರುವವರಿಗೆ ಕ್ಯೂಆರ್ ಕೋಡ್ ಆಧಾರಿತ ಗಣತಿ ನಮೂನೆ (ಎನ್ಯುಮರೇಷನ್ ಫಾರ್ಮ್) ನೀಡಲಾಗುತ್ತದೆ. ಇದರಿಂದ ಅನರ್ಹ ಹಾಗೂ ನಕಲಿ ಮತದಾರರನ್ನು ಪಟ್ಟಿಯಿಂದ ತೆಗೆದು ಹಾಕಲು ಸಹಾಯವಾಗಲಿದೆ' ಎಂದು ಮಾಹಿತಿ ನೀಡಿದರು.
- ‘ಪ್ರತಿ ಮತದಾರನಿಗೆ ಸಂಬಂಧಿಸಿದ ಗಣತಿ ನಮೂನೆಯ ಎರಡು ಪ್ರತಿಗಳು ಬಿಎಲ್‌ಒಗಳು ಬಳಿ ಇರುತ್ತವೆ. 2 ಪ್ರತಿಗಳನ್ನು ಭರ್ತಿ ಮಾಡಿದ ನಂತರ ಒಂದಕ್ಕೆ ಬಿಎಲ್‌ಒ ಸಹಿ ಮಾಡಿ ಮತದಾರನಿಗೆ ನೀಡುತ್ತಾರೆ. ಮತ್ತೊಂದು ಆಯೋಗಕ್ಕೆ ಸಲ್ಲಿಸುತ್ತಾರೆ. ಮನೆಯಲ್ಲಿ ಯಾರು ಇಲ್ಲದಿದ್ದರೆ, ಮೂರು ಬಾರಿ ಮನೆಗೆ ಭೇಟಿ ನೀಡಬೇಕು. ಜೊತೆಗೆ ಸ್ನೇಹಿತರ ಮೂಲಕ ಅವರನ್ನು ಸಂಪರ್ಕಿಸಿ, ಎಸ್‌ಐಆರ್ ಪ್ರಕ್ರಿಯೆ ನಡೆಸಬೇಕು. ಪತ್ರಿಕೆಗಳ ಮೂಲಕ ಸಹ ಈ ಬಗ್ಗೆ ಪ್ರಚಾರ ಮಾಡಲಿದೆ' ಎಂದರು.
- ‘ಎನ್ಯುಮರೇಷನ್ ಫಾರ್ಮ್‌ನಲ್ಲಿ ಮತದಾರರ ಗುರುತಿನ ಚೀಟಿಯ ಸಂಖ್ಯೆ, ವಿಳಾಸ, ಹೆಸರು ತಿದ್ದುಪಡಿ, ವಿಳಾಸ ಬದಲಾವಣೆ, ಆಧಾರ್ ಸಂಖ್ಯೆ ಸೇರಿಸಲು ಅವಕಾಶವಿದೆ. ಆಯೋಗ ಸೂಚಿಸಿದ ಯಾವುದಾದರೂ ಒಂದು ದಾಖಲೆ ಸಲ್ಲಿಕೆ ಕಡ್ಡಾಯ ’ ಎಂದರು
- **ಬಹುತೇಕ ರಾಜ್ಯಗಳಲ್ಲಿ 2002 ಮತ್ತು 2004ರ ನಡುವೆ ಎಸ್‌ಐಆರ್ ನಡೆಸಲಾಗಿದೆ. ಮುಂದಿನ ಎಸ್ ಐಆರ್ ವೇಳೆ, 2002 ಹಾಗೂ 2004ರ ನಡುವಿನ ಸಂಬಂಧಿಸಿದ ವರ್ಷವನ್ನೇ ಆಧಾರವನ್ನಾಗಿ ಪರಿಗಣಿಸಲಾಗುವುದು ಎಂದೂ ಆಯೋಗ ಸ್ಪಷ್ಟಪಡಿಸಿದೆ.**
- ಈ ಹಿಂದಿನ ಎಸ್‌ಐಆರ್ ಬಳಿಕ ಪ್ರಕಟಿಸಲಾಗಿರುವ ಮತದಾರರ ಪಟ್ಟಿಯನ್ನು ಸಿದ್ಧವಾಗಿಟ್ಟುಕೊಳ್ಳುವಂತೆ ಎಲ್ಲ ರಾಜ್ಯಗಳ ಮುಖ್ಯ ಚುನಾವಣಾ ಅಧಿಕಾರಿಗಳಿಗೆ (ಸಿಇಒ) ಈಗಾಗಲೇ ಸೂಚನೆ ನೀಡಲಾಗಿದೆ. ಕೆಲ ರಾಜ್ಯಗಳ ಸಿಇಒಗಳು ಇಂತಹ ಮತದಾರರ ಪಟ್ಟಿಯನ್ನು ಈಗಾಗಲೇ ಕಚೇರಿಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಿದ್ದಾರೆ.

**ಬದಲಾಗಲಿದೆ ಮತಗಟ್ಟೆ, ವಿಭಾಗ**

- ಎಸ್‌ಐಆರ್ ಪ್ರಕ್ರಿಯೆಯ ಭಾಗವಾಗಿ ಮತಗಟ್ಟೆ, ವಿಭಾಗಗಳು ಬದಲಾಗಲಿವೆ. ಒಂದು ಕಟ್ಟಡ, ಒಂದು ಬೀದಿ, ಒಂದು ಮತಗಟ್ಟೆ ವಿಭಾಗದಲ್ಲಿ ವಾಸಿಸುತ್ತಿರುವ ಎಲ್ಲ ಮತದಾರರು ಒಂದೇ ಮತಗಟ್ಟೆ ಮತ್ತು ವಿಭಾಗಕ್ಕೆ ಒಳಪಡುವಂತೆ ಮತದಾರರ ಪಟ್ಟಿಯನ್ನು ಪರಿಷ್ಕರಿಸಲಾಗುತ್ತದೆ.
- ಒಂದು ಮತಗಟ್ಟೆಯಲ್ಲಿ 1,200ಕ್ಕಿಂತಲೂ ಹೆಚ್ಚು ಮತದಾರರು ಇರಬಾರದು. ಪ್ರತಿ ಮತಗಟ್ಟೆಗೆ 1,200 ಮತದಾರರನ್ನು ಮಿತಿಗೊಳಿಸಿ, ಹೊಸಮತಗಟ್ಟೆಗಳನ್ನು ರಚಿಸಲಾಗುತ್ತದೆ.

**ತಿರಸ್ಕಾರಕ್ಕೂ ಅವಕಾಶ**

- ಆಯೋಗವು ಸೂಚಿಸಿರುವ ಎಲ್ಲ ದಾಖಲೆಗಳನ್ನು ಸಲ್ಲಿಸಿದ್ದರೂ ಅವರ ಗಣತಿ ನಮೂನೆ (ಎನ್ಯುಮರೇಷನ್ ಫಾರ್ಮ್) ತಿರಸ್ಕರಿಸಿ ಶಿಫಾರಸು ಮಾಡಲು ಮತಗಟ್ಟೆ ಅಧಿಕಾರಿಗಳಿಗೆ (ಬಿಎಲ್‌ಒ) ಅವಕಾಶವಿದೆ. ಗಣತಿ ನಮೂನೆ, ಘೋಷಣಾ ಪತ್ರದಲ್ಲಿ ಅವುಗಳನ್ನು ಶಿಫಾರಸು ಮಾಡಲಾಗಿದೆ ಅಥವಾ ಶಿಫಾರಸು ಮಾಡಲಾಗಿಲ್ಲ ಎಂದು ಬಿಎಲ್‌ಒ ಆಯ್ಕೆ ಮಾಡಬಹುದಾಗಿದೆ.
- ಆದರೆ ಬಿಎಲ್‌ಒಗಳು ಶಿಫಾರಸಿಗೆ ಅಗತ್ಯ ಕಾರಣಗಳನ್ನು ಒದಗಿಸಬೇಕು ಮತ್ತು ಇತರ ಕೆಲ ಮತದಾರರ ಸಹಿ ಪಡೆದು ಮಹಜರು ನಡೆಸಿರಬೇಕು. ಬಿಎಲ್‌ಒಯಿಂದ ಶಿಫಾರಸು ಆಗಿ ಬಂದ ಗಣತಿ ನಮೂನೆ ಮತ್ತು ಘೋಷಣಾ ಪತ್ರವನ್ನು ಅಂಗೀಕರಿಸಲಾಗಿದೆ ಅಥವಾ ತಿರಸ್ಕರಿಸಲಾಗಿದೆ ಎಂದು ಆಯ್ಕೆ ಮಾಡುವ ಅಧಿಕಾರ ಮತದಾರರ ನೋಂದಣಾಧಿಕಾರಿಗೆ ನೀಡಲಾಗಿದೆ.

## ❖ 'ಬಿಪಿಎಲ್ ಅನರ್ಹಗೊಂಡರೆ ಎಪಿಎಲ್'

**ಸಂದರ್ಭ:** ಅನರ್ಹ ಬಿಪಿಎಲ್ ಕಾರ್ಡ್‌ಗಳನ್ನು ಎಪಿಎಲ್ ಕಾರ್ಡ್‌ಗಳಾಗಿ ಬದಲಿಸಲಾಗುವುದು. ಹೊಸ ಬಿಪಿಎಲ್ ಕಾರ್ಡ್‌ಗಳಿಗೆ ಮುಂದಿನ ತಿಂಗಳು ಅರ್ಜಿ ಆಹ್ವಾನಿಸಲು ಆಹಾರ ಇಲಾಖೆ ನಿರ್ಧರಿಸಿದೆ. ಈಗ ರದ್ದುಪಡಿಸಿದಷ್ಟು ಕಾರ್ಡ್‌ಗಳನ್ನು ವಿತರಿಸಲು ಮಾತ್ರ ಹೊಸದಾಗಿ ಅವಕಾಶ ಇದೆ.

- 'ಸರ್ಕಾರದ ಮಾನದಂಡಗಳ ಅನ್ವಯ ಬಿಪಿಎಲ್ ಕಾರ್ಡ್‌ಗಳನ್ನು ಪರಿಷ್ಕರಿಸಲಾಗುವುದು. ಅನರ್ಹವೆಂದು ಕಂಡುಬಂದರೆ ಎಪಿಎಲ್‌ಗೆ ವರ್ಗಾವಣೆ ಮಾಡುತ್ತೇವೆ. ಯಾವ ಪಡಿತರ ಚೀಟಿಯನ್ನೂ ರದ್ದು ಮಾಡುವುದಿಲ್ಲ.
- 'ಎಲ್ಲ ಕಾರ್ಡ್‌ಗಳನ್ನು ಪರಿಷ್ಕರಣೆ ಮಾಡುತ್ತೇವೆ. ಬಿಪಿಎಲ್‌ನಿಂದ ಎಪಿಎಲ್‌ಗೆ ವರ್ಗಾವಣೆ ಮಾಡಿದ ಸಂದರ್ಭದಲ್ಲಿ ಏನಾದರೂ ಸಣ್ಣಪುಟ್ಟ ಸಮಸ್ಯೆಯಾದರೆ 24 ಗಂಟೆಯ ಒಳಗೆ ಸರಿಪಡಿಸಿ ಆಹಾರಧಾನ್ಯ ಹಂಚಿಕೆ ಮಾಡಲಾಗುವುದು' .
- 'ದಕ್ಷಿಣ ಭಾರತದ ರಾಜ್ಯಗಳ ಪೈಕಿ ಕರ್ನಾಟಕ ದಲ್ಲಿ ಬಿಪಿಎಲ್ ಕಾರ್ಡ್‌ಗಳು ಅತಿ ಹೆಚ್ಚು ಇವೆ. ಶೇಕಡ 75ರಷ್ಟು ಬಿಪಿಎಲ್ ಕಾರ್ಡ್‌ಗಳು ಕರ್ನಾಟಕ ದಲ್ಲಿವೆ. ಹೀಗಾಗಿ, ಬಿಪಿಎಲ್ ಕಾರ್ಡ್‌ಗಳ ಪರಿಷ್ಕರಣೆ ಅನಿವಾರ್ಯವಾಗಿದೆ.

## ❖ ನಂದಗುಡಿ 'ರಾಗಿಗುಡ್ಡ' : ಲಕ್ಷ ವರ್ಷಗಳ ನಂಟು

**ಸಂದರ್ಭ:** ಇಂದು ಬಿರು ಬಿಸಿಲು, ಒಣ ಭೂಮಿ, ನೀರಿನ ಕೊರತೆಯಿಂದ ಬೆಂಡಾಗಿರುವ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಕೆಲವು ಪ್ರದೇಶ ಮತ್ತು ಕೋಲಾರ ಜಿಲ್ಲೆಯ ಭೂಭಾಗ ಒಂದಾನೊಂದು ಕಾಲದಲ್ಲಿ ಈಗಿನ ಮಲೆನಾಡಿನಂತೆ ಹೆಚ್ಚು ಮಳೆ ಬೀಳುವ ತೇವದಿಂದ ಕೂಡಿದ ಹಸಿರಿನಿಂದ ನಳನಳಿಸುವ ಪ್ರದೇಶವಾಗಿತ್ತು ಎಂದರೆ ನಂಬುತ್ತೀರಾ?

- ಅದರಲ್ಲೂ ಬೆಂಗಳೂರು ಗ್ರಾಮಾಂತರ ಜಿಲ್ಲೆ ಹೊಸಕೋಟೆ ತಾಲ್ಲೂಕಿನ ನಂದಗುಡಿಯ 'ರಾಗಿಗುಡ್ಡ' ಪ್ರದೇಶ ಕರ್ನಾಟಕ ಮಾತ್ರವಲ್ಲ, ಭಾರತದಲ್ಲೇ ಭೂವಿಸ್ಮಯದ ತಾಣವಾಗಿದೆ. ಭೂಮೇಲ್ಮೈನಿಂದ ಸುಮಾರು 150 ಅಡಿ ಎತ್ತರ ಮತ್ತು ಸಾವಿರಕ್ಕೂ ಹೆಚ್ಚು ಅಡಿ ಸುತ್ತಳತೆಯ ಈ ಗುಡ್ಡ ಸುತ್ತಲಿನ ಸಮತಟ್ಟಾದ ಮೇಲ್ಮೈನಿಂದ ಎದ್ದು ಕಾಣುತ್ತದೆ.

Dr. Rajkumar IAS Academy

- ಈ ಗುಡ್ಡದ ಮಹತ್ವ ಏನೆಂದರೆ ಲಕ್ಷಾಂತರ ವರ್ಷಗಳ ಹಿಂದೆ ಸಂಭವಿಸಿದ ವಿಶಿಷ್ಟ ಶೀತಲೀಕರಣ ಪ್ರಕ್ರಿಯೆ ಕುರುಹಾಗಿ ಇದು ಮೈದಳೆದಿದೆ. **ಗುಡ್ಡದ ಒಡಲಿನಲ್ಲಿ ಜಂಬಿಟ್ಟಿಗೆ ಇದೆ. ಜಂಬಿಟ್ಟಿಗೆ (ಲ್ಯಾಟರೈಟ್) ಎಂಬ ನೈಸರ್ಗಿಕ ಶಿಲೆಯ ನಿರ್ಮಾಣದ ಸುದೀರ್ಘ ಪ್ರಕ್ರಿಯೆಯೇ ಒಂದು ಕುತೂಹಲಕರ ಕಥನ.**
- ಲಕ್ಷಾಂತರ ವರ್ಷಗಳ ಹಿಂದೆ ಈ ಪ್ರದೇಶದಲ್ಲಿದ್ದ ವಿಶಿಷ್ಟ ಹವಾಮಾನ, ಭೂಪ್ರಕ್ರಿಯೆ ಮತ್ತು ಶೀತಲೀಕರಣದ ಪರಿಣಾಮ, ಭೂಮಿಯ ವಿವಿಧ ಸ್ತರಗಳಲ್ಲಿ ಕುತೂಹಲಕರ ಖನಿಜಗಳು ಸೃಷ್ಟಿಯಾಗಿವೆ. ಕೋಲಾರ ಜಿಲ್ಲೆಯ ಬಹುಪಾಲು ಪ್ರದೇಶವು ಲ್ಯಾಟರೈಟ್ ಮತ್ತು ಲ್ಯಾಟರೈಟ್‌ನಿಂದಾದ ಮಣ್ಣಿನಿಂದ ಆವೃತವಾಗಿದೆ. ನಂದಗುಡಿಯ ರಾಗಿಗುಡ್ಡ ಲ್ಯಾಟರೈಟ್ ಪ್ರಕ್ರಿಯೆಯ ಪ್ರತಿನಿಧಿಯಂತೆ ಗಮನ ಸೆಳೆಯುತ್ತಿದೆ. ಹೀಗಾಗಿ, ಭೂವಿಜ್ಞಾನಿ ಗಳಿಗೆ ಹೆಚ್ಚಿನ ಸಂಶೋಧನೆಯ ಆಯಸ್ಕಾಂತ ಬಿಂದುವಾಗಿ ಸೆಳೆಯುತ್ತಿದೆ ಎನ್ನುತ್ತಾರೆ ಭೂ ವಿಜ್ಞಾನಿಗಳು.
- ಈ ಸಂಶೋಧನೆಗೆ ವೆಸ್ಕೋ ಕಂಪನಿಯ ಮುಖ್ಯಸ್ಥ ಕೆ.ಎಸ್.ಶಿವಕುಮಾರ್ ಅವರು ಕರ್ನಾಟಕ ಅಸೋಸಿಯೇಷನ್ ಫಾರ್ ಅಡ್ವಾನ್ಸ್‌ಮೆಂಟ್ ಆಫ್ ಸೈನ್ಸ್ ಸಂಸ್ಥೆಗೆ ಯೋಜನಾ ರೂಪದಲ್ಲಿ ಧನ ಸಹಾಯ ಮಾಡಿದೆ ಎಂದು ವಿಜ್ಞಾನಿಗಳು ವಿವರಿಸಿದ್ದಾರೆ.

**ಲ್ಯಾಟರಟೈಸೇಶನ್ ಪ್ರಕ್ರಿಯೆ ಏನು?**

- **ಲಾಟರಟೈಸೇಶನ್ ಎಂದರೆ ಮೂಲ ಗಡಸು ಕಲ್ಲನ್ನು ಭೌತಿಕವಾಗಿ ಹಾಗೂ ರಾಸಾಯನಿಕವಾಗಿ ಪರಿವರ್ತಿಸಿ ಮೆದು ಕಲ್ಲಿನ ರೂಪವನ್ನು ಕೊಡುವ ಕ್ರಿಯೆ ಆಗಿದೆ**.
- ಬೆಂಗಳೂರು ಗ್ರಾಮಾಂತರ ಮತ್ತು ಕೋಲಾರದ ಸುತ್ತಮುತ್ತ ಗೀರುಶಿಲೆ ಮತ್ತು ಗ್ರಾನೈಟ್ ಕಲ್ಲುಗಳು ಸರ್ವೇ ಸಾಮಾನ್ಯ. ಈ ಕಲ್ಲುಗಳು ವಿಶಿಷ್ಟ ಹವಾಗುಣ ಪರಿಸ್ಥಿತಿಯಲ್ಲಿ ಲ್ಯಾಟರೈಟ್ ಆಗಿ ಮಾರ್ಪಾಡಾಗುತ್ತವೆ.
- ನಂದಗುಡಿಯ ಸುತ್ತಮುತ್ತ ನೈಸ್ ಎಂಬ ಬೂದಿ ಬಣ್ಣದ ಗಡಸು ಶಿಲೆ ಇದ್ದು, ಇದು ಲಕ್ಷಾಂತರ ವರ್ಷಗಳ ಸವಕಳಿ ಮತ್ತು ರಾಸಾಯನಿಕ ಶೀತಲೀಕರಣಕ್ಕೆ ಒಳಪಟ್ಟು ಕಂದು ಬಣ್ಣದ ಮೆದುವಾದ ಶಿಲೆಯಾಗಿ ಮಾರ್ಪಟ್ಟಿದೆ. ಇದಕ್ಕೆ **ಉಷ್ಣವಲಯದ (ಟ್ರಾಫಿಕಲ್) ಹವಾಗುಣವಿರಬೇಕು**.

## ❖ 70 ದಾಟಿದವರಿಗೂ 'ಆಯುಷ್ಮಾನ್ ಭಾರತ್'

**ಸಂದರ್ಭ:** 70 ವರ್ಷ ದಾಟಿದ ಹಿರಿಯರಿಗೆ ಕೇಂದ್ರ ಸರ್ಕಾರದ ವಯೋ ವಂದನಾ ಯೋಜನೆಯ ಮಾರ್ಗಸೂಚಿಗಳ ಪ್ರಕಾರ ಆಯುಷ್ಮಾನ್ ಭಾರತ್ ಆರೋಗ್ಯ ಕರ್ನಾಟಕ ಯೋಜನೆ ಪ್ರಯೋಜನಗಳನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವಿಸ್ತರಿಸಿ ಆದೇಶ ಹೊರಡಿಸಿದೆ.

- ಎಪ್ಪತ್ತು ವರ್ಷ ಮತ್ತು ಅದಕ್ಕಿಂತ ಹೆಚ್ಚಿನವರಿಗೆ ಚಿಕಿತ್ಸೆಗಾಗಿ ₹5 ಲಕ್ಷ ಟಾಪ್ ಅಪ್ ಒದಗಿಸಲಾಗುವುದು. ಅರ್ಜಿ ಸಲ್ಲಿಸಲು ಬಯಸುವವರಿಗೆ ನೋಂದಣಿಗಾಗಿ ಆಯುಷ್ಮಾನ್ ಅಪ್ಲಿಕೇಶನ್‌ನಲ್ಲಿ ಮತ್ತು ವೆಬ್ ಪೋರ್ಟಲ್‌ನಲ್ಲಿ (beneficiary.nha.in) ಪ್ರತ್ಯೇಕ ಮಾಡ್ಯೂಲ್ ರಚಿಸಲಾಗಿದೆ. ನೋಂದಣಿ ಮಾಡಿಕೊಂಡವರಿಗೆ ವಿಶಿಷ್ಟವಾದ ಆಯುಷ್ಮಾನ್ ಕಾರ್ಡ್ ನೀಡಲಾಗುತ್ತದೆ ಎಂದು ತಿಳಿಸಲಾಗಿದೆ.

## ❖ 'ಬಿ. ಸರೋಜಾದೇವಿ ಹೆಸರಿನಲ್ಲಿ 'ಅಭಿನಯ ಸರಸ್ವತಿ' ಪ್ರಶಸ್ತಿ'

**ಸಂದರ್ಭ:** ಪಂಚ ಭಾಷಾ ನಟಿ ದಿವಂಗತ ಬಿ. ಸರೋಜಾದೇವಿ ಅವರು ಭಾರತೀಯ ಚಿತ್ರರಂಗಕ್ಕೆ ನೀಡಿದ ಕೊಡುಗೆಯನ್ನು ಪರಿಗಣಿಸಿ, ಅವರ ಹೆಸರಿನಲ್ಲಿ ರಾಜ್ಯ ಸರ್ಕಾರವು ಈ ಸಾಲಿನಿಂದ ಜಾರಿಗೆ ಬರುವಂತೆ 'ಅಭಿನಯ ಸರಸ್ವತಿ ಬಿ. ಸರೋಜಾ ದೇವಿ' ಪ್ರಶಸ್ತಿ ಸ್ಥಾಪಿಸಿದೆ.

- ಈ ಪ್ರಶಸ್ತಿಯು ₹1 ಲಕ್ಷ ಮತ್ತು 100 ಗ್ರಾಂ ಬೆಳ್ಳಿ ಪದಕ ಒಳಗೊಂಡಿರುತ್ತದೆ. ಪ್ರಸ್ತುತ ಜಾರಿಯಲ್ಲಿರುವ ಕನ್ನಡ ಚಲನಚಿತ್ರ ನೀತಿ- 2011ರಲ್ಲಿನ ವಾರ್ಷಿಕ ರಾಜ್ಯ ಚಲನಚಿತ್ರ ಪ್ರಶಸ್ತಿಗಳ ಪಟ್ಟಿಯ ನಿಯಮದಂತೆ ಈ ಪ್ರಶಸ್ತಿ ಯನ್ನು ಸ್ಥಾಪಿಸಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು ಆದೇಶದಲ್ಲಿ ತಿಳಿಸಿದೆ.

- ಕನ್ನಡ ಚಿತ್ರರಂಗಕ್ಕೆ ಕನಿಷ್ಠ 25 ವರ್ಷಗಳ ಅವಿಸ್ಮರಣೀಯ ಸೇವೆ ಸಲ್ಲಿಸಿರುವ ಮಹಿಳಾ ಸಾಧಕಿಯರನ್ನು ಗುರುತಿಸಿ ಈ ಪ್ರಶಸ್ತಿ ನೀಡಲಾಗುವುದು ಎಂದೂ ಆದೇಶದಲ್ಲಿ ವಿವರಿಸಲಾಗಿದೆ.
- ಬಿ. ಸರೋಜಾದೇವಿ ಅವರ ಸಾಧನೆ ಪರಿಗಣಿಸಿ ರಾಜ್ಯ ಸರ್ಕಾರವು ಇತ್ತೀಚೆಗೆ ಅವರಿಗೆ ಮರಣೋತ್ತರವಾಗಿ 'ಕರ್ನಾಟಕ ರತ್ನ' ಪ್ರಶಸ್ತಿ ಘೋಷಿಸಿದೆ.

## ❖ ಹೇಗೆ ನಡೆಯಲಿದೆ ಸಮಗ್ರ ಪರಿಷ್ಕರಣೆ?



ರಾಜ್ಯದಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆಗೆ ಅಂತಿಮ ಹಂತದ ಸಿದ್ಧತೆ

# ಎಸ್ಐಆರ್ ಒಳ ಹೊರಗು

- ಜಯಸಿಂಹ ಆರ್.
- ಖಲೀಲ ಅಹ್ಮದ ಶೇಖ

ಬಿಹಾರದಲ್ಲಿ ಮತದಾರರ ಪಟ್ಟಿಯ 'ವಿಶೇಷ ಸಮಗ್ರ ಪರಿಷ್ಕರಣೆ'ಯ (ಎಸ್ಐಆರ್) ನಂತರ ಕರ್ನಾಟಕದಲ್ಲೂ ಎಸ್ಐಆರ್ ನಡೆಸಲು ರಾಜ್ಯ ಚುನಾವಣಾ ಆಯೋಗ ಅಂತಿಮ ಹಂತದ ಸಿದ್ಧತೆ ನಡೆಸಿದೆ.

ಮತದಾರರ ಪಟ್ಟಿಯಲ್ಲಿ ಇರುವ ಮತದಾರರು ಆಯಾ ವಿಳಾಸದಲ್ಲಿ ಇದ್ದಾರೆಯೇ, ಮೃತಪಟ್ಟಿದ್ದಾರೆಯೇ, ಅವರ ವೈವಾಹಿಕ ಮತ್ತು ಕೌಟುಂಬಿಕ ವಿವರಗಳು ಬದಲಾಗಿವೆಯೇ ಎಂಬುದನ್ನು ಪರಿಶೀಲಿಸುವ ಹಾಗೂ ಸರಿಪಡಿಸುವ ಬೃಹತ್ ಕಾರ್ಯಾಚರಣೆ ಇದು.

ಮತದಾರರ ಪಟ್ಟಿಯ ಪರಿಷ್ಕರಣೆ ಹೇಗೆ ನಡೆಯಲಿದೆ, ಪರಿಷ್ಕರಣೆಯ ಹಂತಗಳು ಯಾವುವು, ಮತದಾರರು ತಮ್ಮ ಪೌರತ್ವ ಸಾಬೀತುಪಡಿಸಲು ಯಾವೆಲ್ಲಾ ದಾಖಲೆಗಳನ್ನು ಒದಗಿಸಬೇಕು, ಪೌರತ್ವ ಮತ್ತು ಗುರುತು ಸಾಬೀತುಪಡಿಸುವಲ್ಲಿ ಸಲ್ಲಿಸಬೇಕಾದ ದಾಖಲೆಗಳಲ್ಲಿ ಇರುವ ವಿನಾಯಿತಿಗಳ ವಿವರಗಳ ಕೈಪಿಡಿಯನ್ನು ರಾಜ್ಯ ಮುಖ್ಯ ಚುನಾವಣಾಧಿಕಾರಿ ಕಚೇರಿಯು ಒದಗಿಸಿದೆ.

ರಾಜ್ಯದ ಪ್ರತಿ ಮತದಾರನೂ ಎಸ್ಐಆರ್ ಪ್ರಕ್ರಿಯೆಗೆ ಒಳಪಡಲಿದ್ದಾರೆ. ಇದರ ಆಧಾರದಲ್ಲಿ ಮತಗಟ್ಟೆಗಳು ಬದಲಾಗಲಿವೆ. ಹೊಸ ಮತದಾರರ ಚೀಟಿಯೂ ಅಸ್ತಿತ್ವಕ್ಕೆ ಬರಲಿದೆ. ಎಸ್ಐಆರ್‌ನಲ್ಲಿ ಭಾಗಿಯಾಗುವ ಸರ್ಕಾರದ ಅಧಿಕಾರಿ ಮತ್ತು ಸಿಬ್ಬಂದಿಗೆ ಹಲವು ಹಂತದ ತರಬೇತಿಯನ್ನು ಈಗಾಗಲೇ ನೀಡಲಾಗಿದೆ. ಎಸ್ಐಆರ್ ಕೈಪಿಡಿ ಮತ್ತು ತರಬೇತಿ ಸಾಮಗ್ರಿಗಳಲ್ಲಿ ಇರುವ ಮಾಹಿತಿಗಳ ಆಧಾರದಲ್ಲಿ, ಎಸ್ಐಆರ್ ಹೇಗೆ ನಡೆಯಲಿದೆ ಎಂಬುದರ ವಿವರವನ್ನು ಇಲ್ಲಿ ಕಟ್ಟಿಕೊಡಲಾಗಿದೆ.

### ಹೀಗೆ ನಡೆಯಲಿದೆ ಪರಿಷ್ಕರಣೆ...

2002ರ ವಿಶೇಷ ಸಮಗ್ರ ಪರಿಷ್ಕರಣೆಯ ನಂತರ ಸೃಜಿಸಲಾದ ಮತದಾರರ ಪಟ್ಟಿಯನ್ನು ಮತಗಟ್ಟೆ ಅಧಿಕಾರಿಗಳಿಗೆ (ಬಿಎಲ್ಒ) ನೀಡಲಾಗುತ್ತದೆ.

ಆ ಪಟ್ಟಿಯಲ್ಲಿ ಇರುವವರು, ಈಗಲೂ ಅದೇ ವಿಳಾಸದಲ್ಲಿ ಇದ್ದಾರೆ ಅಥವಾ ಇಲ್ಲವೇ ಎಂಬುದನ್ನು ಬಿಎಲ್ಒಗಳು ಪರಿಶೀಲಿಸುತ್ತಾರೆ. ಬದಲಾವಣೆಗಳು ಇಲ್ಲದೇ ಇದ್ದರೆ, ಅಂತಹವರ ಮತದಾರರ ಚೀಟಿ ಉಳಿಯುತ್ತದೆ. ಅವರು ಗಣತಿ ನಮೂನೆ (ಎನ್ಯುಮರೇಷನ್ ಫಾರ್ಮ್) ಸಲ್ಲಿಸಬೇಕೇ ಅಥವಾ ಬೇಡವೇ ಎಂಬುದನ್ನು ಇನ್ನೂ ನಿರ್ಧರಿಸಿಲ್ಲ.

ಮತದಾರರ ವಿಳಾಸ, ವಿವರಗಳಲ್ಲಿ ಬದಲಾವಣೆಯಾಗಿದ್ದರೆ, ಗಣತಿ ನಮೂನೆಯನ್ನು ಕಡ್ಡಾಯವಾಗಿ ಭರ್ತಿ ಮಾಡಬೇಕು. ನಮೂನೆಯ ಒಂದು ಪ್ರತಿಯನ್ನು ಮತದಾರರಿಗೆ ನೀಡಲಾಗುತ್ತದೆ. ಮತ್ತೊಂದು ಪ್ರತಿಯನ್ನು ಬಿಎಲ್ಒ ತನ್ನ ಬಳಿ ಇರಿಸಿಕೊಳ್ಳುತ್ತಾರೆ. ಸಂಬಂಧಿತ ಆ್ಯಪ್‌ನಲ್ಲಿಯೂ ಈ ನಮೂನೆಯಲ್ಲಿರುವ ವಿವರಗಳು ಅಪ್‌ಲೋಡ್ ಆಗುತ್ತವೆ.

ಒಂದು ಮತಗಟ್ಟೆಯಲ್ಲಿ ಇರುವ ಪ್ರತಿ ಮತದಾರನ ವಿವರ ಪರಿಶೀಲನೆ ಮತ್ತು ಬದಲಾವಣೆಯ ವಿವರಗಳನ್ನು ರಾಜಕೀಯ ಪಕ್ಷಗಳ ಏಜೆಂಟರ ಜತೆಗೆ ಹಂಚಿಕೊಳ್ಳಲಾಗುತ್ತದೆ. ಅನಂತರ ಪರಿಷ್ಕೃತ ಮತದಾರರ ಪಟ್ಟಿಯ ಕರಡನ್ನು ಪ್ರಕಟಿಸಲಾಗುತ್ತದೆ. ಅದನ್ನು ಆನ್‌ಲೈನ್‌ನಲ್ಲಿ ಲಭ್ಯವಾಗುವಂತೆ ಮಾಡಲಾಗುತ್ತದೆ ಮತ್ತು ರಾಜಕೀಯ ಪಕ್ಷಗಳ ಏಜೆಂಟರಿಗೂ ನೀಡಲಾಗುತ್ತದೆ. ಅದರ ಪರಿಶೀಲನೆಯ ನಂತರ ರಾಜಕೀಯ ಪಕ್ಷಗಳು, ಮತದಾರರು ಆಕ್ಷೇಪ ದಾಖಲಿಸಬಹುದು.

ಆಕ್ಷೇಪಗಳ ಪರಿಶೀಲನೆಯ ನಂತರ ಚುನಾವಣಾ ಆಯೋಗವು, ಕರಡು ಪರಿಷ್ಕೃತ ಮತದಾರರ ಪಟ್ಟಿಯಲ್ಲಿ ತಿದ್ದುಪಡಿಗಳನ್ನು ಮಾಡುತ್ತದೆ. ತಿದ್ದುಪಡಿಯ ನಂತರ ಅಂತಿಮ ಮತದಾರರ ಪಟ್ಟಿಯನ್ನು ಪ್ರಕಟಿಸಲಾಗುತ್ತದೆ. ಇದರಲ್ಲಿ ಯಾವುದೇ ಬದಲಾವಣೆಗೆ ಅವಕಾಶವಿಲ್ಲ. ಮತದಾರರಿಗೆ ತಕರಾರುಗಳಿದ್ದರೆ, ಅವರು ಜಿಲ್ಲಾ ಮ್ಯಾಜಿಸ್ಟ್ರೇಟ್‌ಗೆ ಮನವಿ ಸಲ್ಲಿಸಬೇಕಾಗುತ್ತದೆ.

### ಯಾರು ಯಾವೆಲ್ಲಾ ದಾಖಲೆ ಒದಗಿಸಬೇಕು...

ಗಣತಿ ನಮೂನೆಯ ಜತೆಗೆ, ಇಂತಿಷ್ಟು ವಯಸ್ಸಿನ ಮತದಾರರು ಭಿನ್ನ ಸ್ವರೂಪದ ಘೋಷಣಾ ಪತ್ರವನ್ನು ನೀಡಬೇಕಾಗುತ್ತದೆ. ಘೋಷಣಾ ಪತ್ರದ ಜತೆಗೆ ಸೂಚಿತ ಗುರುತಿನ/ಪೌರತ್ವ ಸಾಬೀತುಪಡಿಸುವ ದಾಖಲೆ ಪತ್ರಗಳನ್ನು ನೀಡಬೇಕಾಗುತ್ತದೆ. ಜನ್ಮ ವರ್ಷದ ಆಧಾರದಲ್ಲಿ ಮೂರು ವರ್ಗಗಳನ್ನು ಮಾಡಲಾಗಿದ್ದು, ಆಯಾ ವರ್ಗದವರಿಗೆ ಅನ್ವಯವಾಗುವ ಷರತ್ತುಗಳು ಈ ಮುಂದಿನಂತಿವೆ

**1. 1987ರ ಜುಲೈ 1ಕ್ಕೂ ಮೊದಲು ಜನಿಸಿದವರು**

- ಆಯಾ ಮತದಾರನ ಗುರುತು ಮತ್ತು ಪೌರತ್ವ ಸಾಬೀತುಪಡಿಸುವ ದಾಖಲೆಯಾಗಿರಬೇಕು. ಜನ್ಮ ದಿನಾಂಕ/ ಜನ್ಮಸ್ಥಳವನ್ನು ಸಾಬೀತುಪಡಿಸುವಂತಹ ದಾಖಲೆ ಪತ್ರವಾಗಿರಬೇಕು

**2. 1987ರ ಜುಲೈ 1ರ ಬಳಿಕ 2004ರ ಡಿಸೆಂಬರ್ 2ರ ಮಧ್ಯೆ ಜನಿಸಿದವರು**

- ಆಯಾ ಮತದಾರನ ಗುರುತು ಮತ್ತು ಪೌರತ್ವ ಸಾಬೀತುಪಡಿಸುವ ದಾಖಲೆಯಾಗಿರಬೇಕು. ಜನ್ಮ ದಿನಾಂಕ/ ಜನ್ಮಸ್ಥಳವನ್ನು ಸಾಬೀತುಪಡಿಸುವಂತಹ ದಾಖಲೆ ಪತ್ರವಾಗಿರಬೇಕು
- ತಂದೆ ಅಥವಾ ತಾಯಿಯ ಜನ್ಮ ದಿನಾಂಕ ಅಥವಾ ಜನ್ಮ ಸ್ಥಳ ಸಾಬೀತುಪಡಿಸುವಂತಹ ದಾಖಲೆ ಪತ್ರಗಳನ್ನೂ ಸಲ್ಲಿಸಬೇಕು

**3. 2004ರ ಡಿಸೆಂಬರ್ 2ರ ನಂತರ ಜನಿಸಿದವರು**

- ಆಯಾ ಮತದಾರನ ಗುರುತು ಮತ್ತು ಪೌರತ್ವ ಸಾಬೀತುಪಡಿಸುವ ದಾಖಲೆಯಾಗಿರಬೇಕು. ಜನ್ಮ ದಿನಾಂಕ/ ಜನ್ಮಸ್ಥಳವನ್ನು ಸಾಬೀತುಪಡಿಸುವಂತಹ ದಾಖಲೆ ಪತ್ರವಾಗಿರಬೇಕು
- ತಂದೆಯ ಜನ್ಮ ದಿನಾಂಕ ಅಥವಾ ಜನ್ಮ ಸ್ಥಳ ಸಾಬೀತುಪಡಿಸುವಂತಹ ದಾಖಲೆ ಪತ್ರಗಳನ್ನೂ ಸಲ್ಲಿಸಬೇಕು
- ತಾಯಿಯ ಜನ್ಮ ದಿನಾಂಕ ಅಥವಾ ಜನ್ಮ ಸ್ಥಳ ಸಾಬೀತುಪಡಿಸುವಂತಹ ದಾಖಲೆ ಪತ್ರಗಳನ್ನೂ ಸಲ್ಲಿಸಬೇಕು
- ತಂದೆ ಅಥವಾ ತಾಯಿ ಭಾರತೀಯರು ಆಗಿರದೇ ಇದ್ದರೆ, ಮತದಾರನ ಜನ್ಮದ ಸಂದರ್ಭದಲ್ಲಿ ಪೋಷಕರು ಭಾರತದಲ್ಲಿ ಇದ್ದರು ಎಂಬುದನ್ನು ಸಾಬೀತುಪಡಿಸುವ ಪಾಸ್‌ಪೋರ್ಟ್ ಅಥವಾ ವೀಸಾ ಪ್ರತಿ ಸಲ್ಲಿಸಬೇಕು

### ಯಾವೆಲ್ಲಾ ದಾಖಲೆಗಳು ಮಾನ್ಯ

1. ಕೇಂದ್ರ ಸರ್ಕಾರ/ ರಾಜ್ಯ ಸರ್ಕಾರ/ ಸರ್ಕಾರಿ ಉದ್ಯಮದ ಕಾಯಂ ಉದ್ಯೋಗಿ/ ಪಿಂಚಣಿದಾರರಿಗೆ ನೀಡಿರುವ ಯಾವುದೇ ಗುರುತಿನ ಚೀಟಿ ಅಥವಾ ಪಿಂಚಣಿ ಸಂದಾಯ ಆದೇಶ
2. ಭಾರತದಲ್ಲಿ 1987ಕ್ಕೂ ಮೊದಲು ಸರ್ಕಾರ/ ಸ್ಥಳೀಯ ಪ್ರಾಧಿಕಾರಗಳು/ ಬ್ಯಾಂಕುಗಳು/ ಅಂಚೆ ಕಚೇರಿ/ ಜೀವ ವಿಮಾ ನಿಗಮ/ ಸರ್ಕಾರಿ ಉದ್ಯಮಗಳು ನೀಡಿರುವ ಯಾವುದೇ ಗುರುತಿನ ಚೀಟಿ/ ಪ್ರಮಾಣ ಪತ್ರ/ ದಸ್ತಾವೇಜು
3. ಜನನ ಪ್ರಮಾಣಪತ್ರ
4. ಪಾಸ್‌ಪೋರ್ಟ್
5. ಮಾನ್ಯತೆ ಪಡೆದ ಮಂಡಳಿಗಳು/ ವಿಶ್ವವಿದ್ಯಾಲಯಗಳು ನೀಡಿರುವ ಮೆಟ್ರಿಕ್ಯುಲೇಷನ್/ ಶೈಕ್ಷಣಿಕ ಪ್ರಮಾಣಪತ್ರ (ಎಸ್ಎಸ್ಎಲ್‌ಸಿ, ಪಿಯುಸಿ, ಪದವಿ, ಸ್ನಾತಕೋತ್ತರ ಪದವಿ ಪ್ರಮಾಣಪತ್ರಗಳು)
6. ರಾಜ್ಯ ಸರ್ಕಾರದ ಪ್ರಾಧಿಕಾರಗಳು ನೀಡಿರುವ ಕಾಯಂ ನಿವಾಸಿ ಪ್ರಮಾಣ ಪತ್ರ
7. ಅರಣ್ಯ ಹಕ್ಕು ಪ್ರಮಾಣಪತ್ರ
8. ಇತರೆ ಹಿಂದುಳಿದ ವರ್ಗಗಳು (ಒಬಿಸಿ)/ ಪರಿಶಿಷ್ಟ ಜಾತಿ (ಎಸ್‌ಸಿ)/ ಪರಿಶಿಷ್ಟ ಪಂಗಡ (ಎಸ್‌ಟಿ) ಅಥವಾ ಯಾವುದೇ ಜಾತಿ ಪ್ರಮಾಣಪತ್ರಗಳು
9. ರಾಷ್ಟ್ರೀಯ ಪೌರತ್ವ ನೋಂದಣಿ ಚೀಟಿ (ಯಾವುದೇ ರಾಜ್ಯದಲ್ಲಿ ಇದ್ದರೂ ಮಾನ್ಯ)
10. ರಾಜ್ಯ ಸರ್ಕಾರ ಅಥವಾ ಸ್ಥಳೀಯ ಸಂಸ್ಥೆ/ ಪ್ರಾಧಿಕಾರಗಳು ಸಿದ್ಧಪಡಿಸಿದ ಕುಟುಂಬ ರಿಜಿಸ್ಟರ್
11. ಜಮೀನು/ ಮನೆ ಹಂಚಿಕೆಗೆ ಸಂಬಂಧಿಸಿದಂತೆ ಸರ್ಕಾರವು ನೀಡಿರುವ ಪ್ರಮಾಣಪತ್ರ/ ಹಂಚಿಕೆ ಪತ್ರ
12. **ಆಧಾರ್:** ಸುಪ್ರೀಂ ಕೋರ್ಟ್‌ನ ನಿರ್ದೇಶನ ಮತ್ತು ಆದೇಶದ ಅನ್ವಯ ಗುರುತನ್ನು ಸಾಬೀತುಪಡಿಸುವ ದಾಖಲೆಯಾಗಿ ಮಾತ್ರವೇ ಪರಿಗಣಿಸಲಾಗುತ್ತದೆ. ಆಧಾರ್ ಅನ್ನು ಪೌರತ್ವ ಅಥವಾ ನಾಗರಿಕ ಪ್ರಮಾಣಪತ್ರವಾಗಿ ಪರಿಗಣಿಸುವುದಿಲ್ಲ

- ಭಾರತದ ಹೊರಗೆ ಜನಿಸಿದವರು, ವಿದೇಶದಲ್ಲಿನ ಭಾರತೀಯ ರಾಯಭಾರ ಕಚೇರಿ ನೀಡಿರುವ ಜನನ ನೋಂದಣಿ ಪ್ರಮಾಣ ಪತ್ರ ಸಲ್ಲಿಸಬೇಕು
- ಪೌರತ್ವ ನೋಂದಣಿ ಮೂಲಕ ಭಾರತದ ಪೌರತ್ವ ಪಡೆದಿರುವವರು, ಪೌರತ್ವ ನೋಂದಣಿ ಪ್ರಮಾಣ ಪತ್ರ ನೀಡಬೇಕು. ಭಾರತದ ಹೊರಗೆ ಜನಿಸಿದವರು, ವಿದೇಶದಲ್ಲಿನ ಭಾರತೀಯ ರಾಯಭಾರ ಕಚೇರಿ ನೀಡಿರುವ ಜನನ ನೋಂದಣಿ ಪ್ರಮಾಣ ಪತ್ರ ಸಲ್ಲಿಸಬೇಕು

### ವಿಳಾಸ ಬದಲಾಗಿದ್ದರೆ...

ಮತದಾರರ ವಿಳಾಸ ಬದಲಾಗಿದ್ದರೆ, ಬಿಎಲ್ಒಗಳು ಅದನ್ನು ಪರಿಶೀಲಿಸುತ್ತಾರೆ. ಮತದಾರರು ಸಂಪರ್ಕಕ್ಕೆ ಸಿಕ್ಕರೆ, ಅವರ ಈಗಿನ ವಿಳಾಸದ ವಿವರ ಪಡೆದುಕೊಳ್ಳುತ್ತಾರೆ. ಮತದಾರರು ಬೇರೆ ಮನೆಗೆ (ಮನೆ ನಂಬರ್ ಬದಲಾಗುತ್ತದೆ), ಬೇರೆ ಬೀದಿಗೆ, ಬೇರೆ ವಿಭಾಗಕ್ಕೆ, ಬೇರೆ ಮತಗಟ್ಟೆ ವ್ಯಾಪ್ತಿಗೆ ಅಥವಾ ಬೇರೆ ವಿಧಾನಸಭಾ ಕ್ಷೇತ್ರಕ್ಕೆ ಸ್ಥಳಾಂತರವಾಗಿದ್ದರೆ, ಗಣತಿ ನಮೂನೆ ಜತೆಗೆ ಸ್ಥಳಾಂತರ ನಮೂನೆ (ನಮೂನೆ 8/ ನಮೂನೆ 8ಎ) ಸಲ್ಲಿಸಬೇಕಾಗುತ್ತದೆ. ಈ ಮೂಲಕ ನೂತನ ವಿಳಾಸದಲ್ಲೇ ಮತದಾರರ ಚೀಟಿ ಸೃಷ್ಟಿ ಆಗುತ್ತದೆ.

ಒಂದೊಮ್ಮೆ ಮತದಾರರರು ಆ ವಿಳಾಸದಲ್ಲಿ ಇಲ್ಲದೇ ಇದ್ದರೆ, ಅವರು ಸಂಪರ್ಕಕ್ಕೆ ಸಿಗದೇ ಹೋದರೆ ಅವರ ಚೀಟಿ ರದ್ದಾಗುತ್ತದೆ. ಆದರೆ ಆ ಮತದಾರರು ಬೇರೊಂದು ಸ್ಥಳದಲ್ಲಿದ್ದು, ಅಲ್ಲಿಗೆ ಭೇಟಿ ನೀಡುವ ಬಿಎಲ್ಒಗಳಿಗೆ ತಮ್ಮ ಮತದಾರರ ಚೀಟಿಯನ್ನು ಒಪ್ಪಿಸಬೇಕು. ಆಗ ಬಿಎಲ್ಒಗಳು ಅದನ್ನು ರದ್ದುಪಡಿಸಲು ಶಿಫಾರಸು ಮಾಡಿ, ಹೊಸದಾಗಿ ಮತದಾರರ ನೋಂದಣಿ ಅರ್ಜಿಯನ್ನು (ನಮೂನೆ 6) ಭರ್ತಿ ಮಾಡುತ್ತಾರೆ. ಆ ಮೂಲಕ ಮತದಾರರು ತಾವು ಈಗ ಇರುವ ವಿಳಾಸದಲ್ಲೇ ಹೊಸ ಮತದಾರರ ಚೀಟಿಯನ್ನು ಪಡೆಯಬಹುದಾಗಿದೆ.

- 'ನಮೂನೆ 6' ಅನ್ನು ಹೊಸ ಮತದಾರರ ನೋಂದಣಿಗೆ ಮಾತ್ರವೇ ನೀಡಲಾಗುತ್ತದೆ. ಆದರೆ ಹಿಂದಿನ ವಿಳಾಸದಲ್ಲಿರುವ ಎಪಿಕ್ ರದ್ದುಪಡಿಸಿ, ಹೊಸದಾಗಿ ನೋಂದಣಿ ಮಾಡಿಸುವವರು ಈ ನಮೂನೆಯನ್ನು ಸಲ್ಲಿಸಬಹುದಾಗಿದೆ.

ಎಡದಿಂದ ಬಲಕ್ಕೆ
1. ಮನದಲ್ಲಿಯೇ ಕಡೆಯುವುದು (3)
2. ವಸ್ತುಗಳನ್ನು ಸಂಗ್ರಹಿಸುವ ಸ್ಥಳ (3)
5. ಹರಿಯುವಂಥಹ ವಸ್ತು (2)
6. ತಡವೆಂದಾಗಲೇ ಈ ತಬ್ಬಿಬ್ಬು! (4)
7. ಲಡಾಯಿಯಲ್ಲಿರುವ ದಾರದ ಉಂಡೆ (2)
9. ಸಂಘದಲ್ಲಿ ಆರಂಭವಾದ ತಿಕ್ಕಾಟ (3)
10. ಮುನಿದವನನ್ನು ನೋಡಿದಾಗಲೇ ಈ ಸಂತಸ! (2)
12. ಬರದಲ್ಲಿ ಹೊರದೂಡುವಿಕೆ! (4)



# ಕಾನೂನು ಹೇಳುವುದೇನು?

- ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆಗೆ (ಎಸ್ಐಆರ್) ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್‌ಗೆ ಇತ್ತೀಚೆಗೆ ಸಲ್ಲಿಸಿರುವ ಪ್ರಮಾಣಪತ್ರದಲ್ಲಿ ಚುನಾವಣಾ ಆಯೋಗವು, 'ಮತದಾರರ ಪಟ್ಟಿಯ ಸಂಕ್ಷಿಪ್ತ ಪರಿಷ್ಕರಣೆ ಅಥವಾ ಸಮಗ್ರ ಪರಿಷ್ಕರಣೆ ನಡೆಸುವ ಬಗ್ಗೆ ಆಯೋಗ ಮಾತ್ರ ನಿರ್ಧಾರ ಕೈಗೊಳ್ಳಬಹುದು. ಅಂತಹ ಸಾಂವಿಧಾನಿಕ ಮತ್ತು ಶಾಸನಬದ್ಧ ಅಧಿಕಾರ ಆಯೋಗಕ್ಕೆ ಇದೆ' ಎಂದು ಹೇಳಿತ್ತು. ಅಲ್ಲದೇ, 'ಎಸ್ಐಆರ್ ಅನ್ನು ಯಾವಾಗ ಮತ್ತು ಹೇಗೆ ನಡೆಸಬೇಕು ಎಂಬ ನಿರ್ಧಾರ ಕೈಗೊಳ್ಳುವ ಸಂಬಂಧ ಆಯೋಗಕ್ಕಿರುವ 'ವಿಶೇಷ ಅಧಿಕಾರ ವ್ಯಾಪ್ತಿ'ಯಲ್ಲಿ ಸುಪ್ರೀಂ ಕೋರ್ಟ್ ಮಧ್ಯ ಪ್ರವೇಶಿಸಬಾರದು' ಎಂದೂ ಹೇಳಿತ್ತು
- ಸಂವಿಧಾನದ 324ನೇ ವಿಧಿ, 1950ರ ಜನ ಪ್ರಾತಿನಿಧ್ಯ ಕಾಯ್ದೆಯ 21ನೇ ಸೆಕ್ಷನ್ ಮತ್ತು 1960ರ ಮತದಾರರ ನೋಂದಣಿ ನಿಯಮಾವಳಿಗಳು ವಿಶೇಷ ಸಮಗ್ರ ಪರಿಷ್ಕರಣೆ ನಡೆಸುವ ಅಧಿಕಾರವನ್ನು ಆಯೋಗಕ್ಕೆ ನೀಡಿವೆ ಎಂಬುದು ಅದರ ವಾದ
- ಜನ ಪ್ರಾತಿನಿಧ್ಯ ಕಾಯ್ದೆಯ 21ನೇ ಸೆಕ್ಷನ್ ಮತದಾರರ ಪಟ್ಟಿಯನ್ನು ಸಿದ್ಧಪಡಿಸುವುದು ಮತ್ತು ಪರಿಷ್ಕರಣೆ ನಡೆಸುವ ಅಧಿಕಾರವನ್ನು ಚುನಾವಣಾ ಆಯೋಗಕ್ಕೆ ನೀಡಿದೆ. ಈ ಸೆಕ್ಷನ್‌ನ 3ನೇ ಉಪ ಸೆಕ್ಷನ್ ವಿಶೇಷ ಪರಿಷ್ಕರಣೆಯ ಬಗ್ಗೆ ಪ್ರಸ್ತಾಪಿಸುತ್ತದೆ. ಆಯೋಗವು ಯಾವಾಗ ಬೇಕಾದರೂ ನಿರ್ದಿಷ್ಟ ಕಾರಣಗಳಿಗಾಗಿ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ ನಡೆಸಬಹುದು ಎಂದು ಅದು ಹೇಳುತ್ತದೆ
- ಆದರೆ, ಮತದಾರರ ನೋಂದಣಿ ಹಾಗೂ ಇತರ ವಿಚಾರಗಳಲ್ಲಿ ಆಯೋಗವು ನಿಯಮ ಪಾಲನೆ ಮಾಡದೇ ಇದ್ದಾಗ ಸುಪ್ರೀಂ ಕೋರ್ಟ್ ಮಧ್ಯಪ್ರವೇಶಿಸಿದ ಉದಾಹರಣೆಗಳಿವೆ

– 1978ರ ಮೋಹಿಂದರ್ ಸಿಂಗ್ ಗಿಲ್ ಮತ್ತು ಮುಖ್ಯ ಚುನಾವಣಾ ಆಯುಕ್ತರ ನಡುವಿನ ಪ್ರಕರಣದಲ್ಲಿ ಸಂವಿಧಾನದ 324ರ ವಿಧಿಯ ಅಡಿಯಲ್ಲಿ ಆಯೋಗಕ್ಕೆ ಇರುವ ಅಧಿಕಾರವನ್ನು ನ್ಯಾಯಸಮ್ಮತವಾಗಿ ಮತ್ತು ತರ್ಕಬದ್ಧವಾಗಿ ಬಳಸಬೇಕೇ ವಿನಾ, ಮನಸೋಇಚ್ಛೆ ಅಥವಾ ದುರುದ್ದೇಶಪೂರಿತವಾಗಿ ಬಳಸಬಾರದು ಎಂದು ಹೇಳಿತ್ತು. ಅಲ್ಲದೇ, ಚುನಾವಣಾ ಆಯೋಗಕ್ಕೆ ಸಂವಿಧಾನಬದ್ಧ ಅಧಿಕಾರ ಇದ್ದಾಗ್ಯೂ ಅವುಗಳು ಪರಮಾಧಿಕಾರವಲ್ಲ ಮತ್ತು ಅವು ನ್ಯಾಯಾಂಗದ ಪರಿಶೀಲನೆಗೆ ಒಳಪಡುತ್ತವೆ ಎಂದು ಪ್ರತಿಪಾದಿಸಿತ್ತು

–1985ರ ಲಕ್ಷ್ಮೀಚರಣ್ ಸೇನ್ ಮತ್ತು ಎ.ಕೆ.ಎಂ. ಹಸನ್ ಉಝ್ಝಮನ್ ಪ್ರಕರಣದಲ್ಲಿ, ಮತದಾರರ ಪಟ್ಟಿಯಲ್ಲಿ ಯಾವುದೇ ಬದಲಾವಣೆ ನಡೆಸಬೇಕಾದರೆ ಸಮರ್ಪಕವಾದ ಪ್ರಕ್ರಿಯೆಯನ್ನು ಅನುಸರಿಸುವ ಅಗತ್ಯದ ಬಗ್ಗೆ ಸುಪ್ರೀಂ ಕೋರ್ಟ್ ಒತ್ತಿ ಹೇಳಿತ್ತು. ನಿರ್ದಿಷ್ಟ ಕಾರ್ಯವಿಧಾನಗಳನ್ನು ಅನುಸರಿಸದೇ ಮತದಾರರ ಪಟ್ಟಿಯಿಂದ ಹೆಸರುಗಳನ್ನು ಸಾಮೂಹಿಕವಾಗಿ ತೆಗೆದುಹಾಕುವುದು ಸಹಜ ನ್ಯಾಯದ ಉಲ್ಲಂಘನೆಯಾಗುತ್ತದೆ ಎಂದು ಅಭಿಪ್ರಾಯಪಟ್ಟಿತ್ತು

### ಪ್ರಮುಖ ಆಕ್ಷೇಪಗಳು

ವಿದೇಶಗಳಿಂದ ಅಕ್ರಮವಾಗಿ ನುಸುಳುಕೋರರು ದೇಶದೊಳಗೆ ಪ್ರವೇಶಿಸಿರುವುದು ಸೇರಿದಂತೆ ಹಲವು ಕಾರಣಗಳಿಂದ ಎಸ್ಐಆರ್ ಅಗತ್ಯ ಎನ್ನುವುದು ಚುನಾವಣಾ ಆಯೋಗದ ಸಮರ್ಥನೆ. ಆದರೆ, ಅದಕ್ಕೆ ಹಲವು ವಲಯಗಳಿಂದ ವಿರೋಧ ವ್ಯಕ್ತವಾಗಿದೆ. ಅವರ ಮುಖ್ಯ ಪ್ರತಿಪಾದನೆಗಳು ಇಂತಿವೆ:

- ಕೇಂದ್ರ ಸರ್ಕಾರವು ಎಸ್ಐಆರ್ ಮುಸುಕಿನಲ್ಲಿ ತನ್ನ ಕಾರ್ಯಸೂಚಿಯನ್ನು ಜಾರಿಗೆ ತರಲು ಹೊರಟಿದೆ; ನಿರ್ದಿಷ್ಟ ಧರ್ಮ/ ಸಮುದಾಯಗಳನ್ನು ಗುರಿಯಾಗಿಸಿಕೊಂಡು ಮತದಾರರ ಪಟ್ಟಿ ಪರಿಷ್ಕರಿಸಲಾಗುತ್ತಿದೆ
- ಪಶ್ಚಿಮ ಬಂಗಾಳ, ಅಸ್ಸಾಂನಂಥ ಕೆಲವು ರಾಜ್ಯಗಳನ್ನು ಗುರಿಯಾಗಿಸಿಕೊಂಡು ರಾಷ್ಟ್ರೀಯ ಪೌರತ್ವ ನೋಂದಣಿಯನ್ನು (ಎನ್ಆರ್‌ಸಿ) ಜಾರಿ ಮಾಡುವ ಪರೋಕ್ಷ ಪ್ರಯತ್ನ ಇದಾಗಿದೆ
- ಅಲ್ಪಸಂಖ್ಯಾತರು, ಅಲಕ್ಷಿತ ಸಮುದಾಯಗಳು, ಗ್ರಾಮೀಣ ಭಾಗದ ಬಡವರು, ಅನಕ್ಷರಸ್ಥರು, ವಲಸೆ ಕಾರ್ಮಿಕರ ಮತದಾನದ ಹಕ್ಕನ್ನು ಕಸಿಯುತ್ತದೆ
- ಸಂಕೀರ್ಣ ಪ್ರಕ್ರಿಯೆ ಮತ್ತು ಹಲವು ದಾಖಲೆಗಳ ಅಗತ್ಯ ಸೃಷ್ಟಿಯ ಮೂಲಕ ಹೆಚ್ಚು ಜನರನ್ನು ಮತದಾನ ಪ್ರಕ್ರಿಯೆಯಿಂದ ಹೊರಗಿಡುವ ಪ್ರಯತ್ನ
- ಎಸ್ಐಆರ್ ಪ್ರಕ್ರಿಯೆಯ ಭಾಗವಾಗಿ ಮತದಾರರು ಮತ್ತು ಅವರ ಪೋಷಕರ ದೃಢೀಕರಣದ ದಾಖಲೆಗಳನ್ನು ಕೇಳುವುದು ಸಂವಿಧಾನದ 326ನೇ ವಿಧಿಯ ಉಲ್ಲಂಘನೆಯಾಗಿದೆ
- ಚುನಾವಣಾ ಆಯೋಗವು ಹಲವು ರಾಜ್ಯಗಳಲ್ಲಿ ಹಲವು ಬಾರಿ ಮತದಾರರ ಪಟ್ಟಿಯ 'ಸಮಗ್ರ ಪರಿಷ್ಕರಣೆ' (ಇಂಟೆನ್ಸೀವ್ ರಿವಿಷನ್) ಮಾಡಿದ್ದರೂ ಈಗ 'ವಿಶೇಷ ಸಮಗ್ರ ಪರಿಷ್ಕರಣೆ' ಮಾಡುತ್ತಿದೆ. 'ವಿಶೇಷ' ಎಂದರೆ ಏನು ಮತ್ತು ದೇಶದಾದ್ಯಂತ ಅದು ಏಕೆ ಅಗತ್ಯ ಎನ್ನುವುದನ್ನು ಸೂಕ್ತ ಪುರಾವೆಗಳೊಂದಿಗೆ ಸಾಬೀತುಪಡಿಸುವಲ್ಲಿ ಚುನಾವಣಾ ಆಯೋಗವು ವಿಫಲವಾಗಿದೆ
- ಎಸ್ಐಆರ್ ಜನರ ಮತದಾನದ ಹಕ್ಕಿನ ಮೇಲೆ ವ್ಯತಿರಿಕ್ತ ಪರಿಣಾಮ ಬೀರುವಂಥದ್ದಾಗಿದ್ದು, ಮುಕ್ತ ಚುನಾವಣೆ ನಡೆಸುವ ಆಶಯಕ್ಕೆ ವಿರುದ್ಧವಾಗಿದೆ

ಆಧಾರ: ಪಿಟಿಐ, ರಿಸರ್ಚ್‌ಗೇಟ್.ನೆಟ್, ಸುಪ್ರೀಂಕೋರ್ಟ್ ಅಬ್ಸರ್ವರ್, ಮಾಧ್ಯಮ ವರದಿಗಳು

### ಬಿಹಾರದಲ್ಲಿ ನಡೆದಿದ್ದೇನು?

ಬಿಹಾರದಲ್ಲಿ ಚುನಾವಣಾ ಆಯೋಗವು 22 ವರ್ಷಗಳ ಬಳಿಕ ಮತದಾರರ 'ವಿಶೇಷ ಸಮಗ್ರ ಪರಿಷ್ಕರಣೆ' ಕೈಗೊಂಡಿದೆ. ಇದಕ್ಕೆ ಆಕ್ಷೇಪ ವ್ಯಕ್ತವಾಗಿದೆ. ಈ ಹಿಂದೆ, ಅಲ್ಲಿ 2003ರಲ್ಲಿ ಎಸ್ಐಆರ್ ನಡೆದಿತ್ತು. ಜುಲೈನಲ್ಲಿ ನಡೆದಿರುವ ಈ ಪರಿಷ್ಕರಣೆಯಲ್ಲಿ ಎಲ್ಲ ಮತದಾರರಿಗೂ ಗಣತಿ ಅರ್ಜಿಯನ್ನು ನೀಡಲಾಗಿತ್ತು. ಮತದಾರರು ಅದರಲ್ಲಿ ತಮ್ಮ ವಿವರಗಳನ್ನು ಭರ್ತಿ ಮಾಡಬೇಕಿತ್ತು.


2003ರ ಮತದಾರರ ಪಟ್ಟಿಯಲ್ಲಿದ್ದವರು ತಾವು ರಾಜ್ಯದ ಮತದಾರರು ಎಂಬುದಕ್ಕೆ ಯಾವುದೇ ಆಧಾರ ಅಥವಾ ದಾಖಲೆಯನ್ನು ನೀಡಬೇಕಾಗಿರಲಿಲ್ಲ. 2003ರ ನಂತರ 2024ರವರೆಗೆ ನಡೆದಿದ್ದ ಪರಿಷ್ಕರಣೆಯಲ್ಲಿ ಮತದಾರರ ಪಟ್ಟಿಗೆ ಹೆಸರು ಸೇರ್ಪಡೆಗೊಳಿಸಿದವರು ಪೂರಕ ದಾಖಲೆಯನ್ನು ಸಲ್ಲಿಸಬೇಕಾಗಿತ್ತು. ಸಲ್ಲಿಸಬೇಕಾದ 11 ದಾಖಲೆಗಳ ಪಟ್ಟಿಯನ್ನು ಚುನಾವಣಾ ಆಯೋಗ ನೀಡಿತ್ತು. ಇದರಲ್ಲಿ ಆಧಾರ್ ಅನ್ನು ಕೈಬಿಡಲಾಗಿತ್ತು. ಇದು ಹಲವರ ಆಕ್ಷೇಪಕ್ಕೆ ಕಾರಣವಾಗಿತ್ತು. ಕೊನೆಗೆ ಸುಪ್ರೀಂ ಕೋರ್ಟ್ ಆಧಾರ್ ಅನ್ನು ಕೂಡ ಪರಿಗಣಿಸಬೇಕು ಎಂದು ಸೂಚಿಸಿತ್ತು.

ದಾಖಲೆಗಳನ್ನು ಹೊಂದಿಸಲು ಜನರು ವಿಶೇಷವಾಗಿ ಮಹಿಳೆಯರು ಪಡಿಪಾಟಲು ಪಟ್ಟಿರುವ ಬಗ್ಗೆ ವರದಿಯಾಗಿತ್ತು.

ಆಯೋಗವು 65 ಲಕ್ಷ ಜನರ ಹೆಸರನ್ನು ಮತದಾರರ ಪಟ್ಟಿಯಿಂದ ಕೈಬಿಟ್ಟದ್ದಕ್ಕೂ ವಿರೋಧ ವ್ಯಕ್ತವಾಗಿತ್ತು. 65 ಲಕ್ಷ ಜನರ ವಿವರಗಳನ್ನು ನೀಡುವಂತೆ ಸುಪ್ರೀಂ ಕೋರ್ಟ್ ಆಯೋಗಕ್ಕೆ ಸೂಚಿಸಿತ್ತು.

## ❖ ರಾಜ್ಯದ 12 ನದಿಗಳು ಮಲಿನ

ಸಂದರ್ಭ: ಕರ್ನಾಟಕದ ನಗರ ಮತ್ತು ಪಟ್ಟಣ ಪ್ರದೇಶಗಳ ಕೊಳಚೆ ನೀರು ಹಾಗೂ ಆಯಾ ಜಲಾನಯನ ಪ್ರದೇಶಗಳಲ್ಲಿನ ಕೈಗಾರಿಕೆಗಳ ತ್ಯಾಜ್ಯ ಸೇರುತ್ತಿರುವುದರಿಂದ 12 ನದಿಗಳು ಕಲುಷಿತಗೊಂಡಿವೆ.



**ಕಲುಷಿತ ನದಿಗಳು** (ಮಿ.ಗ್ರಾಂ/ಲೀ)

| ನದಿ | ಎಲ್ಲೆಲ್ಲಿ ಕಲುಷಿತ | ಗರಿಷ್ಠ ಬಿಒಡಿ |
|---|---|---|
| ಅರ್ಕಾವತಿ | ಕನಕಪುರ, ತಿಪ್ಪಗೊಂಡನಹಳ್ಳಿ ಜಲಾಶಯ | 10 |
| ಲಕ್ಷ್ಮಣತೀರ್ಥ | ಹುಣಸೂರು | 5.6 |
| ಭದ್ರಾ | ಭದ್ರಾವತಿಯಿಂದ ಹೊಳೆಹೊನ್ನೂರು | 03 |
| ತುಂಗಭದ್ರಾ | ಹೊನ್ನಾಳಿ, ಹರಿಹರ, ಕೂಡ್ಲಿ | 2.8 |
| ಕಾವೇರಿ | ಶ್ರೀರಂಗಪಟ್ಟಣ, ರಂಗನತಿಟ್ಟು | 03 |
| ಕಬಿನಿ | ನಂಜನಗೂಡಿನ ಉದ್ದಕ್ಕೂ | 3.5 |
| ಕಾಗಿನಾ | ಶಹಾಬಾದ್ | 03 |
| ಕೃಷ್ಣಾ | ನಾರಾಯಣಪುರ, ಆಲಮಟ್ಟಿ, ತಂತಣಿ | 03 |
| ಶಿಂಷಾ | ಹಲಗೂರು, ಮದ್ದೂರು | 06 |
| ಭೀಮಾ | ಗಂಗಾಪುರದಿಂದ ಯಾದಗಿರಿ | 03 |
| ನೇತ್ರಾವತಿ | ಮಂಗಳೂರು, ಉಪ್ಪಿನಂಗಡಿ | 2.6 |
| ತುಂಗಾ | ಶಿವಮೊಗ್ಗ | 4.8 |

**2.29** ಕೋಟಿ ರಾಜ್ಯದಲ್ಲಿ ನಗರ ಪ್ರದೇಶದಲ್ಲಿರುವ ಜನರು

**3356** ದಶಲಕ್ಷ ಲೀಟರ್ ಪ್ರತಿನಿತ್ಯ ಕೊಳಚೆ ನೀರು ಸಂಗ್ರಹ

- ರಾಜ್ಯದ 17 ನದಿಗಳು ಕಲುಷಿತಗೊಂಡಿವೆ ಎಂದು ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿಯು (ಸಿಪಿಸಿಬಿ) 2022ರಲ್ಲಿ ಜಲಶಕ್ತಿ ಸಚಿವಾಲಯಕ್ಕೆ ವರದಿ ಸಲ್ಲಿಸಿತ್ತು. ರಾಜ್ಯದ ನದಿಗಳು ಮಲಿನಗೊಂಡಿರುವ ಕುರಿತು ರಾಷ್ಟ್ರೀಯ ಹಸಿರು ನ್ಯಾಯಮಂಡಳಿ (ಎನ್‌ಜಿಟಿ) ಸ್ವಯಂಪ್ರೇರಿತ ಪ್ರಕರಣ ದಾಖಲಿಸಿಕೊಂಡು ವಿಚಾರಣೆ ನಡೆಸುತ್ತಿದೆ. ಎನ್‌ಜಿಟಿಗೆ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ನಿಯಮಿತವಾಗಿ ಪ್ರಗತಿ ವರದಿ ಸಲ್ಲಿಸುತ್ತಿದೆ.
- ಗಂಗಾ ಮಾಲಿನ್ಯದ ರಾಷ್ಟ್ರೀಯ ಮಿಷನ್‌ನ ಕೇಂದ್ರ ಮೇಲ್ವಿಚಾರಣಾ ಸಮಿತಿಗೆ ಪತ್ರ ಬರೆದಿರುವ ಮಾಲಿನ್ಯ ನಿಯಂತ್ರಣ ಮಂಡಳಿ ಸದಸ್ಯ ಕಾರ್ಯದರ್ಶಿ, 'ಮಲಿನ ನದಿಗಳ ಪಟ್ಟಿಯಲ್ಲಿದ್ದ ಅಘನಾಶಿನಿ, ದಕ್ಷಿಣ ಪಿನಾಕಿನಿ, ಶರಾವತಿ ಹಾಗೂ ಗಂಗಾವಳಿ ನದಿಗಳಲ್ಲಿ ಕರಗಿದ ಆಮ್ಲಜನಕದ (ಬಿಒಡಿ) ಪ್ರಮಾಣ 3 ಮಿಲಿಗ್ರಾಂ/ಲೀಟರ್ ದಾಟಿಲ್ಲ. ಹೀಗಾಗಿ, ಈ ನದಿಗಳನ್ನು ಮಲಿನ ನದಿಗಳ ಪಟ್ಟಿಯಿಂದ ಕೈಬಿಡಬೇಕು' ಎಂದು ಕೋರಿದ್ದಾರೆ. ಜತೆಗೆ, ಎನ್‌ಜಿಟಿಗೂ ವರದಿ ಸಲ್ಲಿಸಿದ್ದಾರೆ.
- ನದಿಗಳ ಮಾಲಿನ್ಯ ಕಡಿಮೆ ಮಾಡಲು ಕ್ರಿಯಾಯೋಜನೆ ಸಿದ್ಧಪಡಿಸುವಂತೆ ಪ್ರಾದೇಶಿಕ ಕಚೇರಿಗಳಿಗೆ ನಿರ್ದೇಶನ ನೀಡಲಾಗಿದ್ದು, ಈ ಕೆಲಸ ಪ್ರಗತಿಯಲ್ಲಿದೆ. ಕ್ರಿಯಾಯೋಜನೆ ಸಿದ್ಧಗೊಂಡ ಬಳಿಕ ಕೇಂದ್ರ ಜಲಶಕ್ತಿ ಸಚಿವಾಲಯಕ್ಕೆ ಸಲ್ಲಿಸಲಾಗುವುದು ಎಂದು ತಿಳಿಸಿದ್ದಾರೆ.

## ❖ ಮುಕ್ಕಾಲು ಪಾಲು ಗಾಜಾ ನಗರ ಸುತ್ತುವರಿದ ಇಸ್ರೇಲ್

**ಸಂದರ್ಭ:** ಗಾಜಾ ನಗರದ ಕರಾವಳಿ ಭಾಗದ ದೊಡ್ಡ ಪ್ರದೇಶವೊಂದನ್ನು ಹೊರತುಪಡಿಸಿ ಉಳಿದ ಬಹುಭಾಗವನ್ನು ಇಸ್ರೇಲ್ ಸೇನೆಯು ಸುತ್ತುವರಿದಿದೆ. ಒಂದೆಡೆ, ಸಾವಿರಾರು ಪ್ಯಾಲೆಸ್ಟೀನಿಯನ್ನರು ನಗರವನ್ನು ತೊರೆಯುತ್ತಿದ್ದರೆ ಇನ್ನೊಂದೆಡೆ, ಇಸ್ರೇಲ್ ಭೂಸೇನೆಯು ಎರಡನೇ ದಿನವೂ ತನ್ನ ದಾಳಿಯನ್ನು ಮುಂದುವರಿಸಿದೆ.

- ಇಸ್ರೇಲ್‌ನ ಭೂಸೇನೆಯು ಗಾಜಾ ನಗರದ ಮೇಲೆ ನಡೆಸುತ್ತಿರುವ ತೀವ್ರ ದಾಳಿಗೆ ಕನಿಷ್ಠ 16 ಮಂದಿ ಮೃತಪಟ್ಟಿದ್ದಾರೆ. ಇದರಲ್ಲಿ ಅರ್ಧದಷ್ಟು ಜನರು ಮಹಿಳೆಯರು ಮತ್ತು ಮಕ್ಕಳಾಗಿದ್ದಾರೆ. ಗಾಜಾದ ಆಸ್ಪತ್ರೆ ಯಲ್ಲಿದ್ದ 80 ರೋಗಿಗಳಿಗೆ ಈ ದಾಳಿಯ ಕಾರಣದಿಂದ ಹೊರಹೋಗುವಂತೆ ಹೇಳಲಾಗಿದೆ.
- ಆಹಾರ, ನೀರು, ಔಷಧ ಸೇರಿದಂತೆ ಗಾಜಾ ಜನರಿಗೆ ಮೂಲಸೌಲಭ್ಯ, ನೆರವು ಒದಗಿ ಸುತ್ತಿರುವ ಅಂತರರಾಷ್ಟ್ರೀಯ ಮಟ್ಟದ ಸುಮಾರು 20 ಸಂಸ್ಥೆಗಳು ದಾಳಿಯನ್ನು ಕಟು ಮಾತುಗಳಲ್ಲಿ ಖಂಡಿಸಿವೆ. 'ಭೂಸೇನೆಯ ಕಾರ್ಯಾಚರಣೆಯು ನರಮೇಧದ ಯುದ್ಧವನ್ನು ವಿಸ್ತರಿಸಿದಂತೆ' ಎಂದಿರುವ ಕತಾರ್, ಇಸ್ರೇಲ್ ಮೇಲೆ ತೀವ್ರ ವಾಗ್ದಾಳಿ ನಡೆಸಿದೆ.
- 'ಕಳೆದ ಕೆಲವು ದಿನಗಳಲ್ಲಿ ಗಾಜಾ ನಗರದ ಎತ್ತರದ ಕಟ್ಟಡಗಳನ್ನು ಗುರಿಯಾಗಿಸಿ ಸುಮಾರು 150ಕ್ಕೂ ಹೆಚ್ಚು ದಾಳಿಗಳನ್ನು ನಡೆಸಿದ್ದೇವೆ' ಎಂದು ಇಸ್ರೇಲ್ ಹೇಳಿಕೊಂಡಿದೆ. ಈ ಕಟ್ಟಡಗಳಲ್ಲಿ ಸಾವಿರಾರು ಪ್ಯಾಲೆಸ್ಟೀನಿಯನ್ನರು ಆಶ್ರಯ ಪಡೆದುಕೊಂಡಿದ್ದರು. 'ಕಣ್ಗಾವಲು ನಡೆಸಲು ಹಮಾಸ್ ಬಂಡುಕೋರರು ಇಂಥ ಕಟ್ಟಡಗಳನ್ನು ಬಳಸಿಕೊಳ್ಳುತ್ತಾರೆ' ಎಂದು ಇಸ್ರೇಲ್ ದೂರಿದೆ.

- ದಕ್ಷಿಣಕ್ಕೆ ತೆರಳಲು ಎಚ್ಚರಿಕೆ: ಉತ್ತರ ಗಾಜಾದಿಂದ ದಕ್ಷಿಣ ಗಾಜಾಗೆ ತೆರಳುವಂತೆ ಇಸ್ರೇಲ್ ಸೇನೆ ಈಗಾಗಲೇ ಎಚ್ಚರಿಕೆ ನೀಡಿದೆ. ಇದಕ್ಕಾಗಿ ಇನ್ನೊಂದು ಹೊಸ ಮಾರ್ಗವನ್ನು ತೆರೆದಿದೆ. ‘ಈ ಮಾರ್ಗವು ಬುಧವಾರ ಸಂಜೆಯಿಂದ ಆರಂಭಗೊಂಡು ಎರಡು ದಿನ ತೆರೆದಿರಲಿದೆ’ ಎಂದು ಇಸ್ರೇಲ್ ತಿಳಿಸಿದೆ.
- ದೂರಸಂಪರ್ಕ ಸಂಪೂರ್ಣ ಕಡಿತ: ‘ಉತ್ತರ ಗಾಜಾದ ಮುಖ್ಯ ದೂರಸಂಪರ್ಕ ಮೂಲಸೌಕರ್ಯದ ಮೇಲೆ ಇಸ್ರೇಲ್ ಸೇನೆಯು ನಿರಂತರವಾಗಿ ದಾಳಿ ನಡೆಸುತ್ತಿದೆ. ಇದರಿಂದಾಗಿ ಬುಧವಾರ ಬೆಳಿಗ್ಗೆಯಿಂದ ಇಲ್ಲಿನ ದೂರವಾಣಿ ಸಂಪರ್ಕ ಮತ್ತು ಅಂತರ್ಜಾಲ ಸಂಪರ್ಕ ಸಂಪೂರ್ಣ ಕಡಿತಗೊಂಡಿದೆ’ ಎಂದು ಪ್ಯಾಲೆಸ್ಟೀನ್ ದೂರಸಂಪರ್ಕ ಪ್ರಾಧಿಕಾರ ಹೇಳಿದೆ.

**‘ಹುಥಿ ವಾಯು ಪ್ರದೇಶ ಸನ್ನದ್ಧ’**

- ಇರಾನ್ ಬೆಂಬಲಿತ ಹುಥಿ ಬಂಡುಕೋರರು ಸಕ್ರಿಯವಾಗಿರುವ ಬಂದರಿನ ಮೇಲೆ ಇಸ್ರೇಲ್ ದಾಳಿ ನಡೆಸಿತ್ತು. ಬಳಿಕ ಬಂಡುಕೋರರು ತಮ್ಮ ವಾಯು ರಕ್ಷಣಾ ವ್ಯವಸ್ಥೆಯನ್ನು ಸನ್ನದ್ಧ ಸ್ಥಿತಿಯಲ್ಲಿ ಇರಿಸಿದ್ದಾರೆ.
- ‘ಹೊಡೇಡ ಬಂದರಿನ ಮೂಲಕ ಇರಾನ್‌ನಿಂದ ಶಸ್ತ್ರಾಸ್ತ್ರಗಳು ಬಂಡುಕೋರರನ್ನು ತಲುಪುತ್ತಿವೆ. ಈ ಶಸ್ತ್ರಾಸ್ತ್ರಗಳನ್ನು ಇಸ್ರೇಲ್ ಮತ್ತು ಅದರ ಮಿತ್ರ ರಾಷ್ಟ್ರಗಳ ಮೇಲೆ ದಾಳಿ ನಡೆಸಲು ಬಳಸಿಕೊಳ್ಳಲಾಗುತ್ತದೆ’ ಎಂದು ಇಸ್ರೇಲ್ ಹೇಳಿದೆ. ‘ಇಸ್ರೇಲ್‌ನವರಿಗೆ ನಾವು ಚಳ್ಳೆಹಣ್ಣು ತಿನ್ನಿಸುತ್ತಿದ್ದೇವೆ. ನಾವು ಅವರಲ್ಲಿ ಗೊಂದಲ ಮೂಡುವಂತೆ ಮಾಡಿ, ದಾಳಿ ಮಾಡುವ ಮುನ್ನವೇ ನಮ್ಮ ವಾಯುಪ್ರದೇಶ ಬಿಟ್ಟು ಹೋಗುವಂತೆ ಮಾಡುತ್ತಿದ್ದೇವೆ’ ಎಂದು ಹುಥಿ ಬಂಡುಕೋರ ಸಂಘಟನೆ ತಿಳಿಸಿದೆ.

IAS/KAS Academy



## ❖ ಕೌನ್ಸಿಲ್‌ನಲ್ಲಿ 150 ಸದಸ್ಯರಿಗೆ ಅವಕಾಶ

**ಸಂದರ್ಭ**: ಗ್ರೇಟರ್ ಬೆಂಗಳೂರು ಪ್ರಾಧಿಕಾರದ (ಜಿಬಿಎ) ವ್ಯಾಪ್ತಿಯಲ್ಲಿ ರಚನೆಯಾಗಿರುವ ಐದು ನಗರ ಪಾಲಿಕೆಗಳ ಕೌನ್ಸಿಲ್ ಸಭಾಂಗಣದಲ್ಲಿ ತಲಾ 150 ಸದಸ್ಯರು ಕುಳಿತುಕೊಳ್ಳುವಂತೆ ವಿನ್ಯಾಸ ಮಾಡಲು ನಿರ್ಧರಿಸಲಾಗಿದೆ.

- ಬೆಂಗಳೂರು ಪೂರ್ವ ನಗರ ಪಾಲಿಕೆ (ಬಿಇಸಿಸಿ), ಪಶ್ಚಿಮ ನಗರ ಪಾಲಿಕೆ (ಬಿಡಬ್ಲ್ಯುಸಿಸಿ), ಉತ್ತರ ನಗರ ಪಾಲಿಕೆ (ಬಿಎನ್‌ಸಿಸಿ), ದಕ್ಷಿಣ ನಗರ ಪಾಲಿಕೆಗಳಿಗೆ (ಬಿಎಸ್‌ಸಿಸಿ) ಹೊಸ ಕಟ್ಟಡಗಳ ವಿನ್ಯಾಸಗೊಳಿಸಲು ಆಸಕ್ತರಿಗೆ ಜಿಬಿಎಯಿಂದ ಆಹ್ವಾನ ನೀಡಲಾಗಿದೆ. ಈ ಟೆಂಡರ್ ಆಹ್ವಾನದಂತೆ 150 ಸದಸ್ಯರು ಆಸೀನರಾಗುವಂತಹ ಕೌನ್ಸಿಲ್ ಸಭಾಂಗಣ ನಿರ್ಮಿಸಲು ಹೇಳಲಾಗಿದೆ.
- ಬಿಇಸಿಸಿಯಲ್ಲಿ 63 ವಾರ್ಡ್, ಬಿಡಬ್ಲ್ಯುಸಿಸಿಯಲ್ಲಿ 117 ವಾರ್ಡ್, ಬಿಎನ್‌ಸಿಸಿಯಲ್ಲಿ 90 ವಾರ್ಡ್, ಬಿಎಸ್ ಸಿಸಿಯಲ್ಲಿ 90 ವಾರ್ಡ್ ರಚನೆಯಾಗುವ ಪ್ರಸ್ತಾವವಿದೆ. ವಾರ್ಡ್ ಪುನರ್ ವಿಂಗಡಣಾ ಆಯೋಗ ವಾರ್ಡ್ ರಚನೆಗಳ ಬಗ್ಗೆ ವರದಿ ತಯಾರಿಸು ತ್ತಿದ್ದು, ಸೆ.23ಕ್ಕೆ ಕರಡು ವರದಿ ಸಲ್ಲಿಸುವ ಸಾಧ್ಯತೆ ಇದೆ. ಈ ಮಧ್ಯೆ, ಜಿಬಿಎಯ ಮುಖ್ಯ ಆಡಳಿತ ಕಟ್ಟಡ ಮತ್ತು ಬಿಇಸಿಸಿ, ಬಿಡಬ್ಲ್ಯುಸಿಸಿ, ಬಿಎನ್‌ಸಿಸಿ, ಬಿಎಸ್‌ಸಿಸಿಗಳ ಆಡಳಿತ ಕಟ್ಟಡವನ್ನು ನಿರ್ಮಿಸಲು ಏಕ ವಿನ್ಯಾಸಗಳನ್ನು ಆಹ್ವಾನಿಸಲಾಗಿದೆ.

## ❖ ಎಐ ಆಧಾರಿತ 'ವ್ಯೋಮಮಿತ್ರ' ಅಭಿವೃದ್ಧಿ: ಇಸ್ರೊ

**ಸಂದರ್ಭ:** ಮಾನವಸಹಿತ ಗಗನಯಾನಕ್ಕೆ ಪೂರ್ವಬಾವಿಯಾಗಿ ಕೈಗೊಳ್ಳಲಾಗುವ ಮಾನವರಹಿತ ಕಾರ್ಯಾಚರಣೆಗೆ ವಿನ್ಯಾಸಗೊಳಿಸಲಾಗಿರುವ 'ವ್ಯೋಮಮಿತ್ರ' ವು, ಮನುಷ್ಯನ ಪ್ರತಿಕೃತಿ ಯಂತಿರುವ ರೊಬೋಟ್ ಆಗಿದ್ದು, ಇದು ಕೃತಕ ಬುದ್ಧಿಮತ್ತೆ (ಎಐ) ಆಧರಿಸಿ ಕಾರ್ಯನಿರ್ವಹಿಸುವ ಸಾಮರ್ಥ್ಯ ಹೊಂದಿದೆ ಎಂದು ಇಸ್ರೊ ಅಧ್ಯಕ್ಷ ವಿ.ನಾರಾಯಣನ್ ಗುರುವಾರ ಇಲ್ಲಿ ಹೇಳಿದ್ದಾರೆ.

- 'ವ್ಯೋಮಮಿತ್ರ' ಹೊತ್ತ ಬಾಹ್ಯಾಕಾಶ ಕೋಶವನ್ನು ಡಿಸೆಂಬರ್ ಅಂತ್ಯಕ್ಕೆ ಉಡ್ಡಯನ ಮಾಡಲಾಗುವುದು. ಈ ಕುರಿತ ಕಾರ್ಯಗಳು ಭರದಿಂದ ಸಾಗಿವೆ' ಎಂದು ಸುದ್ದಿಗಾರರಿಗೆ ತಿಳಿಸಿದರು.
- 'ಮಾನವಸಹಿತ ಗಗನಯಾನ ಕಾರ್ಯಕ್ರಮದ ಭಾಗವಾಗಿ ಗಗನಯಾನಿಗಳನ್ನು ಹೊತ್ತ ಕೋಶವನ್ನು ಭೂಮಿಯಿಂದ 400 ಕಿ.ಮೀ ದೂರದ ಕಕ್ಷೆಗೆ ಕಳುಹಿಸಲಾಗುವುದು. ಈ ವೇಳೆ, ತಾಪಮಾನ, ವಾಯುಭಾರ, ತೇವಾಂಶ ಹಾಗೂ ಇಂಗಾಲದ ಡೈಆಕ್ಸೈಡ್ ಪ್ರಮಾಣದಂತಹ ಅಂಶಗಳ ಕುರಿತು ಅಧ್ಯಯನ ನಡೆಸಲಾಗುವುದು' ಎಂದು ಹೇಳಿದರು.
- 'ಈ ಮಹತ್ವಾಕಾಂಕ್ಷೆ ಯೋಜನೆಗೆ ಭಾರತೀಯ ವಾಯುಪಡೆ, ನೌಕಾಪಡೆ, ಡಿಆರ್‌ಡಿಒ ಹಾಗೂ ಇತರ ಹಲವು ಸಂಸ್ಥೆಗಳು ಇಸ್ರೊ ಜೊತೆ ಕೈಜೋಡಿಸಿವೆ' ಎಂದೂ ಹೇಳಿದರು.

## ❖ ಕೆಲ ಭಾರತೀಯರ ವೀಸಾ ರದ್ದು

**ಸಂದರ್ಭ:** 'ಫೆಂಟಾನಿಲ್' ಮಾದಕದ್ರವ್ಯ ಕಳ್ಳಸಾಗಣೆಯಲ್ಲಿ ಭಾಗಿಯಾಗಿದ್ದಾರೆ ಎಂದು ಆರೋಪದ ಮೇರೆಗೆ ಭಾರತದ ಕೆಲ ಉದ್ಯಮ ಕಾರ್ಯನಿರ್ವಾಹಕರು ಮತ್ತು ಕಾರ್ಪೊರೇಟ್ ಸಂಸ್ಥೆಗಳ ಪ್ರಮುಖರ ವೀಸಾಗಳನ್ನು ರದ್ದುಗೊಳಿಸಲಾಗಿದೆ ಮತ್ತು ಕೆಲವರಿಗೆ ವೀಸಾ ನಿರಾಕರಿಸಲಾಗಿದೆ ಎಂದು ಅಮೆರಿಕ ತಿಳಿಸಿದೆ.

- ಮಾದಕದ್ರವ್ಯ ಕಳ್ಳಸಾಗಣೆ ಆರೋಪದ ಮೇರೆಗೆ ವೀಸಾ ರದ್ದು ಮಾಡಿರುವ ಮತ್ತು ವೀಸಾ ನಿರಾಕರಿಸಿರುವ ವ್ಯಕ್ತಿಗಳ ಗುರತನ್ನು ಅಮೆರಿಕದ ರಾಯಭಾರ ಕಚೇರಿ ಸಾರ್ವಜನಿಕವಾಗಿ ಪ್ರಕಟಿಸಿಲ್ಲ. ಅಮೆರಿಕದ ಈ ಕ್ರಮದ ಬಗ್ಗೆ ಕೇಂದ್ರ ಸರ್ಕಾರದಿಂದ ಸದ್ಯಕ್ಕೆ ಯಾವುದೇ ಪ್ರತಿಕ್ರಿಯೆ ನೀಡಿಲ್ಲ. ಅಮೆರಿಕ ವಲಸೆ ಮತ್ತು ರಾಷ್ಟ್ರೀಯತೆ ಕಾಯ್ದೆ ಪ್ರಕಾರ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ಎಂದು ಅದು ತಿಳಿಸಿದೆ. ಇದರ ಪರಿಣಾಮ, ವೀಸಾ ರದ್ದುಗೊಳಿಸಿರುವ ಅಥವಾ ನಿರಾಕರಿಸಿರುವ ವ್ಯಕ್ತಿಗಳು ಮತ್ತು ಅವರ ಕುಟುಂಬದ ಸದಸ್ಯರು ಅಮೆರಿಕಕ್ಕೆ ಪ್ರಯಾಣಿಸಲು ಅನರ್ಹರು ಎಂದು ಪ್ರಕಟಣೆ ವಿವರಿಸಿದೆ.


Dr. Rajkumar IAS Academy

## ❖ ವಿಶ್ವ ಕುಸ್ತಿ: ಅಂತಿಮ್‌ಗೆ ಕಂಚು

**ಸಂದರ್ಭ:** ಯುವ ಕುಸ್ತಿಪಟು ಅಂತಿಮ್ ಪಂಘಲ್ ಅವರು ವಿಶ್ವ ಚಾಂಪಿಯನ್‌ಷಿಪ್‌ನಲ್ಲಿ ಎರಡನೇ ಪದಕ ತಮ್ಮದಾಗಿಸಿಕೊಂಡರು. ಈ ಚಾಂಪಿಯನ್ ಷಿಪ್‌ನಲ್ಲಿ ಭಾರತಕ್ಕೆ ದೊರೆತ ಮೊದಲ ಪದಕ ಇದಾಗಿದೆ.

- 2023ರ ಆವೃತ್ತಿಯಲ್ಲಿ ಕಂಚಿನ ಪದಕ ಗೆದ್ದಿದ್ದ 21 ವರ್ಷದ ಅಂತಿಮ್, ಗುರುವಾರ ನಡೆದ ಮಹಿಳೆಯರ 53 ಕೆ.ಜಿ. ವಿಭಾಗದ ಕಂಚಿನ ಪದಕದ ಸ್ಪರ್ಧೆಯಲ್ಲಿ 9–1 ಅಂತರದಿಂದ ಸ್ವೀಡನ್‌ನ ಎಮ್ಮಾ ಜೊನ್ನಾ ಡೆನಿಸ್ ಮಾಲ್ಮಗ್ರೆನ್ ಅವರನ್ನು ಸುಲಭವಾಗಿ ಮಣಿಸಿದರು. ಎಮ್ಮಾ ಅವರು 23 ವರ್ಷದೊಳಗಿನ ವಿಭಾಗದಲ್ಲಿ ವಿಶ್ವ ಚಾಂಪಿಯನ್ ಆಗಿದ್ದಾರೆ.
- ವಿಶ್ವ ಚಾಂಪಿಯನ್‌ಷಿಪ್‌ನಲ್ಲಿ ಎರಡು ಪದಕ ಗೆದ್ದ ಭಾರತದ ಎರಡನೇ ಮಹಿಳಾ ಕುಸ್ತಿಪಟು ಎಂಬ ಹಿರಿಮೆಗೆ ಅಂತಿಮ್ ಪಾತ್ರವಾದರು. ವಿನೇಶ್ ಪೋಗಟ್ ಎರಡು ಪದಕ ಗೆದ್ದ ಮೊದಲ ಕುಸ್ತಿಪಟುವಾಗಿದ್ದಾರೆ.

## ❖ ಜಾತಿವಾರು ಸಮೀಕ್ಷೆ: ಏನಿದರ ಕಕ್ಷೆ


# ಜಾತಿವಾರು ಸಮೀಕ್ಷೆ: ಏನಿದರ ಕಕ್ಷೆ

## ತೆಲಂಗಾಣ, ಬಿಹಾರದ ಹಾದಿ

• ಜಯಸಿಂಹ ಆರ್.

### ಎಂಟು ಹಂತಗಳ ಪ್ರಕ್ರಿಯೆ

### ಮುಗಿಯದ ಕಾನೂನು ಸಮರ

### ಬಿಹಾರ ಜಾತಿ ಸಮೀಕ್ಷೆ: ಒಂದು ನೋಟ



### ಆರ್.ಆರ್ ಸಂಖ್ಯೆ ಜೋಡಣೆ ಹೇಗೆ?

### ಗಮನಿಸಬೇಕಾದ ಅಂಶಗಳು

## ❖ ಒಂದೇ ಹಂತದ ತೆರಿಗೆ ವ್ಯವಸ್ಥೆ?

**ಸಂದರ್ಭ:** ಸರಕು ಮತ್ತು ಸೇವಾ ತೆರಿಗೆ (ಜಿಎಸ್‌ಟಿ) ಅಡಿಯಲ್ಲಿ ಒಂದೇ ಹಂತದ ತೆರಿಗೆ ವ್ಯವಸ್ಥೆಯನ್ನು ಜಾರಿಗೆ ತರಲು ದೇಶವು 'ಇನ್ನೂ ಸಜ್ಜಾಗಿಲ್ಲ' ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ. ಆದರೆ ಜಿಎಸ್‌ಟಿ ಅಡಿಯಲ್ಲಿ ಒಂದೇ ಹಂತದ ತೆರಿಗೆ ವ್ಯವಸ್ಥೆಯನ್ನು ಭವಿಷ್ಯದಲ್ಲಿ ಜಾರಿಗೆ ತರುವ ಸಾಧ್ಯತೆ ಇದೆ ಎಂದು ಕೂಡ ಅವರು ಹೇಳಿದ್ದಾರೆ.

- ಕೋಲ್ಕತ್ತದಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಅವರು, 'ಈ ಹಿಂದೆ ಜಿಎಸ್‌ಟಿ ಅಡಿಯಲ್ಲಿ ನಾಲ್ಕು ತೆರಿಗೆ ಹಂತಗಳನ್ನು ಚರ್ಚಿಸದೆಯೇ ನಿಗದಿ ಮಾಡಿರಲಿಲ್ಲ. ಬೇರೆ ಬೇರೆ ರಾಜ್ಯಗಳಲ್ಲಿ ಇದ್ದ ಭಿನ್ನ ತೆರಿಗೆ ಪ್ರಮಾಣಗಳನ್ನು ಸನಿಹದ ಹಂತಕ್ಕೆ ಜೋಡಿಸಲು ವ್ಯಾಪಕ ಕೆಲಸ ಆಗಿತ್ತು' ಎಂದು ಹೇಳಿದ್ದಾರೆ.
- 'ಜಿಎಸ್‌ಟಿ ದರಗಳ ಪರಿಶೀಲನೆ ನಡೆಸಿದಾಗ, ನಾಲ್ಕು ಹಂತಗಳ ತೆರಿಗೆ ವ್ಯವಸ್ಥೆಯು ಜಿಎಸ್‌ಟಿ ಮಂಡಳಿಗೆ ಸದಸ್ಯ ರಿಗೆ ಬೇಕಾಗಿಲ್ಲ ಎಂಬುದು ಗೊತ್ತಾಯಿತು. ಆದರೆ, ಒಂದೇ ಹಂತದ ತೆರಿಗೆ ವ್ಯವಸ್ಥೆಗೆ ಸಾಗಲು ಸಿದ್ಧರಿದ್ದಾರೆಯೇ ಎಂಬ ಪ್ರಶ್ನೆಗೆ ಇನ್ನೂ ಇಲ್ಲ ಎನ್ನುವ ಉತ್ತರ ಬಂತು. ಭವಿಷ್ಯದಲ್ಲಿ ಬಹುಶಃ ಅದು ಸಾಧ್ಯವಾಗಬಹುದು' ಎಂದು ನಿರ್ಮಲಾ ತಿಳಿಸಿದ್ದಾರೆ.
- ಜಿಎಸ್‌ಟಿ ವ್ಯವಸ್ಥೆಯಲ್ಲಿ ಈಗ ಆಗುತ್ತಿರುವ ಸುಧಾರಣೆಗಳನ್ನು ನಿರ್ಮಲಾ ಅವರು 'ಮುಂದಿನ ತಲೆಮಾರಿನ ಸುಧಾರಣಾ ಕ್ರಮಗಳು' ಎಂದು ಬಣ್ಣಿಸಿದ್ದಾರೆ.
- ಜಿಎಸ್‌ಟಿ ವಿಚಾರವಾಗಿ ಏನಾದರೂ ಮಾಡುವಂತೆ ಪ್ರಧಾನಿ ನರೇಂದ್ರ ಮೋದಿ ಅವರು ಎಂಟು ತಿಂಗಳ ಹಿಂದೆ ಸೂಚಿಸಿದ್ದರು ಎಂದು ನಿರ್ಮಲಾ ನೆನಪು ಮಾಡಿಕೊಂಡಿದ್ದಾರೆ.
- ಜಿಎಸ್‌ಟಿ ಅಡಿ ಇರುವ ನಾಲ್ಕು ಹಂತಗಳ ತೆರಿಗೆ ವ್ಯವಸ್ಥೆಯನ್ನು, ಎರಡು ಹಂತಗಳ ತೆರಿಗೆ ವ್ಯವಸ್ಥೆಯನ್ನಾಗಿ ಪರಿವರ್ತಿಸಲು ಈಚೆಗೆ ನಡೆದ ಜಿಎಸ್‌ಟಿ ಮಂಡಳಿ ಸಭೆಯು ತೀರ್ಮಾನಿಸಿದೆ. ಎರಡು ಹಂತಗಳ ತೆರಿಗೆ ವ್ಯವಸ್ಥೆಯು (ಶೇ 5 ಹಾಗೂ ಶೇ 18ರಷ್ಟು ತೆರಿಗೆ) ಸೆಪ್ಟೆಂಬರ್ 22ರಿಂದ ಜಾರಿಗೆ ಬರುತ್ತಿದೆ. ತಂಬಾಕು ಹಾಗೂ ಐಷಾರಾಮಿ ಉತ್ಪನ್ನಗಳಿಗೆ ಶೇ 40ರಷ್ಟು ತೆರಿಗೆ ನಿಗದಿ ಮಾಡಲಾಗಿದೆ.

## ❖ ಹೆಣ್ಣುಮಕ್ಕಳ ಶಿಕ್ಷಣಕ್ಕೆ ಬೆಳಕಾಗುವ 'ದೀಪಿಕಾ'

ಸಂದರ್ಭ: ಪ್ರತಿಯೊಂದು ಮಗುವೂ ಉತ್ತಮ ಶಿಕ್ಷಣ ಪಡೆಯಬೇಕು. ಉನ್ನತ ಶಿಕ್ಷಣ ಪಡೆಯುವ ಹೆಣ್ಣು ಮಕ್ಕಳ ಸಂಖ್ಯೆ ಹೆಚ್ಚಾಗಬೇಕು. ಅದಕ್ಕಾಗಿ ನಮ್ಮ ಫೌಂಡೇಷನ್ ಶ್ರಮಿಸುತ್ತಿದೆಅಜೀಂ ಪ್ರೇಮ್‌ಜಿ, ಉದ್ಯಮಿ.

- ಉನ್ನತ ಶಿಕ್ಷಣಕ್ಕೆ ಪ್ರವೇಶ ಪಡೆಯುವ ರಾಜ್ಯದ ಹೆಣ್ಣು ಮಕ್ಕಳಿಗೆ ಇನ್ನು ಮುಂದೆ ಅಜೀಂ ಪ್ರೇಮ್‌ಜಿ ಫೌಂಡೇಷನ್ ಆರ್ಥಿಕ ನೆರವು ನೀಡಲಿದ್ದು, ಅದಕ್ಕಾಗಿ ₹2,000 ಕೋಟಿ ಹಾಗೂ ರಾಜ್ಯ ಸರ್ಕಾರ ₹200 ಕೋಟಿ ಒದಗಿಸಿವೆ.
- ಹೆಣ್ಣು ಮಕ್ಕಳ ವಿದ್ಯಾಭ್ಯಾಸಕ್ಕಾಗಿ ಪ್ರತಿ ವರ್ಷ ವಿದ್ಯಾರ್ಥಿ ವೇತನ ನೀಡಲು ಅಜೀಂ ಪ್ರೇಮ್‌ಜಿ ಫೌಂಡೇಷನ್ ಹಾಗೂ ಉನ್ನತ ಶಿಕ್ಷಣ ಇಲಾಖೆ **'ದೀಪಿಕಾ ವಿದ್ಯಾರ್ಥಿ ವೇತನ'** ಕಾರ್ಯಕ್ರಮ ರೂಪಿಸಿದ್ದು, ಈ ಕಾರ್ಯಕ್ರಮಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ ನೀಡಿದರು.
- **ಯೋಜನೆಯಲ್ಲಿ ಪ್ರತಿ ವಿದ್ಯಾರ್ಥಿನಿಗೆ ಪದವಿ ಶಿಕ್ಷಣ ಮುಗಿಯುವವರೆಗೆ ವಾರ್ಷಿಕ ₹30,000 ಸಿಗಲಿದ್ದು,ಶೈಕ್ಷಣಿಕ ಉದ್ದೇಶ ಹಾಗೂ ಪೂರಕ ಕಾರಣಗಳಿಗೆ ಬಳಸಿಕೊಳ್ಳಬಹುದು.**
- ಸರ್ಕಾರಿ ಶಾಲೆಗಳಲ್ಲಿ 10ನೇ ತರಗತಿ ಹಾಗೂ ದ್ವಿತೀಯ ಪಿಯು ಉತ್ತೀರ್ಣರಾಗಿ 2025–26ನೇ ಸಾಲಿನಲ್ಲಿ ಸಾಮಾನ್ಯ ಪದವಿ ಅಥವಾ ವೃತ್ತಿ ಶಿಕ್ಷಣ ಪದವಿಗೆ ಸೇರುವ 37,000 ವಿದ್ಯಾರ್ಥಿನಿಯರಿಗೆ ವಿದ್ಯಾರ್ಥಿ ವೇತನದ ನೆರವು ಸಿಗಲಿದೆ. ಅರ್ಹ ವಿದ್ಯಾರ್ಥಿನಿಯರ ಸಂಖ್ಯೆ ಹೆಚ್ಚಾದರೆ ಆ ಮೊತ್ತವನ್ನು ರಾಜ್ಯ ಭರಿಸಲಿದೆ.
- ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಸಿದ್ದರಾಮಯ್ಯ, 'ಸರ್ಕಾರ ಹೆಣ್ಣುಮಕ್ಕಳ ಶಿಕ್ಷಣಕ್ಕೆ ಆದ್ಯತೆ ನೀಡಿದೆ. ಅವರು ಸುಶಿಕ್ಷಿತರಾದರೆ ಅವರ ಕುಟುಂಬ, ಸಮಾಜ, ರಾಜ್ಯವೇ ಸುಶಿಕ್ಷಿತವಾಗುತ್ತದೆ.
- ಸರ್ಕಾರಿ ಕಾಲೇಜುಗಳ ವಿದ್ಯಾರ್ಥಿನಿಯ ರಿಗೆ ಬೋಧನೆ ಹಾಗೂ ಪ್ರಯೋಗಾಲಯ ಶುಲ್ಕಗಳನ್ನು ಮರುಪಾವತಿ ಮಾಡಲಾಗುತ್ತಿದೆ. ಬಾಲ್ಯ ವಿವಾಹ, ಬಾಲ ಗರ್ಭಿಣಿಯರ ಸಮಸ್ಯೆ ನಿರ್ಮೂಲನೆಯ ಹೋರಾಟಕ್ಕೆ ಶಕ್ತಿ ತುಂಬಲಿದೆ' ಎಂದರು.

## ❖ ಸಾಮಾಜಿಕ –ಶೈಕ್ಷಣಿಕ ಸಮೀಕ್ಷೆ: ಆಧಾರ್ ಆಧಾರ

# 22ರಿಂದ ರಾಜ್ಯದಾದ್ಯಂತ ಮಾಹಿತಿ ಸಂಗ್ರಹ
# ಸಾಮಾಜಿಕ–ಶೈಕ್ಷಣಿಕ ಸಮೀಕ್ಷೆ ಆಧಾರ್ ಆಧಾರ



• ಜಯಸಿಂಹ ಆರ್.

ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ನಡೆಸಲಿರುವ 'ಸಾಮಾಜಿಕ-ಶೈಕ್ಷಣಿಕ ಸಮೀಕ್ಷೆ'ಗೆ ಆಧಾರ್ ಸಂಖ್ಯೆಯೇ ಆಧಾರ. ಸಮೀಕ್ಷೆಗೆ ಒಳಪಡುವವರು ತಮ್ಮ ಪಡಿತರ ಚೀಟಿ ವಿವರ ಅಥವಾ ಜಾತಿ ಪ್ರಮಾಣ ಪತ್ರವನ್ನು ನೀಡಬೇಕು. ಇವೆರಡೂ ಲಭ್ಯವಿಲ್ಲದೇ ಇದ್ದರೆ, ಆಧಾರ್ ನೀಡಬಹುದು.

ಪಡಿತರ ಚೀಟಿ ಇದ್ದೂ ಅದರಲ್ಲಿ ಕುಟುಂಬದ ಸದಸ್ಯರ ಹೆಸರು ನಮೂದಾಗದ ಸಂದರ್ಭದಲ್ಲಿ, ಅವರ ಆಧಾರ್ ಸಂಖ್ಯೆ ನೀಡಲೇಬೇಕಾಗುತ್ತದೆ. ಹೀಗೆ ಆಧಾರ್ ಸಂಖ್ಯೆಯನ್ನು ಬಳಸಿಕೊಂಡು, ನಿವಾಸಿಯೊಬ್ಬರ ವಿವರ ಹಲವು ಬಾರಿ ನಮೂದಾಗುವುದನ್ನು ತಡೆಯುವ ರೀತಿಯಲ್ಲಿ ಸಮೀಕ್ಷಾ ವ್ಯವಸ್ಥೆಯನ್ನು ರೂಪಿಸಲಾಗಿದೆ.

ಈ ಸಮೀಕ್ಷೆಗಾಗಿ ರೂಪಿಸಿರುವ ಆ್ಯಪ್‌ನಲ್ಲಿ ಕುಟುಂಬದ ಮುಖ್ಯಸ್ಥನ ಆಧಾರ್ ಕಾರ್ಡ್ ವಿವರವನ್ನು ನಮೂದಿಸಿದ ಕೂಡಲೇ, ಅದಕ್ಕೆ ಜೋಡಣೆಯಾಗಿರುವ ಪಡಿತರ ಚೀಟಿಯ ವಿವರ ಸ್ವಯಂಚಾಲಿತವಾಗಿ ಗೋಚರವಾಗುತ್ತದೆ. ಆ ಕುಟುಂಬದ ಸಂಪೂರ್ಣ ವಿವರವೂ ಭರ್ತಿಯಾಗುತ್ತದೆ. ಒಂದೊಮ್ಮೆ ಕುಟುಂಬದ ಮುಖ್ಯಸ್ಥ ಪಡಿತರ ಚೀಟಿಯ ವಿವರ ನೀಡಿದರೆ, ಅದರಲ್ಲಿ ನಮೂದಾಗಿರುವ ಕುಟುಂಬದ ಸದಸ್ಯರ ಎಲ್ಲ ವಿವರಗಳೂ ಭರ್ತಿಯಾಗುತ್ತವೆ. ಪಡಿತರ ಚೀಟಿ ವಿವರ ನೀಡಿದ್ದರೂ ಅದರ ವಿವರಗಳು ಭರ್ತಿಯಾಗದಿದ್ದರೆ, ಅಂತಹವರು ಆಧಾರ್ ವಿವರವನ್ನು ಕಡ್ಡಾಯವಾಗಿ ನೀಡಬೇಕು.

ಅಲೆಮಾರಿ ಸಮುದಾಯಗಳ ಜನರೂ ಆಧಾರ್/ಪಡಿತರ ಚೀಟಿ/ಜಾತಿ ಪ್ರಮಾಣ ಪತ್ರ ಹೊಂದಿದ್ದರಷ್ಟೇ ಅವರನ್ನು ಸಮೀಕ್ಷೆಗೆ ಒಳಪಡಿಸಲಾಗುತ್ತದೆ. ಸಮೀಕ್ಷೆ ಪೂರ್ಣಗೊಳಿಸಲು ಕುಟುಂಬದ ಮುಖ್ಯಸ್ಥನ ಫೋಟೊ ತೆಗೆಯಬೇಕು. ಆದರೆ ಫೋಟೊ ತೆಗೆಸಿಕೊಳ್ಳಲು ಆತ ನಿರಾಕರಿಸಲು ಅವಕಾಶವಿದೆ. ಹಾಗೆ ನಿರಾಕರಿಸುವುದಾದರೆ, ಆ ವ್ಯಕ್ತಿಯು ತನ್ನ ಆಧಾರ್/ಪಡಿತರ ಚೀಟಿ/ಜಾತಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಒದಗಿಸಲೇಬೇಕಾಗುತ್ತದೆ.

ಈ ಸಮೀಕ್ಷೆಯನ್ನು ರಾಜ್ಯದ ನಿವಾಸಿಗಳಿಗಷ್ಟೇ ಸೀಮಿತವಾಗಿ ನಡೆಸಲಾಗುತ್ತಿದೆ. ಹೀಗಾಗಿ ಹೊರರಾಜ್ಯದ ನಿವಾಸಿಗಳನ್ನು ಸಮೀಕ್ಷೆಗೆ ಒಳಪಡಿಸುವುದಿಲ್ಲ. ಸಮೀಕ್ಷೆಗೆ ವಿವರ ಸಂಗ್ರಹಿಸುವಾಗ ಆಧಾರ್ ಮತ್ತು ಪಡಿತರ ಚೀಟಿಯಲ್ಲಿ ಇರುವ ವಿಳಾಸಗಳನ್ನು ಪರಿಶೀಲಿಸಲಾಗುತ್ತದೆ. ಅದರಲ್ಲಿನ ವಿಳಾಸವು ಹೊರರಾಜ್ಯದ್ದಾಗಿದ್ದರೆ, ಅವರ ವಿವರಗಳನ್ನು ಸಂಗ್ರಹಿಸಲಾಗುತ್ತದೆ.

ಇನ್ನು ಪಡಿತರ ಚೀಟಿ ಮತ್ತು ಜಾತಿ ಪ್ರಮಾಣ ಪತ್ರ ಎರಡನ್ನೂ ಹೊಂದಿಲ್ಲದವರು ಆಧಾರ್ ವಿವರವನ್ನು ಕಡ್ಡಾಯವಾಗಿ ನೀಡಲೇಬೇಕು. ಇದರ ಬದಲಿಗೆ ಮತದಾರರ ಗುರುತಿನ ಚೀಟಿ, ಪಾಸ್‌ಪೋರ್ಟ್ ವಿವರ, ಪ್ಯಾನ್ ವಿವರಗಳನ್ನು ಬಳಸಲು ಅವಕಾಶವಿಲ್ಲ. ಆಧಾರ್ ಸಂಖ್ಯೆ ಇಲ್ಲದಿದ್ದರೂ ಆಧಾರ್ ನೋಂದಣಿ ಸಂಖ್ಯೆಯನ್ನಾದರೂ ನೀಡಲೇಬೇಕು. ಹೀಗಾಗಿ, ಸಮೀಕ್ಷೆ ಎದುರು ನೋಡುತ್ತಿರುವ ನಾಗರಿಕರು ತಮ್ಮ ಆಧಾರ್ ವಿವರಗಳನ್ನು ಸಿದ್ಧವಾಗಿ ಇರಿಸಿಕೊಳ್ಳುವುದು, ಸಮೀಕ್ಷೆಯನ್ನು ಸುಲಭವಾಗಿಸಲಿದೆ. ಪಡಿತರ ಚೀಟಿ ಅಥವಾ ಜಾತಿ ಪ್ರಮಾಣ ಪತ್ರ ನೀಡಿದರೂ, ಅದಕ್ಕೆ ಜೋಡಣೆಯಾಗಿರುವ ಕಾರಣಕ್ಕೆ ಆಧಾರ್‌ನ ವಿವರಗಳು ಆ್ಯಪ್‌ಗೆ ದತ್ತವಾಗುತ್ತದೆ. ಈ ಮೂರೂ ದಾಖಲೆ ಪತ್ರಗಳ ವಿವರಗಳು ಪರಸ್ಪರ ದೃಢೀಕರಣಕ್ಕೆ ಬಳಕೆಯಾಗುತ್ತವೆ. ಹೀಗಾಗಿಯೇ ಈ ಸಮೀಕ್ಷೆಗೆ ಆಧಾರ್ ಸಂಖ್ಯೆಯೇ ಆಧಾರವಾಗಿದೆ.



ರಾಜ್ಯದಲ್ಲಿ 2015ರಲ್ಲಿ ನಡೆಸಲಾದ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯಲ್ಲಿ ಸಮೀಕ್ಷಕರು ಜನರಿಂದ ಮಾಹಿತಿ ಪಡೆದರು

### ನಾಸ್ತಿಕರಿಗೂ ಉಂಟು ಜಾಗ

ಸಮೀಕ್ಷೆಗೆ ಒಳಪಡುವವರು ಧರ್ಮದ ಕಾಲಂನಲ್ಲಿ ಹಿಂದೂ ಅಥವಾ ಇಸ್ಲಾಂ ಅಥವಾ ಕ್ರೈಸ್ತ ಅಥವಾ ಜೈನ ಅಥವಾ ಬೌದ್ಧ ಅಥವಾ ಪಾರ್ಸಿ ಅಥವಾ ಸಿಖ್ ಧರ್ಮೀಯರು ಎಂದು ಆಯ್ಕೆ ಮಾಡಿಕೊಳ್ಳಲು ಅವಕಾಶ ಮಾಡಿಕೊಡಲಾಗಿದೆ. ನಾಗರಿಕರು ತಾವು ನಾಸ್ತಿಕರೆಂದೂ ಅಥವಾ ಧರ್ಮ ಗೊತ್ತಿಲ್ಲವೆಂದೂ ಆಯ್ಕೆ ಮಾಡಿಕೊಳ್ಳಬಹುದಾಗಿದೆ. ಧರ್ಮದ ಹೆಸರು ಹೇಳದೇ ಇರಲೂ ಅವಕಾಶವಿದೆ.

ಇದರ ಜತೆಯಲ್ಲಿ 'ಇತರೆ' ಎಂದು ಆಯ್ಕೆ ಮಾಡಿ, ಆ ಇತರೆ ಧರ್ಮ ಯಾವುದು ಎಂಬುದನ್ನು ನಮೂದಿಸಲೂ ಅವಕಾಶವಿದೆ. ಇದು ರಾಜ್ಯದ ಕೆಲವು ಜಾತಿ ಸಮುದಾಯಗಳಲ್ಲಿ ಗೊಂದಲಕ್ಕೆ ಕಾರಣವಾಗಿದೆ.

ಎಲ್ಲ ಜಾತಿ ಸಮುದಾಯಗಳು ತಮ್ಮ ಸಂಖ್ಯೆ ಕಡಿಮೆಯಾಗಬಾರದು ಎಂದು, ಜಾತಿಯ ಕಾಲಂನಲ್ಲಿ ಉಪಜಾತಿಯ ಹೆಸರನ್ನು ಬರೆಯಿಸಬಾರದು ಎಂದು ಕರೆ ನೀಡುತ್ತಿವೆ.

### ವೀರಶೈವರೋ, ಲಿಂಗಾಯತರೋ, ಹಿಂದೂಗಳೋ... ಗೊಂದಲದ ಗೂಡು

'ವೀರಶೈವ ಲಿಂಗಾಯತರು ಹಿಂದೂಗಳಲ್ಲ. ಹಿಂದೂ ಧರ್ಮಕ್ಕೂ ನಮಗೂ ಸಂಬಂಧವಿಲ್ಲ. ಹೀಗಾಗಿ ನಮ್ಮ ಸಮುದಾಯದ ಜನರು ಧರ್ಮದ ಕಾಲಂನಲ್ಲಿ 'ಇತರೆ' ಎಂಬುದನ್ನು ಆಯ್ಕೆ ಮಾಡಿಕೊಳ್ಳಬೇಕು. ಜತೆಗೆ 'ವೀರಶೈವ ಲಿಂಗಾಯತ ಧರ್ಮ' ಎಂದು ನಮೂದಿಸಬೇಕು. ಜಾತಿಯ ಕಾಲಂನಲ್ಲಿ 'ವೀರಶೈವ' ಅಥವಾ 'ಲಿಂಗಾಯತ' ಅಥವಾ 'ವೀರಶೈವ ಲಿಂಗಾಯತ' ಎಂದು ಬರೆಯಿಸಬೇಕು. ಉಪಜಾತಿಗಳಲ್ಲಿ, ಉಪಜಾತಿಗಳ ಹೆಸರನ್ನು ಬರೆಯಿಸಬೇಕು' ಎಂದು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಕರೆ ನೀಡಿದೆ.

ಜಾಗತಿಕ ಲಿಂಗಾಯತ ಮಹಾಸಭಾವು, 'ಲಿಂಗಾಯತರು ಹಿಂದೂಗಳಲ್ಲ, ಜತೆಗೆ ವೀರಶೈವರೂ ಅಲ್ಲ. ವೀರಶೈವರು ಮತ್ತು ಪಂಚಾಚಾರ್ಯರು ಬಸವಣ್ಣನನ್ನು ಅನುಸರಿಸುವುದಿಲ್ಲ. ಹೀಗಾಗಿ ಲಿಂಗಾಯತರಿಗೂ ವೀರಶೈವರಿಗೂ ಸಂಬಂಧವಿಲ್ಲ. ಲಿಂಗಾಯತರು ಧರ್ಮದ ಕಾಲಂನಲ್ಲಿ 'ಇತರೆ' ಎಂಬುದನ್ನು ಆಯ್ಕೆ ಮಾಡಿ, 'ಲಿಂಗಾಯತ ಧರ್ಮ' ಎಂದು ಬರೆಯಿಸಬೇಕು. ಜಾತಿಯ ಕಾಲಂನಲ್ಲಿ ಲಿಂಗಾಯತ ಎಂದು ಬರೆಯಿಸಬೇಕು. ಉಪಜಾತಿಯ ಕಾಲಂನಲ್ಲಿ ಉಪಜಾತಿಗಳ ಹೆಸರನ್ನು ಬರೆಯಿಸಬೇಕು' ಎಂದು ಕರೆ ನೀಡಿದೆ.

ವೀರಶೈವ, ಲಿಂಗಾಯತ ಸಮುದಾಯದ ಕೆಲ ಸ್ವಾಮೀಜಿಗಳು ಮತ್ತು ರಾಜಕೀಯ ನಾಯಕರ ಮತ್ತೊಂದು ಗುಂಪು ಈಚೆಗೆ ಸಭೆ ನಡೆಸಿ, 'ನಾವು ಹಿಂದೂಗಳು. ಹೀಗಾಗಿ ಧರ್ಮದ ಕಾಲಂನಲ್ಲಿ ಹಿಂದೂ ಎಂದೇ ಬರೆಯಿಸಬೇಕು' ಎಂದು ಕರೆ ನೀಡಿದ್ದಾರೆ.

### ಕ್ರೈಸ್ತರಲ್ಲೂ ಹಿಂದೂ ಜಾತಿ

ಕ್ರೈಸ್ತ ಧರ್ಮಕ್ಕೆ ಮತಾಂತರವಾದ ಜಾತಿ ಸಮುದಾಯಗಳಿಗೆ, ಕೈಪಿಡಿಯಲ್ಲಿ ಪ್ರತ್ಯೇಕ ಹೆಸರು ನೀಡಿರುವುದಕ್ಕೆ ತೀವ್ರ ಆಕ್ಷೇಪ ವ್ಯಕ್ತವಾಗಿದೆ. ಬೆಸ್ತರು ಕ್ರಿಶ್ಚಿಯನ್, ಬ್ರಾಹ್ಮಣ ಕ್ರಿಶ್ಚಿಯನ್, ದೇವಾಂಗ ಕ್ರಿಶ್ಚಿಯನ್, ಈಡಿಗ ಕ್ರಿಶ್ಚಿಯನ್... ಹೀಗೆ ಮತಾಂತರವಾದ ಸಮುದಾಯಗಳನ್ನು ಗುರುತಿಸಲು ಪ್ರತ್ಯೇಕ ಹೆಸರು ಮತ್ತು ಕೋಡ್‌ಗಳನ್ನು ಸಮೀಕ್ಷೆಯ ಕೈಪಿಡಿಯಲ್ಲಿ ನೀಡಲಾಗಿದೆ.

ವಿರೋಧ ಪಕ್ಷ ಬಿಜೆಪಿಯು ಇದಕ್ಕೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದೆ. ಹಿಂದೂ ಧರ್ಮವನ್ನು ಒಡೆಯುವ ಹುನ್ನಾರವಿದು ಎಂದು ಆರೋಪಿಸಿದೆ. ಗುರುವಾರ ನಡೆದ ಸಚಿವ ಸಂಪುಟ ಸಭೆಯಲ್ಲೂ, ಕೆಲ ಸಚಿವರಿಂದ ಇದಕ್ಕೆ ಆಕ್ಷೇಪ ವ್ಯಕ್ತವಾಗಿದೆ ಎನ್ನಲಾಗಿದೆ. ಹೀಗಾಗಿ ಇದನ್ನು ಕೈಬಿಡಲು ಮುಖ್ಯಮಂತ್ರಿ ಸೂಚಿಸಿದ್ದಾರೆ. ಮುಸ್ಲಿಮರ 100ಕ್ಕೂ ಹೆಚ್ಚು ಜಾತಿಗಳನ್ನು ಈ ಕೈಪಿಡಿಯಲ್ಲಿ ಪಟ್ಟಿ ಮಾಡಲಾಗಿದೆ. ಇದಕ್ಕೂ ಆಕ್ಷೇಪ ವ್ಯಕ್ತವಾಗಿದೆ.

### ಒಕ್ಕಲಿಗರು, ಕುರುಬರ ವಾದ

ಒಕ್ಕಲಿಗ ಸಮುದಾಯದ ನಾಯಕರು ಸಭೆ ನಡೆಸಿ, ಜಾತಿಯ ಕಾಲಂನಲ್ಲಿ ಯಾರೂ ಉಪಜಾತಿಯ ಹೆಸರನ್ನು ಬರೆಯಿಸಬಾರದು. ಒಕ್ಕಲಿಗ ಎಂದೇ ಬರೆಯಿಸಿ, ಉಪಜಾತಿಯ ಕಾಲಂನಲ್ಲಿ ಮಾತ್ರವೇ ಉಪಜಾತಿಯ ಹೆಸರನ್ನು ಬರೆಯಿಸಬೇಕು ಎಂದು ತಮ್ಮ ಸಮುದಾಯದ ಜನರಿಗೆ ಸಂದೇಶ ರವಾನಿಸಿದ್ದಾರೆ. ಕುರುಬ ಸಮುದಾಯದ ಸ್ವಾಮೀಜಿ ಮತ್ತು ನಾಯಕರೂ ತಮ್ಮ ಸಮುದಾಯದ ಎಲ್ಲ ಉಪಜಾತಿ ಸಮುದಾಯಗಳಿಗೆ ಇದೇ ರೀತಿಯ ಕರೆ ನೀಡಿದ್ದಾರೆ.

#### ಈಡಿಗರ ವಾದವೇನು?

ಈಡಿಗ ಸಮುದಾಯದ ನಾಯಕರೂ, 'ಈಡಿಗರು, ಬಿಲ್ಲವರು, ದೀವರು, ಹಳೆಪೈಕದವರು ಜಾತಿಯ ಕಾಲಂನಲ್ಲಿ 'ಈಡಿಗ' ಎಂದೇ ಬರೆಯಿಸಬೇಕು. ದೀವರು ಉಪಜಾತಿಯ ಕಾಲಂನಲ್ಲಿ ಮಾತ್ರ 'ದೀವರು' ಎಂದು ಬರೆಯಿಸಬೇಕು' ಎಂದು ಕರೆ ನೀಡಿದ್ದಾರೆ.

### ಸಹಾಯವಾಣಿ

ಸಮೀಕ್ಷೆಗೆ ಸಂಬಂಧಿಸಿದಂತೆ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ರಾಜ್ಯಮಟ್ಟದ ಸಹಾಯವಾಣಿಯನ್ನು ತೆರೆದಿದೆ.

**8050770004**

ಸಮೀಕ್ಷೆ ಸಂದರ್ಭದಲ್ಲಿ ಎದುರಾಗುವ ಸಮಸ್ಯೆಗಳ ಕುರಿತು ಸಮೀಕ್ಷಕರು/ ಮೇಲ್ವಿಚಾರಕರು/ ಸಾರ್ವಜನಿಕರು ಸಹಾಯವಾಣಿಯನ್ನು ಸಂಪರ್ಕಿಸಿ ಸ್ಪಷ್ಟೀಕರಣ/ಸಹಾಯ ಪಡೆದುಕೊಳ್ಳಬಹುದಾಗಿದೆ. ತಾಂತ್ರಿಕ (ಮೊಬೈಲ್ ಆ್ಯಪ್) ವಿಷಯಗಳಿಗಾಗಿ ಕೂಡ ಇದೇ ಸಹಾಯವಾಣಿಯನ್ನು ಸಂಪರ್ಕಿಸಬಹುದು.

### ಪುರುಷನಷ್ಟೇ ಕುಟುಂಬದ ಮುಖ್ಯಸ್ಥ

ಈ ಸಮೀಕ್ಷೆಯಲ್ಲಿ ಕುಟುಂಬದ ಮುಖ್ಯಸ್ಥನ ವಿವರ ಸಲ್ಲಿಸಿದ ನಂತರವೇ ಇತರರ ವಿವರ ಸಲ್ಲಿಸಲು ಸಾಧ್ಯ. ಪುರುಷನನ್ನು ಮಾತ್ರ ಕುಟುಂಬದ ಮುಖ್ಯಸ್ಥರನ್ನಾಗಿ ನಮೂದಿಸುವ ರೀತಿಯಲ್ಲಿ ಸಮೀಕ್ಷಾ ಆ್ಯಪ್ ಅನ್ನು ರೂಪಿಸಲಾಗಿದೆ. ಮಹಿಳೆಯೊಬ್ಬರು ತಾನು ಕುಟುಂಬದ ಮುಖ್ಯಸ್ಥೆ ಎಂದು ನಮೂದಿಸಲು ಅವಕಾಶವಿಲ್ಲ.

ಒಂದು ಕುಟುಂಬದಲ್ಲಿ ಅತ್ಯಂತ ಹಿರಿಯ ಪುರುಷ ಮೃತಪಟ್ಟಿದ್ದರಷ್ಟೇ, ಆತನ ಪತ್ನಿಯನ್ನು ಕುಟುಂಬದ ಮುಖ್ಯಸ್ಥೆ ಎಂದು ಪರಿಗಣಿಸಲು ಅವಕಾಶ ಮಾಡಿಕೊಡಲಾಗಿದೆ. ಮತ್ತು ಈ ನಿಯಮವನ್ನೇ ಪಾಲಿಸುವಂತೆ ಸಮೀಕ್ಷಾದಾರರಿಗೆ ತರಬೇತಿ ವೇಳೆ ತಿಳಿಸಲಾಗಿದೆ. ಮಾತೃ ಪ್ರಧಾನ ಕುಟುಂಬದಲ್ಲಿ ಯಾರನ್ನು ಕುಟುಂಬದ ಮುಖ್ಯಸ್ಥರನ್ನಾಗಿ ಪರಿಗಣಿಸಬೇಕು ಎಂಬುದರ ವಿವರ ಸಮೀಕ್ಷಾ ಕೈಪಿಡಿಯಲ್ಲಿ ಇಲ್ಲ.

### 111 ಸ್ವರೂಪದ ಸ್ವಯಂ ಉದ್ಯೋಗ, 80 ಕುಲ ಕಸುಬು

ರಾಜ್ಯದ ನಾಗರಿಕರ ಆರ್ಥಿಕ ಸ್ಥಿತಿಯ ವಿವರವನ್ನು ಕರಾರುವಾಕ್ಕಾಗಿ ಸಂಗ್ರಹಿಸುವ ಉದ್ದೇಶದಿಂದ ಉದ್ಯೋಗಕ್ಕೆ ಸಂಬಂಧಿಸಿದ ಅತ್ಯಂತ ಸೂಕ್ಷ್ಮ ಮಾಹಿತಿಯನ್ನೂ ಸಮೀಕ್ಷೆಯಲ್ಲಿ ದಾಖಲಿಸಲಾಗುತ್ತದೆ. ಕೇಂದ್ರ, ರಾಜ್ಯ ಸರ್ಕಾರದ ಉದ್ಯೋಗಗಳು, ಖಾಸಗಿ ಕಂಪನಿಗಳ ಉದ್ಯೋಗಗಳು ಒಂದೆಡೆಯಾದರೆ, 111 ಸ್ವರೂಪದ ಸ್ವಯಂ ಉದ್ಯೋಗಗಳನ್ನು ಸಮೀಕ್ಷಾ ಕೈಪಿಡಿಯಲ್ಲಿ ಉಲ್ಲೇಖಿಸಲಾಗಿದೆ. ಇದರ ಹೊರತಾಗಿಯೂ ಬೇರೆ ಸ್ವರೂಪದ ಸ್ವಯಂ ಉದ್ಯೋಗಗಳು ಇದ್ದರೆ, ಅವುಗಳ ವಿವರ ನಮೂದಿಸಲು ಅವಕಾಶವಿದೆ.

ಅಗರಬತ್ತಿ ಹೊಸೆಯುವವರು, ಬೀಡಿ ಕಟ್ಟುವವರು, ಇಸ್ತ್ರಿ ಮಾಡುವವರು, ಹಿಟ್ಟಿನ ಗಿರಣಿ ನಡೆಸುವವರು, ಸೂಲಗಿತ್ತಿಯರು, ಹಣ್ಣು ವ್ಯಾಪಾರ, ಬೀದಿಬದಿ ವ್ಯಾಪಾರ, ಹೂಕಟ್ಟುವವರು ಹೀಗೆ ವೈವಿಧ್ಯಮಯ ಸ್ವಯಂ ಉದ್ಯೋಗಗಳನ್ನು ಕೈಪಿಡಿಯಲ್ಲಿ ತೋರಿಸಲಾಗಿದೆ. ಈ ಎಲ್ಲ ಉದ್ಯೋಗಗಳಿಗೂ ಪ್ರತ್ಯೇಕ ಕೋಡ್ ಸಂಖ್ಯೆ ನೀಡಲಾಗಿದೆ. ಸಮೀಕ್ಷೆಗೆ ಒಳಪಡುವವರು ಸ್ವಯಂ ಉದ್ಯೋಗದ ವಿವರ ಮತ್ತು ಕೋಡ್‌ಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಆಯ್ಕೆ ಮಾಡಿಕೊಳ್ಳಬೇಕಿದೆ.

ಕುಲ ಕಸುಬುಗಳಿಗೆ ಸಂಬಂಧಿಸಿದ ವಿವರಗಳನ್ನು ಅತ್ಯಂತ ಜಾಗರೂಕತೆಯಿಂದ ಸಂಗ್ರಹಿಸಬೇಕು. ಕುಟುಂಬಗಳ ಸಾಂಪ್ರದಾಯಿಕ ವೃತ್ತಿಗಳು ಅವರ ಆರ್ಥಿಕ, ಸಾಮಾಜಿಕ, ಶೈಕ್ಷಣಿಕ ಮತ್ತು ಆರೋಗ್ಯದ ಸ್ಥಿತಿಯನ್ನು ಅಳೆಯುವಲ್ಲಿ ಕುಲ ಕಸುಬಿನ ವಿವರ ಮಹತ್ವದ ಪಾತ್ರ ವಹಿಸುತ್ತದೆ. ಹೀಗಾಗಿ ನಾಗರಿಕರಿಗೆ ಈ ಬಗ್ಗೆ ವಿವರಿಸಿ, ಮಾಹಿತಿ ಸಂಗ್ರಹಿಸಬೇಕು ಎಂದು ಸಮೀಕ್ಷಾದಾರರಿಗೆ ಸೂಚಿಸಲಾಗಿದೆ.

ಸಫಾಯಿ ಕರ್ಮಚಾರಿಗಳು, ಸುಣ್ಣಗಾರರು, ಜಾತಗಾರರು (ಎಮ್ಮೆ ಕೂದಲು ಕತ್ತರಿಸುವವರು), ದೆವ್ವ ಭೂತ ಬಿಡಿಸುವವರು, ಸ್ಮಶಾನದಲ್ಲಿ ಗುಂಡಿ ತೆಗೆಯುವವರು, ಅರಗು ಕೆಲಸಗಾರರು, ಕಲ್ಲು ಕುಟಿಗರು, ಚರ್ಮ ಹದಗೊಳಿಸುವವರು ಹೀಗೆ ಒಟ್ಟು 80 ಸ್ವರೂಪದ ಕುಲ ಕಸುಬುಗಳನ್ನು ಕೈಪಿಡಿಯಲ್ಲಿ ನಮೂದಿಸಲಾಗಿದೆ. ಈ ಪಟ್ಟಿಯಲ್ಲಿ ಇಲ್ಲದ ಕುಲ ಕಸುಬು ಇದ್ದರೆ, ಅದನ್ನು ನಮೂದಿಸಲೂ ಅವಕಾಶವಿದೆ. ಇದರ ಜತೆಯಲ್ಲಿಯೇ ಕುಲ ಕಸುಬಿನ ಕಾರಣಕ್ಕೆ ಬಂದಿರುವ ಚರ್ಮರೋಗ, ಕರುಳು ಸಂಬಂಧಿ ಕಾಯಿಲೆ, ಮೂಳೆ ಸಂಬಂಧಿ ರೋಗ, ಕ್ಷಯ, ಅಸ್ತಮಾ, ಅಂಧತ್ವ ಸೇರಿ ಒಟ್ಟು 10 ಸ್ವರೂಪದ ಕಾಯಿಲೆಗಳ ವಿವರ ಸಂಗ್ರಹಿಸಲು ಆ್ಯಪ್‌ನಲ್ಲಿ ಅವಕಾಶ ಮಾಡಲಾಗಿದೆ.

### ಆಸಕ್ತಿಕರ ಅಂಶಗಳು

- ಯಾವುದೇ ಕುಟುಂಬದ ಸದಸ್ಯ ವಿದೇಶದಲ್ಲಿ ವಾಸವಿದ್ದರೆ, ಅವರ ವಿವರಗಳನ್ನು ಸಂಗ್ರಹಿಸಲೂ ಅವಕಾಶವಿದೆ. ಅಂತಹವರು ಯಾವ ಕಾರಣದಿಂದ ವಿದೇಶದಲ್ಲಿದ್ದಾರೆ, ವಿದೇಶದಲ್ಲಿ ಉದ್ಯೋಗದಲ್ಲಿದ್ದಾರೆಯೇ ಅಥವಾ ವಿದ್ಯಾಭ್ಯಾಸ ಮಾಡುತ್ತಿದ್ದಾರೆಯೇ ಮೊದಲಾದ ವಿವರಗಳನ್ನು ಸಂಗ್ರಹಿಸಲಾಗುತ್ತದೆ
- ಸಮೀಕ್ಷೆಗೆ ಒಳಪಡುವವರು ಒಟ್ಟು 24 ಸ್ವರೂಪದ ಚರಾಸ್ತಿಗಳ ವಿವರ ಒದಗಿಸಲು ಅವಕಾಶವಿದೆ. ಸೈಕಲ್, ದ್ವಿಚಕ್ರ ವಾಹನ, ಕಾರುಗಳು, ರೆಫ್ರಿಜರೇಟರ್, ವಾಷಿಂಗ್ ಮಷೀನ್, ಅಡಿಕೆ-ತೆಂಗು ಸುಲಿಯುವ ಯಂತ್ರಗಳ ವಿವರ ನೀಡುವುದಲ್ಲದೆ, ತಮ್ಮಲ್ಲಿರುವ ಚಿನ್ನ-ಬೆಳ್ಳಿಯ ಆಭರಣಗಳ ವಿವರವನ್ನೂ ಒದಗಿಸಬೇಕು
- ಸಾಮಾಜಿಕ ಜಾಲತಾಣ ಇನ್‌ಫ್ಲುಯೆನ್ಸರ್‌ಗಳ ವಿವರಗಳನ್ನು ಸಂಗ್ರಹಿಸಲೂ ಸಮೀಕ್ಷೆಯ ಆ್ಯಪ್‌ನಲ್ಲಿ ಅವಕಾಶವಿದೆ. ಇವರನ್ನು ಅಸಂಘಟಿತ ವಲಯದ ಉದ್ಯೋಗಿಗಳು ಎಂದು ವರ್ಗೀಕರಿಸಲಾಗಿದೆ
- ಸ್ವಿಗ್ಗಿ, ಝೊಮ್ಯಾಟೊ, ಬ್ಲಿಂಕ್‌ಇಟ್‌ನಂತಹ ಡೆಲಿವರಿ ಸೇವೆಗಳಲ್ಲಿ ಇರುವವರು, ಓಲಾ-ಉಬರ್‌ನಂತಹ ಆ್ಯಪ್ ಆಧಾರಿತ ಚಾಲಕ ವೃತ್ತಿಯಲ್ಲಿ ಇರುವವರನ್ನು ಗಿಗ್ ವರ್ಕರ್‌ಗಳು ಎಂದು ವರ್ಗೀಕರಿಸಲಾಗಿದೆ
- ಸಮೀಕ್ಷೆಗೆ ಒಳಪಡುವವರು ಅಂಗವಿಕಲರಾಗಿದ್ದಲ್ಲಿ, ಅಂಗ ವೈಕಲ್ಯದ ಸ್ವರೂಪ, ದೈನಂದಿನ ಚಟುವಟಿಕೆಗಳಿಗಾಗಿ ಅವರು ಬಳಸುವ ವಸ್ತುಗಳು, ಚಿಕಿತ್ಸೆ ವಿವರಗಳನ್ನೂ ಸಂಗ್ರಹಿಸಲಾಗುತ್ತದೆ. ಸರ್ಕಾರವು ನೀಡಿರುವ ಯುಡಿಐಡಿ ಸಂಖ್ಯೆ ಮತ್ತು ವಿವರಗಳನ್ನು ಪಡೆಯಲಾಗುತ್ತದೆ
- ನಾಗರಿಕರ ಮತದಾರರ ಗುರುತಿನ ಚೀಟಿ (ಎಪಿಕ್) ವಿವರಗಳನ್ನೂ ಪಡೆಯಲಾಗುತ್ತದೆ. ಎಪಿಕ್ ಚೀಟಿ ಇಲ್ಲದಿದ್ದರೆ, ನೋಂದಣಿ ಏಕೆ ಮಾಡಿಸಿಲ್ಲ ಅಥವಾ ಮುಂದೆ ಮಾಡಿಸುತ್ತಾರಾ ಎಂಬ ಮಾಹಿತಿಯನ್ನು ಸಂಗ್ರಹಿಸಲಾಗುತ್ತದೆ
- ಗೃಹಲಕ್ಷ್ಮಿ ₹2000 — ಗ್ಯಾರಂಟಿ ಯೋಜನೆಗಳ ಫಲಾನುಭವಿ ಆಗಿದ್ದರೆ, ಅದನ್ನು ಸಮೀಕ್ಷೆಯಲ್ಲಿ ಉಲ್ಲೇಖಿಸಬೇಕಿದೆ. ಗೃಹ ಲಕ್ಷ್ಮೀ ಯೋಜನೆ ಅಡಿ ಕುಟುಂಬದ ಯಜಮಾನಿ ಪಡೆಯುತ್ತಿರುವ ಮಾಸಿಕ ₹2,000ವನ್ನು, ಕುಟುಂಬದ ವಾರ್ಷಿಕ ಆದಾಯಕ್ಕೆ ಸೇರಿಸಬಾರದು ಎಂದು ಕಟ್ಟುನಿಟ್ಟಾಗಿ ಸೂಚಿಸಲಾಗಿದೆ
- ಆ್ಯಂಡ್ರಾಯ್ಡ್ ಫೋನ್‌ಗಳಲ್ಲಿ ಕಾರ್ಯನಿರ್ವಹಿಸುವ ಅಪ್ಲಿಕೇಷನ್ ಮೂಲಕ ದತ್ತಾಂಶ ಸಂಗ್ರಹ. ನೆಟ್‌ವರ್ಕ್ ಇಲ್ಲದಿದ್ದರೂ ಕಾರ್ಯನಿರ್ವಹಿಸುವ ರೀತಿಯಲ್ಲಿ ಅಪ್ಲಿಕೇಷನ್ ಅಭಿವೃದ್ಧಿ. ದತ್ತಾಂಶ ಮೊಬೈಲ್‌ನಲ್ಲಿ ಸಂಗ್ರಹವಾಗಿ, ನೆಟ್‌ವರ್ಕ್ ಲಭ್ಯವಾಗುತ್ತಿದ್ದಂತೆಯೇ ಅಪ್‌ಲೋಡ್ ಆಗುತ್ತದೆ
- ಕುಟುಂಬಗಳ ಸಾಲದ ವಿವರವನ್ನು ಸಮೀಕ್ಷೆ ವೇಳೆ ಕಲೆಹಾಕಲಾಗುತ್ತದೆ. ಸಾಲದ ಮೂಲ, ಯಾವ ಕಾರಣಕ್ಕಾಗಿ ಸಾಲ ಪಡೆಯಲಾಗಿದೆ, ಸಾಲದ ಸ್ವರೂಪದ ವಿವರ ಕೇಳಲಾಗುತ್ತದೆ. ಬ್ಯಾಂಕ್‌ಗಳಿಂದ ಸಾಲ ಪಡೆಯಲಾಗಿದೆಯೇ, ಕೈಸಾಲವೇ, ಮೈಕ್ರೊ ಫೈನಾನ್ಸ್‌ನಿಂದ ಪಡೆದ ಸಾಲವೇ ಅಥವಾ ಸಹಕಾರ ಸಂಘದ ಸಾಲವೇ ಎಂಬ ವಿವರಗಳನ್ನು ನೀಡಬೇಕಾಗುತ್ತದೆ
- ಸಮೀಕ್ಷೆಗೆ ಒಳಪಡುವವರು ತಮ್ಮ ಮತ್ತು ಕುಟುಂಬದ ವಾರ್ಷಿಕ ಆದಾಯದ ವಿವರವನ್ನು ನೀಡಬೇಕಾಗುತ್ತದೆ. ಆದಾಯ ತೆರಿಗೆ ಪಾವತಿದಾರರೇ ಎಂಬುದನ್ನೂ ತಿಳಿಸಬೇಕಾಗುತ್ತದೆ. ಆದರೆ ಆದಾಯಕ್ಕಾಗಲೀ, ಆದಾಯ ತೆರಿಗೆ ಪಾವತಿ ಸಂಬಂಧವಾಗಲೀ ಯಾವುದೇ ದಾಖಲೆ ನೀಡಬೇಕಿಲ್ಲ

## ❖ ಜಿಎಸ್‌ಟಿ ಪರಿಷ್ಕರಣೆ: ಸರ್ಕಾರದ ಮೇಲೆ ಆರ್ಥಿಕ ಹೊರೆ ಬೀಳಲ್ಲ -ಕ್ರಿಸಿಲ್

ಸಂದರ್ಭ: ಜಿಎಸ್‌ಟಿ ಪರಿಷ್ಕರಣೆಯಿಂದಾಗಿ ಸರ್ಕಾರದ ಮೇಲೆ ಆರ್ಥಿಕ ಹೊರೆ ಬೀಳುವ ಸಾಧ್ಯತೆಯಿಲ್ಲ ಎಂದು ರೇಟಿಂಗ್ ಸಂಸ್ಥೆ ಕ್ರಿಸಿಲ್ ತಿಳಿಸಿದೆ.

- ಜಿಎಸ್‌ಟಿ ಪರಿಷ್ಕರಣೆಯಿಂದ ಅಲ್ಪಾವಧಿವರೆಗೆ ವಾರ್ಷಿಕ ₹48 ಸಾವಿರ ಕೋಟಿ ನಷ್ಟ ಉಂಟಾಗಲಿದೆ ಎಂದು ಸರ್ಕಾರ ಅಂದಾಜಿಸಿತ್ತು ಎಂದು ಕ್ರಿಸಿಲ್ ತನ್ನ ಇತ್ತೀಚಿನ ವರದಿಯಲ್ಲಿ ಹೇಳಿದೆ. ಕಳೆದ ಆರ್ಥಿಕ ವರ್ಷದಲ್ಲಿ ಜಿಎಸ್‌ಟಿ ಸಂಗ್ರಹವು ₹10.6 ಲಕ್ಷ ಕೋಟಿಯಾಗಿತ್ತು. ಆದ್ದರಿಂದ, ನಷ್ಟದ ಪ್ರಮಾಣ ಗಮನಾರ್ಹವಾಗಿ ಇಲ್ಲ ಎಂದು ಹೇಳಿದೆ.

- ಜಿಎಸ್‌ಟಿ ಮಂಡಳಿಯು ದರ ಪರಿಷ್ಕರಣೆ ಮಾಡಿರುವುದರಿಂದ ನಾಲ್ಕು ಹಂತದ ತೆರಿಗೆ, ಎರಡು ಹಂತಕ್ಕೆ ಇಳಿಯಲಿದೆ. ಇದರಿಂದ ಸರಕು ಮತ್ತು ಸೇವೆಗಳ ದರ ಕಡಿಮೆಯಾಗಲಿದೆ ಎಂದು ಹೇಳಿದೆ.
- ಜಿಎಸ್‌ಟಿ ಪರಿಷ್ಕರಣೆ ಮೊದಲು ಶೇ 18ರ ಹಂತದ ತೆರಿಗೆಯಿಂದ ಶೇ 75ರಷ್ಟು ವರಮಾನ ಬರುತ್ತಿತ್ತು. ಶೇ 6ರಷ್ಟು ವರಮಾನ ಶೇ 12ರ ಹಂತದ ತೆರಿಗೆಯಿಂದ ಮತ್ತು ಶೇ 15ರಷ್ಟು ವರಮಾನ ಶೇ 28 ಹಂತದಿಂದ ಬರುತ್ತಿತ್ತು.

## ನೇರ ತೆರಿಗೆ ಸಂಗ್ರಹ ಹೆಚ್ಚಳ

- ಪ್ರಸಕ್ತ ಆರ್ಥಿಕ ವರ್ಷದ ಏಪ್ರಿಲ್ 1ರಿಂದ ಸೆಪ್ಟೆಂಬರ್ 17ರ ವರೆಗೆ ದೇಶದ ನಿವ್ವಳ ನೇರ ತೆರಿಗೆ ಸಂಗ್ರಹವು ₹10.82 ಲಕ್ಷ ಕೋಟಿ ಆಗಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ.
- 2024–25ರ ಆರ್ಥಿಕ ವರ್ಷದ ಇದೇ ಅವಧಿಯಲ್ಲಿ ₹9.91 ಲಕ್ಷ ಕೋಟಿ ತೆರಿಗೆ ಸಂಗ್ರಹವಾಗಿತ್ತು. ಇದಕ್ಕೆ ಹೋಲಿಸಿದರೆ ಸಂಗ್ರಹವು ಶೇ 9ರಷ್ಟು ಹೆಚ್ಚಳವಾಗಿದೆ ಎಂದು ತಿಳಿಸಿದೆ. ಹೆಚ್ಚಿದ ಮುಂಗಡ ತೆರಿಗೆ ಮತ್ತು ಮರುಪಾವತಿ ಯಲ್ಲಿನ (ರೀಫಂಡ್) ಇಳಿಕೆಯು ಸಂಗ್ರಹ ಹೆಚ್ಚಲು ಕಾರಣವಾಗಿದೆ ಎಂದು ತಿಳಿಸಿದೆ.
- ಏಪ್ರಿಲ್ 1ರಿಂದ ಸೆಪ್ಟೆಂಬರ್ 17ರ ವರೆಗೆ ಮರುಪಾವತಿ ಪ್ರಮಾಣ ಶೇ 24ರಷ್ಟು ಇಳಿಕೆಯಾಗಿದ್ದು, ₹1.61 ಲಕ್ಷ ಕೋಟಿಯಾಗಿದೆ. ಈ ಅವಧಿಯಲ್ಲಿ ಮುಂಗಡ ತೆರಿಗೆ ಸಂಗ್ರಹವು ಶೇ 6ರಷ್ಟು ಹೆಚ್ಚಳವಾಗಿದ್ದು, ₹3.52 ಲಕ್ಷ ಕೋಟಿ ದಾಟಿದೆ. ಆದರೆ, ಕಾರ್ಪೊರೇಟ್‌ಯೇತರ ತೆರಿಗೆ ಸಂಗ್ರಹವು ಶೇ 7ರಷ್ಟು ಇಳಿಕೆಯಾಗಿದ್ದು, ₹96,784 ಕೋಟಿಯಾಗಿದೆ.
- ನಿವ್ವಳ ಕಾರ್ಪೊರೇಟ್ ತೆರಿಗೆ ಸಂಗ್ರಹವು ₹4.72 ಲಕ್ಷ ಕೋಟಿ ಮತ್ತು ವೈಯಕ್ತಿಕ ಆದಾಯ ತೆರಿಗೆಯನ್ನು ಒಳಗೊಂಡಿರುವ ಕಾರ್ಪೊರೇಟ್‌ಯೇತರ ತೆರಿಗೆ, ₹5.84 ಲಕ್ಷ ಕೋಟಿಯಷ್ಟಾಗಿದೆ.
- ಷೇರು ವಹಿವಾಟು ತೆರಿಗೆ (ಎಸ್‌ಟಿಟಿ) ಸಂಗ್ರಹವು ₹26,306 ಕೋಟಿಗೆ ಹೆಚ್ಚಳವಾಗಿದೆ: ಪ್ರಸಕ್ತ ಆರ್ಥಿಕ ವರ್ಷದಲ್ಲಿ ಕೇಂದ್ರ ಸರ್ಕಾರವು ನೇರ ತೆರಿಗೆ ಮೂಲಕ ₹25.20 ಲಕ್ಷ ಕೋಟಿ ಸಂಗ್ರಹದ ಗುರಿ ಹೊಂದಿದೆ. ಕಳೆದ ಆರ್ಥಿಕ ವರ್ಷಕ್ಕೆ ಹೋಲಿಸಿದರೆ ಶೇ 12ರಷ್ಟು ಹೆಚ್ಚಳವಿದು. ಎಸ್‌ಟಿಟಿ ಮೂಲಕ ₹78 ಸಾವಿರ ಕೋಟಿ ಸಂಗ್ರಹಿಸಲು ಯೋಜಿಸಿದೆ.

## ❖ ಗಾಜಾದಲ್ಲಿ ಕದನವಿರಾಮ: ನಿರ್ಣಯದ ವಿರುದ್ಧ ಅಮೆರಿಕ ಮತ

ಸಂದರ್ಭ: ಭಯೋತ್ಪಾದನೆಯ ಕುರಿತು ಭದ್ರತಾ ಮಂಡಳಿಯು ಕಣ್ಣುಮುಚ್ಚಿ ಕುಳಿತರೂ ಇಸ್ರೇಲ್ ಮಾತ್ರ ಹಮಾಸ್ ವಿರುದ್ಧದ ತನ್ನ ಯುದ್ಧವನ್ನು ಮುಂದುವರಿಸುತ್ತದೆ ಡ್ಯಾನಿ ಡ್ಯಾನನ್, ವಿಶ್ವ ಸಂಸ್ಥೆಗೆ ಇಸ್ರೇಲ್ ರಾಯಭಾರಿ.

- ‘ಗಾಜಾದಲ್ಲಿ ತಕ್ಷಣದಲ್ಲಿ ಕದನವಿರಾಮ ಘೋಷಿಸ ಬೇಕು ಮತ್ತು ಈ ಕದನವಿರಾಮವು ಶಾಶ್ವತವಾಗಿ ಇರಬೇಕು’ ಎಂಬ ವಿಶ್ವ ಸಂಸ್ಥೆಯ ಭದ್ರತಾ ಮಂಡಳಿಯ ನಿರ್ಣಯಕ್ಕೆ ವಿರುದ್ಧವಾಗಿ ಅಮೆರಿಕವು ಮತ್ತೊಮ್ಮೆ ತನ್ನ ಪರಮಾಧಿಕಾರವನ್ನು ಚಲಾಯಿಸಿತು.
- ನಿರ್ಣಯದಲ್ಲಿ ಹಮಾಸ್ ಬಂಡುಕೋರರನ್ನು ಸೂಕ್ತ ರೀತಿಯಲ್ಲಿ ಖಂಡಿಸಲಾಗಿಲ್ಲ ಎಂಬುದು ಅಮೆರಿಕದ ಆಕ್ಷೇಪ. ಆದರೆ, ಮಂಡಳಿಯ ಉಳಿದೆಲ್ಲ ಪ್ರಮುಖ 14 ದೇಶಗಳು ನಿರ್ಣಯದ ಪರವಾಗಿ ಮತ ಚಲಾಯಿಸಿವೆ. ‘ಗಾಜಾದಲ್ಲಿ ಮಾನವೀಯ ಪರಿಸ್ಥಿತಿಯು ದುರಂತಮಯವಾಗಿದೆ. ಮೂಲಭೂತ ಅಗತ್ಯಗಳನ್ನು ಪೂರೈಸಲು ವಿಧಿಸಿರುವ ಎಲ್ಲ ನಿರ್ಬಂಧವನ್ನು ಇಸ್ರೇಲ್ ತೆಗೆದು ಹಾಕಬೇಕು’ ಎಂದು ಇವುಗಳು ಹೇಳಿವೆ.
- ‘ಹಮಾಸ್‌ನ ಕ್ರಿಯೆಗಳನ್ನು ಖಂಡಿಸಲಾಗಿಲ್ಲ ಅಥವಾ ತನ್ನನ್ನು ತಾನು ರಕ್ಷಿಸಿಕೊಳ್ಳಲು ಇಸ್ರೇಲ್‌ಗೆ ಹಕ್ಕಿದೆ ಎಂಬುದನ್ನೂ ಉಲ್ಲೇಖಿಸಲಾಗಿಲ್ಲ. ಹಮಾಸ್‌ಗೆ ಅನುಕೂಲವಾಗುವ ತಪ್ಪು ಸಂಕಥನಕ್ಕೆ ಈ ನಿರ್ಣಯವು ಅಂಕಿತ ಹಾಕಿದೆ. ಇದಕ್ಕೆ ಈ ಮಂಡಳಿಯ ಇತರ ಸದಸ್ಯರು ದನಿಗೂಡಿಸಿದ್ದಾರೆ’ ಎಂದು ಮತಚಲಾಯಿಸುವುದಕ್ಕೂ ಮುನ್ನ ಅಮೆರಿಕದ ನೀತಿ ಸಲಹೆಗಾರ ಮಾರ್ಗನ್ ಒರ್ಟಗಸ್ ಹೇಳಿದರು.

## ❖ 474 ಪಕ್ಷಗಳನ್ನು ಪಟ್ಟಿಯಿಂದ ಕೈಬಿಟ್ಟ ಆಯೋಗ

ಸಂದರ್ಭ: ನೋಂದಾಯಿತ ಮತ್ತು ಮಾನ್ಯತೆ ಪಡೆಯದ 474 ರಾಜಕೀಯ ಪಕ್ಷಗಳನ್ನು ಪಟ್ಟಿಯಿಂದ ತೆಗೆದು ಹಾಕಲಾಗಿದೆ ಎಂದು ಚುನಾವಣಾ ಆಯೋಗ ತಿಳಿಸಿದೆ.

- ಈ ಪಕ್ಷಗಳು ಕಳೆದ ಆರು ವರ್ಷಗಳಲ್ಲಿ ಯಾವುದೇ ಚುನಾವಣೆ ಯಲ್ಲಿ ಭಾಗವಹಿಸಿಲ್ಲ ಹಾಗೂ ಮಾನದಂಡಗಳನ್ನು ಪಾಲಿಸದ ಕಾರಣ ಈ ಕ್ರಮ ಕೈಗೊಳ್ಳಲಾಗಿದೆ ಎಂದು ಅದು ಹೇಳಿದೆ. ಇದರೊಂದಿಗೆ ಕಳೆದ 2 ತಿಂಗಳಲ್ಲಿ ಒಟ್ಟು 808 ಪಕ್ಷಗಳನ್ನು ಪಟ್ಟಿಯಿಂದ ಕೈಬಿಡಲಾಗಿದೆ. ಆ.9 ರಂದು ಮೊದಲ ಹಂತದಲ್ಲಿ 334 ಪಕ್ಷಗಳನ್ನು ಕೈಬಿಡಲಾಯಿತು.

## ❖ ಲೈಲ್ಸ್ ಮಿಂಚು: ಅಮೆರಿಕದ ನೋವಾ ಲೈಲ್ಸ್ ಸತತ ನಾಲ್ಕನೇ ಬಾರಿ ವಿಶ್ವ ಅಥ್ಲೆಟಿಕ್ಸ್ ಚಾಂಪಿಯನ್‌ಷಿಪ್‌ನ 200 ಮೀ. ಓಟದಲ್ಲಿ ಚಿನ್ನದ ಪದಕ ಗೆಲ್ಲುವ ಮೂಲಕ ದಿಗ್ಗಜ ಅಥ್ಲೀಟ್ ಉಸೇನ್ ಬೋಲ್ಟ್ ದಾಖಲೆ ಸರಿಗಟ್ಟಿದರು.

- ಅಮೆರಿಕದ ಓಟಗಾರ ನೋವಾ ಲೈಲ್ಸ್ ಅವರು ಸತತ ನಾಲ್ಕನೇ ಬಾರಿ ವಿಶ್ವ ಅಥ್ಲೆಟಿಕ್ಸ್ ಚಾಂಪಿಯನ್‌ಷಿಪ್‌ನ 200 ಮೀ. ಓಟದಲ್ಲಿ ಚಿನ್ನ ಗೆಲ್ಲುವ ಮೂಲಕ ದಿಗ್ಗಜ ಅಥ್ಲೀಟ್ ಉಸೇನ್ ಬೋಲ್ಟ್ ಅವರ ದಾಖಲೆಯನ್ನು ಸರಿಗಟ್ಟಿದರು. ನ್ಯಾಷನಲ್ ಸ್ಟೇಡಿಯಮ್‌ನಲ್ಲಿ ನಡೆದ ಈ ಸ್ಪರ್ಧೆಯಲ್ಲಿ ಲೈಲ್ಸ್ 19.52 ಸೆ.ಗಳಲ್ಲಿ ಗುರಿಮುಟ್ಟಿದರು.



ಅಮೆರಿಕದ ನೋವಾ ಲೈಲ್ಸ್ (ಎಡ) ಡಚ್ ಓಟಗಾರ್ತಿ ಫೆಮ್ಕೆ ಬೋಲ್    ಎಎಫ್‌ಪಿ ಚಿತ್ರಗಳು

- **ಜಮೈಕದ ದಂತಕಥೆ ಉಸೇನ್ ಬೋಲ್ಟ್ 200 ಮೀ. ಓಟದಲ್ಲಿ ಸತತ ನಾಲ್ಕು ಬಾರಿ ಚಿನ್ನ ಗೆದ್ದಿದ್ದರು. 2009 ರಿಂದ 2015ರ ಅವಧಿಯಲ್ಲಿ ಅವರು ವಿಶ್ವ ಕೂಟದಲ್ಲಿ 100 ಮೀ ಮತ್ತು 200 ಮೀ. ಓಟದಲ್ಲಿ ಪಾರಮ್ಯ ಮೆರೆದಿದ್ದರು. ವಿಶ್ವ ಕೂಟದಲ್ಲಿ 11 ಚಿನ್ನ ಮತ್ತು ಒಲಿಂಪಿಕ್ಸ್ ನಲ್ಲಿ ಎಂಟು ಚಿನ್ನ ಬಾಚಿದ್ದರು.**
- ಈ ಕೂಟದ 100 ಮೀ. ಓಟದಲ್ಲಿ ಲೈಲ್ಸ್ ಕಂಚಿನ ಪದಕ ಗೆದ್ದುಕೊಂಡಿದ್ದು, 200 ಮೀ. ಓಟವನ್ನು ನಿರೀಕ್ಷೆಯಂತೆ ಗೆದ್ದರು. ಸ್ವದೇಶದ ಕೆನ್ನಿ ಬೆಡ್ನಾರೆಕ್ 19.58 ಸೆ.ಗಳಲ್ಲಿ ಗುರಿತಲುಪಿ ಬೆಳ್ಳಿ ಗೆದ್ದರೆ, ಜಮೈಕಾದ ಬ್ರಯಾನ್ ಲೆವೆಲ್ (19.64 ಸೆ.) ಕಂಚಿನ ಪದಕ ಗೆದ್ದುಕೊಂಡರು.
- ಒಲಿಂಪಿಕ್ ಚಾಂಪಿಯನ್, ಬೋಟ್ಸ್‌ವಾನಾದ ಲೆಟ್ಸಿಲೆ ಟೆಬಾಗೊ ಸೆಕೆಂಡಿನ ನೂರನೇ ಒಂದು ಭಾಗದಿಂದ ಪದಕ ಕಳೆದುಕೊಂಡರು. ಕಣದಲ್ಲಿದ್ದ 20 ವರ್ಷದೊಳಗಿನ ಏಕೈಕ ಅಥ್ಲೀಟ್ ಅಂಗಿಲ್ಲಾ (ಪೂರ್ವ ಕೆರಿಬಿಯನ್ ಭಾಗ) ಸಂಜಾತ ಬ್ರಿಟನ್‌ನ ಝರ್ನೆಲ್ ಹ್ಯೂಸ್ (19.78 ಸೆ.) ಐದನೇ ಸ್ಥಾನ ಪಡೆದರು.
- 28 ವರ್ಷ ವಯಸ್ಸಿನ 'ಷೋ ಮ್ಯಾನ್' ಲೈಲ್ಸ್, ಸೆಮಿಫೈನಲ್‌ನಲ್ಲಿ ದಾಖಲೆಯ 19.51 ಸೆ.ಗಳಲ್ಲಿ ಓಡಿದ್ದರು. ಫೈನಲ್‌ನಲ್ಲಿ ಆರನೇ ಲೇನ್‌ನಲ್ಲಿ ಓಡಿ, ಗುರಿಮುಟ್ಟಿದ ತಕ್ಷಣ, ಕೈಗಳನ್ನು ಮೇಲೆತ್ತಿ ಅರೆಕ್ಷಣ ಮುಗಿಲಿನತ್ತ ದಿಟ್ಟಿಸಿದರು.
- ಮೆಲಿಸಾಗೆ ಸ್ಪ್ರಿಂಟ್ ಡಬಲ್: ಅಮೆರಿಕದ ಮೆಲಿಸ್ಸಾ ಜೆಫರ್ಸನ್-ವೂಡೆನ್ ಅವರು ಮಹಿಳೆಯರ 200 ಮೀ. ಓಟವನ್ನು 21.68 ಸೆ.ಗಳಲ್ಲಿ ಪೂರೈಸಿ ವಿಶ್ವ ಚಾಂಪಿಯನ್‌ಷಿಪ್‌ನಲ್ಲಿ ಸ್ಪ್ರಿಂಟ್ ಡಬಲ್ (100 ಮತ್ತು 200 ಮೀ. ಓಟ) ಸಾಧಿಸಿದರು. ಅವರು ಕೂಟದ ಮೂರನೇ ದಿನ 100 ಮೀ. ಓಟದಲ್ಲಿ ವಿಜೇತರಾಗಿದ್ದರು.
- ಶೆಲ್ಲಿ-ಆ್ಯನ್ ಫ್ರೇಸರ್-ಪ್ರೈಸ್ 2013ರಲ್ಲಿ ಸ್ಪ್ರಿಂಟ್ ಡಬಲ್ ಸಾಧಿಸಿದ್ದರು. ನಂತರ ಮೆಲಿಸ್ಸಾ ಈ ಸಾಧನೆಗೆ ಪಾತ್ರರಾಗಿದ್ದಾರೆ.

- ಬೋಲ್‌ಗೆ ಚಿನ್ನ: ಡಚ್ ಓಟಗಾರ್ತಿ ಫೆಮ್ಕೆ ಬೋಲ್ ಅವರು ಮಹಿಳೆಯರ 400 ಮೀ. ಹರ್ಡಲ್ಸ್ ಓಟದ ಸ್ಪರ್ಧೆಯನ್ನು 51.54 ಸೆ.ಗಳಲ್ಲಿ ಓಡಿ ಗೆಲ್ಲುವ ಮೂಲಕ ಚಿನ್ನದ ಪದಕವನ್ನು ತಮ್ಮಲ್ಲೇ ಉಳಿಸಿಕೊಂಡರು.
- ಎರಡು ಬಾರಿಯ ಒಲಿಂಪಿಕ್ ಚಾಂಪಿಯನ್ ಹಾಗೂ ವಿಶ್ವದಾಖಲೆ ಹೊಂದಿರುವ ಸಿಡ್ನಿ ಮೆಕ್‌ಲಾಫ್ಲಿನ್ ಲೆವ್ರೊನ್ ಸ್ಪರ್ಧೆಯಿಂದ ಹಿಂದೆಸರಿದರು. ಅವರು 400 ಮೀ.ಫೈನಲ್ ಓಟದ ಕಡೆ ಗಮನ ಕೇಂದ್ರೀಕರಿಸುವ ಸಲುವಾಗಿ ಹರ್ಡಲ್ಸ್‌ನಿಂದ ಹಿಂದೆಸರಿದಿದ್ದರು.
- ಬೋಲ್‌ಗೆ ತೀವ್ರ ಪೈಪೋಟಿ ನೀಡಿದ ಅಮೆರಿಕದ ಜಾಸ್ಮಿನ್ ಜೋನ್ಸ್ (52.03 ಸೆ.) ಬೆಳ್ಳಿ ಪದಕ ಗೆದ್ದರು. ಸ್ಲೊವಾಕಿಯಾದ ಎಮ್ಮಾ ಝುಪ್ಲೆಟಲೊವಾ (53.00 ಸೆ.) ಮೂರನೇ ಸ್ಥಾನ ಗಳಿಸಿದರು.
- ಪುರುಷರ ವಿಭಾಗದಲ್ಲಿ ಒಲಿಂಪಿಕ್ ಚಾಂಪಿಯನ್ ರಾಯ್ ಬೆಂಜಮಿನ್ 46.52 ಸೆ.ಗಳಲ್ಲಿ ಗುರಿತಲುಪಿ ಚಿನ್ನ ಗೆದ್ದುಕೊಂಡರು. ಜೊತೆಗೆ ಅನರ್ಹತೆ ಆತಂಕದಿಂದ ಬಚಾವಾದರು.
- ಅಮೆರಿಕದ 28 ವರ್ಷ ವಯಸ್ಸಿನ ಓಟಗಾರ, ಅಂತಿಮ ತಡೆ ದಾಟುವಾಗ ಹರ್ಡಲ್ಸ್ ಬಿದ್ದು, ಇತರ ಅಥ್ಲೀಟುಗಳ ಓಟದ ಮೇಲೆ ಪರಿಣಾಮವಾಯಿತು. ಆದರೆ ಅಂತಿಮವಾಗಿ ಫಲಿತಾಂಶ ಪ್ರಕಟವಾದಾಗ ಅವರು ಹೆಸರು ಅಗ್ರಸ್ಥಾನದಲ್ಲೇ ಉಳಿಯಿತು.
- ಬ್ರೆಜಿಲ್‌ನ ಅಲಿಸನ್ ಡಾಸ್ ಸಂಟೋಸ್ (46.84 ಸೆ.) ಎರಡನೇ ಸ್ಥಾನ ಪಡೆದರೆ, ಕತಾರಿನ ಅಬ್ದುರೆಹಮಾನ್ ಸಂಬಾ (47.06 ಸೆ.) ಕಂಚಿನ ಪದಕ ತಮ್ಮದಾಗಿಸಿಕೊಂಡರು.

**----------------------------------------------ಶುಭವಂದನೆಗಳು ----------------------------------------------**